Volume : 9 | Issue : 204 | November : 03 : 2026 : Tuesday
ಸಂಪುಟ : 9 | ಸಂಚಿಕೆ : 204 | ನವಂಬರ್ : 03 : 2026 : ಮಂಗಳವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/20 8481



ಕನ್ನಡ ಚಿತ್ರರಂಗದ ಖ್ಯಾತ ನಟ ಯಶ್ ಮುಖ್ಯಭೂಮಿಕೆಯ ಬಹುನಿರೀಕ್ಷಿತ ಚಿತ್ರ 'ರಾಮಾಯಣ' ಮುಂಗಡ ವ್ಯವಹಾರದಲ್ಲಿ ಸಕಾರಾತ್ಮಕ ಸ್ಪಂದನೆ ಗಳಿಸಿದೆ. ಅಡ್ವಾನ್ಸ್ ಬುಕಿಂಗ್‌ಗೆ ಭಾರತ ಮಾತ್ರವಲ್ಲ ವಿದೇಶಗಳಲ್ಲಿಯೂ ಉತ್ತಮ ಪ್ರತಿಕ್ರಿಯೆ ದೊರೆತಿದೆ. ನಿತೇಶ್ ತಿವಾರಿ ನಿರ್ದೇಶನದ ಈ ಮಹಾಕಾವ್ಯವು ಬ್ಲಾಕ್ ಸೀಟುಗಳೂ ಸೇರಿದಂತೆ ಈಗಾಗಲೇ ಮುಂಗಡ ಮಾರಾಟದಲ್ಲಿ 46.63 ಕೋಟಿ ರೂಪಾಯಿ ಸಂಪಾದಿಸಿದೆ.

ಸ್ತನ ಕ್ಯಾನ್ಸರ್ ಪತ್ತೆಯಲ್ಲಿ ಎಐ ತಂತ್ರಜ್ಞಾನ ನೆರವು | ಪುಟ 2

ಡಿಕೆಶಿ- ನಾಯ್ಡು ಮಾತುಕತೆ: ಆಂಧ್ರಕ್ಕೆ ರಾಜ್ಯದ ನೆರವು | ಪುಟ 4



■ ಸುದ್ದಿ ಚುಟುಕು

ಕೃಪಾ ಆಳ್ವಾ ಸೇರಿ ಮೂವರಿಗೆ ನಿರೀಕ್ಷಣಾ ಜಾಮೀನು

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಉಚ್ಚಾಟಿತ ಕಾಂಗ್ರೆಸ್ ನಾಯಕಿ ಕೃಪಾ ಆಳ್ವಾ ಸೇರಿದಂತೆ ಮೂವರಿಗೆ ಬೆಂಗಳೂರು ಕೋರ್ಟ್ ಷರತ್ತುಬದ್ಧ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಸೃಷ್ಟಿಸಿರುವ ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೆಸರು ಕೇಳಿ ಬಂದಿದ್ದು, ಮಹತ್ವದ ತಿರುವು ಪಡೆದುಕೊಂಡಿದೆ.

ಇದರ ಬೆನ್ನಲ್ಲೇ ಪ್ರಕರಣದ ಪ್ರಮುಖ ಆರೋಪಿಗಳಾಗಿರುವ ಕೃಪಾ ಆಳ್ವಾ, ವಿನೋದ್ ಕುಮಾರ್ ಹಾಗೂ ಪ್ರಶಾಂತ್ ಕುಮಾರ್ ಅವರಿಗೆ ಬೆಂಗಳೂರಿನ 66ನೇ ಸಿಸಿಹೆಚ್ ಕೋರ್ಟ್ ನಿರೀಕ್ಷಣಾ ಜಾಮೀನು ನೀಡಿ ಆದೇಶ ಹೊರಡಿಸಿದೆ.

ತನಿಖಾಧಿಕಾರಿಗಳುತನಿಖೆಗೆ ಕರೆದಾಗ ಆರೋಪಿಗಳು ತನಿಖೆಗೆ ಸಹಕರಿಸಬೇಕು. ಸಾಕ್ಷಿಗಳಿಗೆ ಯಾವುದೇ ರೀತಿಯ ಬೆದರಿಕೆ ಅಥವಾ ಪ್ರಭಾವ ಬೀರುವಂತಿಲ್ಲ ಎಂದು ಕೋರ್ಟ್ ಷರತ್ತು ವಿಧಿಸಿದೆ.

ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕೃಪಾ ಆಳ್ವಾ ಅವರಿಗೆ ನೋಟಿಸ್ ನೀಡಿದರೂ ಪ್ರತಿಕ್ರಿಯಿಸಿರಲಿಲ್ಲ. ಹೀಗಾಗಿ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಅವರ ಸೂಚನೆ ಮೇರೆಗೆ ಕೃಪಾ ಆಳ್ವಾ ಅವರನ್ನ ಕಾಂಗ್ರೆಸ್‌ನಿಂದ ಉಚ್ಚಾಟನೆ ಮಾಡಲಾಗಿದೆ.

ಈ ಮೊದಲು ಮತ್ತೋರ್ವ ಆರೋಪಿ ಪತ್ರಕರ್ತ ರಾಕೇಶ್ ಶೆಟ್ಟಿಗೂ ಜಾಮೀನು ಮಂಜೂರಾಗಿದ್ದನ್ನು ಸ್ಮರಿಸಬಹುದು.

ಬಿವೈವಿ ವಾಗ್ದಾಳಿ: ಸಾರ್ವಜನಿಕ ಕ್ಷಮೆಗೆ ಬಿಕೆಹೆಚ್ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸುವಾಗ, ವಿಜಯೇಂದ್ರ ಅವರು ಏಕವಚನದಲ್ಲಿ "ಈ ನನ್ನ ಮಕ್ಕಳು ಕಾಂಗ್ರೆಸ್‌ನವರು ಇದ್ದಾರಲ್ಲಾ..." ಎಂದು ಮಾತನಾಡಿದ್ದರು. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಬಿ.ಕೆ. ಹರಿಪ್ರಸಾದ್, "ವಿಜಯೇಂದ್ರ ಅವರು ಮುಂದಿನ 3 ದಿನಗಳ ಒಳಗೆ ಸಾರ್ವ ಜನಿಕವಾಗಿ ಕ್ಷಮೆಯಾಚಿಸಬೇಕು" ಎಂದು ಆಗ್ರಹಿಸಿದ್ದಾರೆ.

ರಾಜ್ಯ ಸರ್ಕಾರದ ಮೀಸಲಾತಿ ಹೆಚ್ಚಳದ ಪ್ರಕರಣಗಳು ಹಾಗೂ ಹಾಲಿನ ದರ ಏರಿಕೆಯ ಕುರಿತು, ದಾವಣಗೆರೆಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, "ಈ ನನ್ ಮಕ್ಕಳು ಕಾಂಗ್ರೆಸ್ ನವರು ಇದ್ದಾರಲ್ಲಾ..." ಎಂದು ಏಕವಚನದಲ್ಲೇ ಲೇವಡಿ ಮಾಡಿ ದ್ದರು. ಅವರ ಈ ಆಕ್ರೋಶ ಭರಿತ ಹೇಳಿಕೆಯ ವಿಡಿಯೋ ಮತ್ತು ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದೆ. ಇದಕ್ಕೆ ತಿರುಗೇಟು ನೀಡಿದ ಕಾಂಗ್ರೆಸ್ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಕಾಂಗ್ರೆಸ್ ಪಕ್ಷದ ವಿರುದ್ಧ 'ನನ್ನ ಮಕ್ಕಳು' ಎಂಬ ಪದಪ್ರಯೋಗ ಮಾಡಿದ್ದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮೂರು ದಿನಗಳೊಳಗೆ ಕ್ಷಮೆಯಾಚಿಸಬೇಕು, ತಪ್ಪಿದರೆ ಕಾಂಗ್ರೆಸ್ ಕಾರ್ಯಕರ್ತರು ಅವರ ವಿರುದ್ಧ ಕಪ್ಪು ಪಟ್ಟಿ ಪ್ರದರ್ಶಿಸಿ ಪ್ರತಿಭಟನೆ ನಡೆಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

ಮುಂದುವರೆದು, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಕಾಂಗ್ರೆಸ್ ಬಗ್ಗೆ ಇಂತಹ ಕೀಳು ಭಾಷೆ ಬಳಸುವುದು ಸರಿಯಲ್ಲ. ಇದು ಕಾಂಗ್ರೆಸ್ ಭಾಷೆಯಲ್ಲ, ಆರ್‌ಎಸ್‌ಎಸ್ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಭಾಷೆ ಎಂದು ಕಿಡಿಕಾರಿದ ಹರಿಪ್ರಸಾದ್, ವಿಜಯೇಂದ್ರ ಅವರಿಂದ ಉತ್ತಮ ರಾಜಕೀಯ ಸಂಸ್ಕೃತಿ ನಿರೀಕ್ಷಿಸಲು ಸಾಧ್ಯವಿಲ್ಲ. ಅವರು ತಮ್ಮ ತಂದೆಯ 700 ಸಹಿಗಳನ್ನು ತಾವೇ ಹಾಕಿ ಆರ್‌ಟಿಜಿಎಸ್ ಮೂಲಕ ಲಂಚ ಪಡೆದಿದ್ದಾರೆ ಎಂದು ಆರೋಪಿಸಿದ್ದಾರೆ.

ಮಹಾತ್ಮ ಗಾಂಧೀಜಿಯವರನ್ನು ದೇಶದ್ರೋಹಿ ಎಂದು ಬಿಂಬಿಸುವ ಪ್ರಯತ್ನವನ್ನು ಖಂಡಿಸಿದ ಹರಿಪ್ರಸಾದ್, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರೇ ನಿಜವಾದ ದೇಶದ್ರೋಹಿಗಳು ಎಂದು ಹೇಳಿದ್ದಾರೆ.

ಜನಾಕ್ರೋಶಕ್ಕೆ ಕುಗ್ಗಿದ ಸರ್ಕಾರ!

ಮೊಸರಿನ ಬೆಲೆ ಇಳಿಸಲು ಸಿಎಂ ಸೂಚನೆ

ಕಾಫಿ, ಟೀ ಬೆಲೆ ಏರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ನಂದಿನಿ ಹಾಲು ಮತ್ತು ಮೊಸರಿನ ದರ ಏರಿಕೆಗೆ ಜನಾಕ್ರೋಶ ವ್ಯಕ್ತವಾಗುತ್ತಿರುವ ಬೆನ್ನಲ್ಲೇ ರಾಜ್ಯ ಸರ್ಕಾರ ಎಚ್ಚೆತ್ತಿದೆ. ನಂದಿನಿ ಮೊಸರಿನ ಬೆಲೆಯನ್ನು ಸ್ವಲ್ಪ ಕಡಿಮೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಇತ್ತೀಚಿನ ಬೆಲೆ ಏರಿಕೆ ಜನರಿಗೆ ಹೆಚ್ಚು ಹೊರೆಯಾಗುತ್ತಿದೆ. ಹಾಲು ಮತ್ತು ಮೊಸರು ದೈನಂದಿನ ಬಳಕೆಯ ಅಗತ್ಯ ವಸ್ತುವಾಗಿದ್ದು, ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿತ್ತು. ಸರ್ಕಾರದ ಮೇಲೆ ಬೆಲೆ ಇಳಿಸುವಂತೆ ಒತ್ತಡ ಹೆಚ್ಚಾಗಿದೆ. ಈ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್ ಮೊಸರಿನ ಬೆಲೆಯನ್ನು ಸ್ವಲ್ಪ ಕಡಿಮೆ ಮಾಡುವಂತೆ ಸೂಚಿಸಿರುವುದಾಗಿ ತಿಳಿಸಿದ್ದಾರೆ.

ಹಾಲಿನ ದರದಲ್ಲಿ ಯಾವುದೇ ಬದಲಾವಣೆ ಮಾಡುವ ಪ್ರಸ್ತಾಪವಿಲ್ಲ. ಆದರೆ ನಂದಿನಿ ಮೊಸರಿನ ಬೆಲೆಯನ್ನು ಸ್ವಲ್ಪ ಇಳಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆ. ಈ ನಿಟ್ಟಿನಲ್ಲಿ ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಆದರೆ ಮೊಸರಿನ ಬೆಲೆ ಎಷ್ಟು ಇಳಿಕೆಯಾಗಲಿದೆ, ಯಾವ ದಿನದಿಂದ ಹೊಸ ದರ ಜಾರಿಗೆ ಬರಲಿದೆ ಎಂಬ ಬಗ್ಗೆ ಅಧಿಕೃತ ಆದೇಶ ಹೊರಬಂದ ಬಳಿಕವೇ ಸ್ಪಷ್ಟವಾಗಲಿದೆ.

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದಲ್ಲಿ ನಂದಿನಿ ಹಾಲಿನ ದರ ಲೀಟರ್‌ಗೆ ರೂ. 8 ರಿಂದ ರೂ. 12 ರವರೆಗೆ ಭಾರಿ ಏರಿಕೆ ಕಂಡ ಬೆನ್ನಲ್ಲೇ, ಸಾರ್ವಜನಿಕರಿಗೆ ಮತ್ತೊಂದು ಬೆಲೆ ಏರಿಕೆಯ ಬಿಸಿ ತಟ್ಟಿದೆ. ಹಾಲಿನ ಹೊಸ ದರ ಜಾರಿಗೆ ಬಂದಿದ್ದು, ಇದರ ನೇರ ಪರಿಣಾಮವಾಗಿ ರಾಜ್ಯಾದ್ಯಂತ ಹೋಟೆಲ್‌ಗಳು ಮತ್ತು ಕೆಫೆಗಳಲ್ಲಿ ಕಾಫಿ ಹಾಗೂ ಟೀ ಬೆಲೆಯಲ್ಲಿ ರೂ. 5 ರವರೆಗೆ ಹೆಚ್ಚಳ ಮಾಡಲಾಗಿದೆ.

ರಾಜ್ಯಾದ್ಯಂತ ಪ್ರತಿ ಕಪ್ ಕಾಫಿ ಮತ್ತು ಟೀ ಬೆಲೆಯಲ್ಲಿ 5 ರೂಪಾಯಿ ಏರಿಕೆಯಾಗಿದ್ದು, ಇಂದಿನಿಂದಲೇ ಹೊಸ ದರ ಜಾರಿಗೆ ಬಂದಿದೆ. ಬೆಂಗಳೂರು ಹೋಟೆಲ್ ಮಾಲೀಕರ ಸಂಘದ ಎಚ್ಚರಿಕೆಯ ಬೆನ್ನಲ್ಲೇ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಹಾಲಿನ ದರ ತೀವ್ರವಾಗಿ ಏರಿಕೆ ಆಗಿರುವುದರಿಂದ ಮೆನು ದರಗಳನ್ನು ಪರಿಷ್ಕರಿಸುವುದು ಅನಿವಾರ್ಯವಾಗಿದೆ ಎಂದು ಹೋಟೆಲ್ ಮಾಲೀಕರು ತಿಳಿಸಿದ್ದಾರೆ.

ಈ ನಡುವೆ, ಹಾಲಿನ ದರ ಏರಿಕೆ ಕೇವಲ ಕಾಫಿ, ಟೀಗೆ ಮಾತ್ರ ಸೀಮಿತವಾಗಿರದೆ, ಮುಂಬರುವ ದಿನಗಳಲ್ಲಿ ಹಾಲು ಆಧಾರಿತ ಸಿಹಿತಿಂಡಿಗಳು, ಇಡ್ಲಿ, ದೋಸೆ ಹಾಗೂ ಮಧ್ಯಾಹ್ನದ ಊಟದ ದರಗಳ ಮೇಲೂ ಪ್ರಭಾವ ಬೀರುವ ಸಾಧ್ಯತೆ ದಟ್ಟವಾಗಿದೆ.

ಕೊನೆಯ ಬಾರಿಗೆ ಏಪ್ರಿಲ್ 1, 2025 ರಂದು ಸರ್ಕಾರವು ಹಾಲಿನ ಬೆಲೆಯನ್ನು ಲೀಟರ್‌ಗೆ ರೂ. 4 ಹೆಚ್ಚಿಸಿತ್ತು.

ಅದಕ್ಕೂ ಮುನ್ನ, ಜೂನ್ 2024ರಲ್ಲಿ 500 ಮಿಲಿ ಪ್ಯಾಕೆಟ್‌ಗೆ ಹೆಚ್ಚುವರಿಯಾಗಿ 50 ಮಿಲಿ ಹಾಲು ನೀಡುವುದಕ್ಕೆ ಅನುಗುಣವಾಗಿ ಲೀಟರ್‌ಗೆ ರೂ. 2 ಹೆಚ್ಚಿಸಲಾಗಿತ್ತು.

ಪ್ರಯಾಣ ದರ ಏರಿಕೆಗೆ ಸಿದ್ಧತೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಸಾರಿಗೆ ಬಸ್‌ಗಳ ಪ್ರಯಾಣ ದರ ಏರಿಕೆ ಅನಿವಾರ್ಯವಾಗಿದ್ದು, ಎಷ್ಟು ಪ್ರಮಾಣದಲ್ಲಿ ದರ ಹೆಚ್ಚಳ ಮಾಡಬೇಕು ಎಂಬುದನ್ನು ನವೆಂಬರ್ 4ರಂದು ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಸಾರಿಗೆ ಸಚಿವರು ತಿಳಿಸಿದ್ದಾರೆ.

ಸೋಮವಾರ ರಾತ್ರಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ



ಅವರು, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಹಿರಿಯ ಅಧಿಕಾರಿ ಗಳು ಹಾಗೂ ಮುಖ್ಯಸ್ಥರ ಸಭೆ ಯನ್ನು ಕರೆಯ ಲಾಗಿದೆ. ಸಭೆಯಲ್ಲಿ ದರ ಪರಿಷ್ಕರಣೆ ಕುರಿತು ಸಮಗ್ರವಾಗಿ ಚರ್ಚಿಸಿದ ಬಳಿಕ ಹೆಚ್ಚಳದ ಪ್ರಮಾಣವನ್ನು ಅಂತಿಮಗೊಳಿಸಲಾಗುವುದು ಎಂದರು.

ಕಳೆದ 11 ವರ್ಷಗಳಲ್ಲಿ ರಾಜ್ಯದಲ್ಲಿ ಸಾರಿಗೆ ಬಸ್‌ಗಳ ಟಿಕೆಟ್ ದರವನ್ನು ಒಂದೇ ಬಾರಿ ಹೆಚ್ಚಿಸಲಾಗಿದೆ. ಈ ಅವಧಿಯಲ್ಲಿ ಡೀಸೆಲ್ ಬೆಲೆ, ವಾಹನಗಳ ನಿರ್ವಹಣೆ ಹಾಗೂ ದಿನನಿತ್ಯದ ಕಾರ್ಯಾಚರಣೆಯ ವೆಚ್ಚ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದ ಸಾರಿಗೆ ಸಂಸ್ಥೆಗಳನ್ನು ನಿರ್ವಹಿಸುವುದು ಕಷ್ಟವಾಗುತ್ತಿದೆ. ಸಾರ್ವಜನಿಕರು ಹಾಗೂ ಪ್ರಯಾ ಣಿಕರು ಸಂಸ್ಥೆಗಳ ಆರ್ಥಿಕ ಪರಿಸ್ಥಿತಿ ಯನ್ನು ಅರ್ಥ ಮಾಡಿ ಕೊಂಡು ಸಹಕರಿಸಬೇಕು



"ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಹೆಚ್ಚಳದಿಂದಾಗಿ ಪ್ರತಿದಿನ ಡೀಸೆಲ್ ಮೊತ್ತ ಭರಿಸಲು ಕಷ್ಟವಾಗಿದ್ದು, ವಿಶೇಷ ಅನುದಾನ ನೀಡಿ ಸಾರಿಗೆ ವ್ಯವಸ್ಥೆಯನ್ನು ಮುಂದುವರಿಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬಸ್ ಸಂಚಾರ ಕಡಿಮೆ ಇರುವ ಕಡೆಗಳಲ್ಲಿ ಹೊಸ ಲೆಕ್ಕಾಚಾರದ ಮೂಲಕ ಬಸ್ ಓಡಿಸಲು ತರ್ಮಾನ ಮಾಡ ಲಾಗಿದೆ. ದರ ಏರಿಕೆ ಬಗ್ಗೆ ಸಾರಿಗೆ ಇಲಾಖೆಯೇ ನಿರ್ಧಾರ ಕೈಗೊಳ್ಳಲು ಸೂಚಿಸಲಾಗಿದೆ" ಎಂದರು.

ಎಂದು ಮನವಿ ಮಾಡಿದರು.

ಕೇಂದ್ರ ಸರ್ಕಾರ ಕಳೆದ ಒಂದು ವರ್ಷದಲ್ಲಿ ಐದು ಬಾರಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸಿದೆ. ಇಂಧನ ಬೆಲೆ ಏರಿಕೆಯಿಂದ ಸಾರಿಗೆ ಸಂಸ್ಥೆಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗಿದೆ. ನಿರಂತರವಾಗಿ ವೆಚ್ಚ ಹೆಚ್ಚಳವಾಗುತ್ತಿದ್ದರೂ ಟಿಕೆಟ್ ದರದಲ್ಲಿ ಪರಿಷ್ಕರಣೆ ಮಾಡದಿರುವುದರಿಂದ ಸಂಸ್ಥೆಗಳು ನಷ್ಟ ಅನುಭವಿಸುತ್ತಿವೆ. ಹೀಗಾಗಿ ಅನಿವಾರ್ಯವಾಗಿ ಪ್ರಯಾಣ ದರ ಹೆಚ್ಚಳಕ್ಕೆ ಮುಂದಾಗಬೇಕಾಗಿದೆ ಎಂದು ಹೇಳಿದರು.

ಶಕ್ತಿ ಯೋಜನೆಯಿಂದ ಸಂಸ್ಥೆಗಳಿಗೆ ನಷ್ಟವಿಲ್ಲ: ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸಿರುವ ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳಿಗೆ ಯಾವುದೇ ಆರ್ಥಿಕ ತೊಂದರೆಯಾಗಿಲ್ಲ. ಯೋಜನೆಯಡಿ ಪ್ರಯಾಣಿಸುವ ಮಹಿಳೆಯರ ಟಿಕೆಟ್ ಮೊತ್ತದ ಶೇ.100ರಷ್ಟು ಹಣವನ್ನು ರಾಜ್ಯ ಸರ್ಕಾರ ಕಾಲಕಾಲಕ್ಕೆ ಸಾರಿಗೆ ಸಂಸ್ಥೆಗಳಿಗೆ ಮರುಪಾವತಿಸುತ್ತಿದೆ ಎಂದು ಸ್ಪಷ್ಟಪಡಿಸಿದರು.


ಪ್ರಯಾಣ ದರ ಪರಿಷ್ಕರಣೆಗೆ ರಚಿಸಲಾಗಿದ್ದ ಸಮಿತಿಯು ಹೆಚ್ಚಿನ ಪ್ರಮಾಣದಲ್ಲಿ ದರ ಹೆಚ್ಚಳಕ್ಕೆ ಶಿಫಾರಸು ಮಾಡಿದೆ. ಆದರೆ, ಸಮಿತಿ ಸೂಚಿಸಿದಷ್ಟು ದರ ಹೆಚ್ಚಿಸಿದರೆ ಸಾರ್ವಜನಿಕರಿಗೆ ಹೆಚ್ಚಿನ ಹೊರೆ ಬೀಳಲಿದೆ. ನೆರೆರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಬಸ್ ಪ್ರಯಾಣ ದರ ಈಗಲೂ ಕಡಿಮೆ ಇದೆ. ಆದರೂ ಪ್ರಯಾಣಿಕರಿಗೆ ಹೊರೆಯಾಗದಂತೆ ಹಂತ ಹಂತವಾಗಿ ದರ ಹೆಚ್ಚಳ ಮಾಡಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ನವೆಂಬರ್ 4ರಂದು ನಡೆಯಲಿರುವ ಸಭೆಯ ಬಳಿಕ ಪ್ರಯಾಣ ದರ ಪರಿಷ್ಕರಣೆಯ ಅಂತಿಮ ನಿರ್ಧಾರ ಪ್ರಕಟವಾಗಲಿದ್ದು, ಸಾರ್ವಜನಿಕರ ಮೇಲೆ ಕನಿಷ್ಠ ಹೊರೆ ಬೀರುವ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸಾರಿಗೆ ಸಚಿವರು ತಿಳಿಸಿದರು.



ಸೋಮವಾರ ಹಾಲಿನ ಬೆಲೆ ಏರಿಕೆಯನ್ನು ಖಂಡಿಸಿ ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ವತಿಯಿಂದ ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ದಿಲ್ಲಿ ತಲುಪಿದ ಸ್ಟಿಂಗ್ ರಗಳೆ!



ಆರ್‌ಜಿಗೆ ಸಿದ್ದು ವಿವರಣೆ: ತೀವ್ರ ಆಕ್ಷೇಪ?

● ವಿಕ್ರಮ ವಾಹಿನಿ । ನವದೆಹಲಿ

ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿ ದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಕಾಂಗ್ರೆಸ್ ನಡುವಿನ ವಾಕ್ಸಮರ ಮತ್ತೆ ತೀವ್ರ ಸ್ವರೂಪ ಪಡೆದುಕೊಂಡ ಬೆನ್ನಲ್ಲೇ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ದೆಹಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಈ ಸಂಬಂಧ ಚರ್ಚಿಸಿದ್ದಾರೆ.

ಮಂಗಳವಾರ ದೆಹಲಿಯಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾದ ಮಾಜಿ ಸಿಎಂ ಸಿದ್ದರಾಮಯ್ಯ, ಸ್ಟಿಂಗ್ ಆಪರೇಷನ್ ಪ್ರಕರಣ, ಇದರ ಸಂಬಂಧವಾಗಿ ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಕುರಿತು ಸುದೀರ್ಘವಾಗಿ ಚರ್ಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ವೇಳೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಪೊನ್ನಣ್ಣ ಸಹ ಉಪಸ್ಥಿತರಿದ್ದರು.

ರಾಹುಲ್ ಗಾಂಧಿ ಜೊತೆ ಸುಮಾರು 45 ನಿಮಿಷಗಳಿಗೂ ಹೆಚ್ಚು ಚರ್ಚೆ ನಡೆಸಿದ ಸಿದ್ದರಾಮಯ್ಯ, ನೀವು ಹೇಳಿದಿರಿ ಎಂಬ ಒಂದೇ ಕಾರಣಕ್ಕೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ.

ಬೇರೆಯವರ ಒತ್ತಡದಿಂದ ನಾನು ರಾಜೀನಾಮೆ ನೀಡಿಲ್ಲ. ಆದರೆ ನಾನು ಅಧಿಕಾರದಿಂದ ಇಳಿದ ಬಳಿಕ ನನ್ನ ವರ್ಚಸ್ಸಿಗೆ ಮಸಿ ಬಳಿಯುವ ಪ್ರಯತ್ನ ನಡೆಯುತ್ತಿದೆ.

ಇದೆಲ್ಲ ಕೆಲವರು ಸೃಷ್ಟಿಸಿದ ಬೆಳವಣಿಗೆ ಎಂದು ಹೇಳುವ ಮೂಲಕ ಸ್ಟಿಂಗ್ ಪ್ರಕರಣದ ಬಗ್ಗೆ ರಾಹುಲ್ ಗಾಂಧಿ ಎದುರೇ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಮುಂದೆ ಚುನಾವಣೆಯಲ್ಲೂ ಸ್ಪರ್ಧಿಸಲ್ಲ ಎಂದು ಹೇಳಿದ್ದೇನೆ. ನಾನು ಮತ್ತೆ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಯೂ ಅಲ್ಲ. ಅದಾಗ್ಯೂ ಈ ರಾಜಕೀಯ ಷಡ್ಯಂತ್ರ ನಡೆಸಿದ್ದು ಯಾರು? ಆ ವಿಡಿಯೋ ಹಂಚಿಕೊಂಡವರು ಯಾರೆಂದು ನನಗೆ ಗೊತ್ತು. ಆ ವಿಡಿಯೋ ಮಾಡಿದ್ದು ಯಾರು, ಹಿಂದಿನ ಉದ್ದೇಶವೇನು? ಸಿಎಂ ಸ್ಥಾನಕ್ಕೆ ರಾಜೀನಾಮೆ ಬಳಿಕ ಹೆಸರಿಗೆ ಧಕ್ಕೆ ತರಲಾಗುತ್ತಿದೆ.

ಇದರಿಂದ ನನಗೆ ತೀವ್ರ ಬೇಸರವಾಗಿದೆ. ನನ್ನ ಇಮೇಜ್‌ಗೆ ಧಕ್ಕೆ ಆದ್ರೆ ಚುನಾವಣಾ ಪ್ರಚಾರಕ್ಕೆ ಬರಲ್ಲ ಎಂದು ಮಾಜಿ ಸಿಎಂ, ರಾಹುಲ್ ಗಾಂಧಿಗೆ ಸ್ಪಷ್ಟವಾಗಿ ಹೇಳಿದ್ದಾರೆ ಎನ್ನಲಾಗಿದೆ.

ಖಾಸಗಿ ವಾಹಿನಿ ಕಚೇರಿ, ಮನೆ ಮೇಲೆ ಸಿಸಿಬಿ ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ಕೇಂದ್ರ ಅಪರಾಧ ವಿಭಾಗದ (ಸಿಸಿಬಿ) ಅಧಿಕಾರಿಗಳು, ಖಾಸಗಿ ಸುದ್ದಿ ವಾಹಿನಿ ಪವರ್ ಟಿವಿ ಕಚೇರಿ ಹಾಗೂ ಅದರ ಮಾಲೀಕ ರಾಕೇಶ್ ಶೆಟ್ಟಿ ಅವರ ಕೊಡಿಗೇಹಳ್ಳಿಯ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ.

ಸುಮಾರು 30 ಅಧಿಕಾರಿಗಳಿದ್ದ ಸಿಸಿಬಿ ತಂಡವು ಮಂಗಳವಾರ ಏಕಕಾಲದಲ್ಲಿ ಎರಡೂ ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದು, ಹಲವು ದಾಖಲೆಗಳು ಹಾಗೂ ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಗಳನ್ನು ಪರಿಶೀಲಿಸುತ್ತಿದೆ ಎಂದು ತಿಳಿದುಬಂದಿದೆ.

ಸಿದ್ದರಾಮಯ್ಯ ವಿರುದ್ಧ ಹರಿಬಿಡಲಾಗಿದ್ದ ವಿಡಿಯೊವನ್ನು ತಾವೇ ಚಿತ್ರೀಕರಿಸಿರುವುದಾಗಿ ರಾಕೇಶ್ ಶೆಟ್ಟಿ ಈ ಹಿಂದೆ ಒಪ್ಪಿಕೊಂಡಿದ್ದರು ಎನ್ನಲಾಗಿದೆ. ಅಲ್ಲದೆ, ಪವರ್ ಟಿವಿ ಕಚೇರಿ ಮೇಲೆ ದಾಳಿ ನಡೆಸಿದರೆ ಇಂತಹ ಇನ್ನೂ ಹಲವು ವಿಡಿಯೊಗಳು ಪತ್ತೆಯಾಗಲಿವೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದರು.

ಈ ಹೇಳಿಕೆಗಳು ಹಾಗೂ ಪ್ರಕರಣದ ತನಿಖೆಯ ಬೆಳವಣಿಗೆಗಳ ಬೆನ್ನಲ್ಲೇ ಸಿಸಿಬಿ ಅಧಿಕಾರಿಗಳು ಪವರ್ ಟಿವಿ ಕಚೇರಿ ಮತ್ತು ರಾಕೇಶ್ ಶೆಟ್ಟಿ ಅವರ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ.

ಎರಡೂ ಸ್ಥಳಗಳಲ್ಲಿ ಅಧಿಕಾರಿಗಳ ಪರಿಶೀಲನೆ ಮುಂದುವರಿದಿದೆ ಎಂದು ವರದಿಯಾಗಿದೆ.

ಹೇಳಿಕೆ ಬದಲಿಸಿದ ಆ ಮಹಿಳೆಯನ್ನು ನ್ಯಾಯಾಲಯದ ಮುಂದೆ ಏಕೆ ಹಾಜರುಪಡಿಸಿಲ್ಲ: ಹೆಚ್‌ಡಿಕೆ



● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ನಡೆದಿರುವ ಸ್ಟಿಂಗ್ ಆಪರೇಷನ್ ಸಂದರ್ಭದಲ್ಲಿ ಅವರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದ ಕೇರಳದ ಮಹಿಳೆ, ಅನಂತರ ಹೇಳಿಕೆ ಬದಲಿಸಿದ್ದಾರೆ ಎನ್ನುವ ಮಾಹಿತಿ ಹರಿದಾಡುತ್ತಿದೆ. ಒಂದು ವೇಳೆ ಆಕೆ ಹೇಳಿಕೆಯನ್ನು ಬದಲಿಸಿದ್ದರೆ ಅವರನ್ನು ಕರೆತಂದು ನ್ಯಾಯಾಲಯದ ಮುಂದೆ ಯಾಕೆ ಹಾಜರುಪಡಿಸಿಲ್ಲ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಪೊಲೀಸರನ್ನು ಪ್ರಶ್ನಿಸಿದರು.

ಜೆಡಿಎಸ್ ಪಕ್ಷದ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಆ ಮಹಿಳೆ ತನ್ನ ಹೇಳಿಕೆಗಳನ್ನು ಬದಲಿಸಿದ್ದರೆ ಅವರು ಕೂಡ ಈ ಸ್ಟಿಂಗ್ ಪಿತೂರಿಯ ಭಾಗವೇ ಆಗುತ್ತಾರೆ. ಈ ಹಿನ್ನೆಲೆಯಲ್ಲಿ ಅವರನ್ನು ಆರೋಪಿ ಎಂದು ಹೆಸರಿಸಬೇಕಾಗುತ್ತದೆ. ಇದನ್ನು ಪೊಲೀಸರು ಮಾಡಿದ್ದಾರೆಯೇ ಎಂದು ಪ್ರಶ್ನಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆ ನಡೆಯುತ್ತಿರುವ ಸಂದರ್ಭದಲ್ಲಿ ಆ ಪ್ರಕರಣದ ತನಿಖೆಯ ವಿಚಾರಗಳನ್ನು ಪೊಲೀಸ್ ಆಯುಕ್ತರು ಬಹಿರಂಗ ಮಾಡಿರುವ ಬಗ್ಗೆ ಕೆಂಡಾಮಂಡಲರಾದ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಅವರ ಹೇಳಿಕೆ ಸುಪ್ರೀಂ ಕೋರ್ಟ್ ಮಾರ್ಗಸೂಚಿಯನ್ನು ಸಂಪೂರ್ಣವಾಗಿ ಉಲ್ಲಂಘಿಸಿದಂತೆ ಆಗಿದೆ ಎಂದರು.

ಪೊಲೀಸ್ ಆಯುಕ್ತರು ತಮ್ಮ ಹೇಳಿಕೆಯ ಮೂಲಕ ತನಿಖೆಯ ದಾರಿ ತಪ್ಪಿಸುತ್ತಿದ್ದಾರೆ. ಸರ್ಕಾರಕ್ಕೆ ಹೇಗೆ ಬೇಕೋ ಹಾಗೆ ತನಿಖೆ ಮಾಡಿ ತೇಪೆ ಹಚ್ಚಲು ಇವರು ಶತ ಪ್ರಯತ್ನ ಮಾಡುತ್ತಿದ್ದಾರೆ ಎಂದು ಸಚಿವರು ದೂರಿದರು.

2026 ಅಕ್ಟೋಬರ್ 21ರಂದು ಬೆಂಗಳೂರು ಪೊಲೀಸರು ಹೊರಡಿಸಿದ ಪತ್ರಿಕಾ ಹೇಳಿಕೆಯನ್ನು ಉಲ್ಲೇಖಿಸಿದ ಕುಮಾರಸ್ವಾಮಿ ಅವರು, ಈ ತನಿಖೆಯು ಅಸಲಿ ಸತ್ಯವನ್ನು ಹೊರಗೆಳೆಯುವ ಬದಲಿಗೆ ಸಿದ್ದರಾಮಯ್ಯ ಅವರಿಗೆ 'ಕ್ಲೀನ್ ಚಿಟ್' ನೀಡಿ ತೃಪ್ತಿಪಟ್ಟುಕೊಳ್ಳುತ್ತಿದ್ದಾರೆ. ಬಹುಶಃ ಅದಕ್ಕೆ ತನಿಖಾ ತಂಡವನ್ನು ರಚಿಸಲಾಗಿದೆ ಎಂದು ಅವರು ದೂರಿದರು.

2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —
ವಿಕ್ರಮ ವಾಹಿನಿ

ಸವಿ ವಾಹಿನಿ

ಮನುಷ್ಯ ನೆಮ್ಮದಿಯಾಗಿ ಇರಬೇಕು
ಅಂದ್ರೆ ಮನ ಸ್ಥಿತಿ, Money ಸ್ಥಿತಿ, ಮನೆ ಸ್ಥಿತಿ ಇವು
ಮೂರು ಚೆನ್ನಾಗಿರಬೇಕು.

ದಿನ ಪಂಚಾಂಗ

ನವೆಂಬರ್, 03-2026, ಮಂಗಳವಾರ
ಶರದ್ ಋತು, ಆಶ್ವಯುಜ ಮಾಸ, ಬಹುಳ ಪಕ್ಷ
ನವಮಿ ತಿಥಿ ಮ.2:53
ಆಶ್ಲೇಷ ನಕ್ಷತ್ರ ಬೆ.7:42
ರಾಹುಕಾಲ ಮ 2:58-4:26
ಶ್ರೀರಂಗಪಟ್ಟಣ ಅಷ್ಟತೀರ್ಥೋತ್ಸವ

ಆರೋಗ್ಯ

ಸ್ತನ ಕ್ಯಾನ್ಸರ್ ಪತ್ತೆಯಲ್ಲಿ ಎಐ ತಂತ್ರಜ್ಞಾನ ನೆರವು

ಮ್ಯಾಮೊಗ್ರಫಿ ಚಿತ್ರಗಳ ವಿಶ್ಲೇಷಣೆಗೆ ಕೃತಕ ಬುದ್ಧಿಮತ್ತೆ; ವೈದ್ಯರ ನಿರ್ಧಾರಕ್ಕೆ ಪೂರಕ, ಪರ್ಯಾಯವಲ್ಲ



ಸ್ತನ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚುವುದು ಚಿಕಿತ್ಸೆಯ ಯಶಸ್ಸಿನ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಮ್ಯಾಮೊಗ್ರಫಿ ಪರೀಕ್ಷೆಯ ಜತೆಗೆ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನವೂ ಮಹತ್ವದ ಪಾತ್ರ ವಹಿಸುತ್ತಿದೆ. ಮ್ಯಾಮೊಗ್ರಫಿ ಚಿತ್ರಗಳನ್ನು ವಿಶ್ಲೇಷಿಸುವ ಮೂಲಕ ಅನುಮಾನಾಸ್ಪದ ಬದಲಾವಣೆಗಳನ್ನು ಗುರುತಿಸಲು ಹಾಗೂ ವೈದ್ಯರಿಗೆ ನಿಖರವಾದ ನಿರ್ಧಾರ ಕೈಗೊಳ್ಳಲು ಎಐ ನೆರವಾಗುತ್ತಿದೆ.

ಪುಣೆಯ ಎಂಒಸಿ ಕ್ಯಾನ್ಸರ್ ಕೇರ್ ಸಂಸ್ಥೆಯ ಕ್ಯಾನ್ಸರ್ ತಜ್ಞೆ ಡಾ. ರಿತು ದವೆ ಅವರ ಪ್ರಕಾರ, ಮ್ಯಾಮೊಗ್ರಫಿ ಎಂದರೆ ಸ್ತನದ ಎಕ್ಸ್-ರೇ ಪರೀಕ್ಷೆಯಾಗಿದ್ದು, ಸ್ಪರ್ಶದಿಂದ ಗುರುತಿಸಲಾಗದ ಸೂಕ್ಷ್ಮ ಬದಲಾವಣೆಗಳನ್ನೂ ಪತ್ತೆಹಚ್ಚುವ ಸಾಮರ್ಥ್ಯ ಹೊಂದಿದೆ. ಎಐ ಉಪಕರಣಗಳು ಈ ಚಿತ್ರಗಳನ್ನು ವಿಶ್ಲೇಷಿಸಿ, ಹೆಚ್ಚಿನ ಪರಿಶೀಲನೆ ಅಗತ್ಯವಿರುವ ಪ್ರದೇಶಗಳನ್ನು ಗುರುತಿಸಿ ರೇಡಿಯಾಲಜಿಸ್ಟ್‌ಗಳ ಗಮನಕ್ಕೆ ತರುತ್ತವೆ. ವೈದ್ಯರಿಗೆ ಹೆಚ್ಚುವರಿ 'ಕಣ್ಣುಗಳ'ಂತೆ ಕಾರ್ಯನಿರ್ವಹಿಸುವ ಈ ತಂತ್ರಜ್ಞಾನವು ಸೂಕ್ಷ್ಮ ಅಸಹಜತೆಗಳನ್ನು ಗುರುತಿಸಲು ಸಹಕಾರಿಯಾಗಿದೆ.

ಸಂಶೋಧನೆ ಹೇಳುವುದೇನು?

'ದಿ ಲ್ಯಾನ್ಸೆಟ್ ಡಿಜಿಟಲ್ ಹೆಲ್ತ್'ನಲ್ಲಿ 2025ರಲ್ಲಿ ಪ್ರಕಟವಾದ ಸ್ವೀಡನ್‌ನ ಒಂದು ಅಧ್ಯಯನವು ಸ್ತನ ಕ್ಯಾನ್ಸರ್ ತಪಾಸಣೆಯಲ್ಲಿ ಎಐನ ಪರಿಣಾಮಕಾರಿತ್ವವನ್ನು ವಿವರಿಸಿದೆ. 1 ಲಕ್ಷಕ್ಕೂ ಹೆಚ್ಚು ಮಹಿಳೆಯರನ್ನು ಒಳಗೊಂಡ ಅಧ್ಯಯನದಲ್ಲಿ, ಪ್ರಮಾಣಿತ ತಪಾಸಣೆಯ ಮೂಲಕ ಪ್ರತಿ 1,000 ಮಹಿಳೆಯರಿಗೆ 5.0 ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗಿದ್ದರೆ, ಎಐ ನೆರವಿನ ಮ್ಯಾಮೊಗ್ರಫಿಯಲ್ಲಿ 6.4 ಪ್ರಕರಣಗಳು ಪತ್ತೆಯಾಗಿವೆ.

ಅಲ್ಲದೆ, ಎಐ ಬಳಕೆಯಿಂದ ರೇಡಿಯಾಲಜಿಸ್ಟ್‌ಗಳ ಕೆಲಸದ ಹೊರೆ ಸರಿಸುಮಾರು ಶೇ.44ರಷ್ಟು ಕಡಿಮೆಯಾಗಿದೆ ಎಂದು ಅಧ್ಯಯನ ತಿಳಿಸಿದೆ. ಈ ಫಲಿತಾಂಶಗಳು ಸ್ತನ ಕ್ಯಾನ್ಸರ್ ತಪಾಸಣೆಯಲ್ಲಿ ಎಐನ ಸಾಮರ್ಥ್ಯವನ್ನು ತೋರಿಸುತ್ತವೆಯಾದರೂ, ಸ್ವೀಡನ್‌ನ ತಪಾಸಣಾ ಕಾರ್ಯಕ್ರಮದ ಫಲಿತಾಂಶಗಳನ್ನು ಭಾರತದ ಆರೋಗ್ಯ ವ್ಯವಸ್ಥೆಗೆ ನೇರವಾಗಿ ಅನ್ವಯಿಸಲು ಸಾಧ್ಯವಿಲ್ಲ.

ಭಾರತದಂತಹ ದೇಶದಲ್ಲಿ, ವಿಶೇಷವಾಗಿ ವೈದ್ಯಕೀಯ ಸಂಪನ್ಮೂಲಗಳು ಕಡಿಮೆ ಇರುವ ಪ್ರದೇಶಗಳಲ್ಲಿ ಎಐ ನೆರವಿನ ಚಿತ್ರಣ ತಂತ್ರಜ್ಞಾನವು ಉಪಯುಕ್ತವಾಗಬಹುದು. ಆದರೆ, ಮ್ಯಾಮೊಗ್ರಫಿ ಚಿತ್ರಗಳ ಗುಣಮಟ್ಟ, ಬಳಸುವ ತಂತ್ರಜ್ಞಾನ, ಸ್ಥಳೀಯ ಮೌಲ್ಯಮಾಪನ ಹಾಗೂ ತರಬೇತಿ ಪಡೆದ ವೈದ್ಯಕೀಯ ಸಿಬ್ಬಂದಿಯ ಲಭ್ಯತೆ ಅದರ ಪರಿಣಾಮಕಾರಿತ್ವವನ್ನು ನಿರ್ಧರಿಸುತ್ತವೆ.

ಎಐ ವೈದ್ಯರಿಗೆ ಪರ್ಯಾಯವಲ್ಲ

ಎಐ ತಂತ್ರಜ್ಞಾನವು ವೈದ್ಯರ ವೈದ್ಯಕೀಯ ನಿರ್ಧಾರಗಳನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಡಾ. ರಿತು ದವೆ ಸ್ಪಷ್ಟಪಡಿಸುತ್ತಾರೆ. ಸ್ಕ್ಯಾನ್‌ನಲ್ಲಿ ಅನುಮಾನಾಸ್ಪದ ಅಂಶ ಕಂಡುಬಂದ ಮಾತ್ರಕ್ಕೆ ಅದು ಕ್ಯಾನ್ಸರ್ ಎಂದು ಖಚಿತಪಡಿಸಲಾಗುವುದಿಲ್ಲ. ಅದೇ ರೀತಿ, ಎಐ ವರದಿಯಲ್ಲಿ ಯಾವುದೇ ಅಸಹಜತೆ ಕಂಡುಬಂದಿಲ್ಲ ಎಂದರೂ ಕ್ಯಾನ್ಸರ್ ಇಲ್ಲ ಎಂದು ಸಂಪೂರ್ಣವಾಗಿ ತಳ್ಳಿಹಾಕಲು ಸಾಧ್ಯವಿಲ್ಲ.

ಅಗತ್ಯವಿದ್ದಲ್ಲಿ ಹೆಚ್ಚಿನ ಪರೀಕ್ಷೆಗಳು, ಅಲ್ಟ್ರಾಸೌಂಡ್ ಅಥವಾ ಬಯಾಪ್ಸಿ ಮೂಲಕ ರೋಗನಿರ್ಣಯವನ್ನು ಖಚಿತಪಡಿಸಿಕೊಳ್ಳಬೇಕಾಗುತ್ತದೆ.

ಮಹಿಳೆಯರು ಗಮನಿಸಬೇಕಾದ ಲಕ್ಷಣಗಳು

ಮ್ಯಾಮೊಗ್ರಫಿ ಪರೀಕ್ಷೆಯೊಂದೇ ಸ್ತನ ಕ್ಯಾನ್ಸರ್ ಪತ್ತೆಗೆ ಸಾಕಾಗುವುದಿಲ್ಲ. ವಯಸ್ಸು ಅಥವಾ ಹಿಂದಿನ ಪರೀಕ್ಷೆಯ ವರದಿ ಸಾಮಾನ್ಯವಾಗಿದ್ದರೂ ಸ್ತನದಲ್ಲಿ ಹೊಸದಾಗಿ ಗಡ್ಡೆ ಕಾಣಿಸಿಕೊಂಡರೆ, ಮೊಲೆತೊಟ್ಟಿನಿಂದ ದ್ರವ ಸ್ರವಿಸಿದರೆ, ಮೊಲೆತೊಟ್ಟು ಒಳಮುಖವಾಗಿ ಎಳೆದುಕೊಂಡರೆ, ಚರ್ಮದಲ್ಲಿ ಗುಳಿ ಬಿದ್ದರೆ ಅಥವಾ ಸ್ತನದ ಆಕಾರದಲ್ಲಿ ಅಸಹಜ ಬದಲಾವಣೆ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ಪ್ರತಿಯೊಬ್ಬ ಮಹಿಳೆಯ ವಯಸ್ಸು, ಕುಟುಂಬದ ಆರೋಗ್ಯ ಇತಿಹಾಸ ಹಾಗೂ ವೈಯಕ್ತಿಕ ಅಪಾಯಕಾರಿ ಅಂಶಗಳನ್ನು ಆಧರಿಸಿ ತಪಾಸಣೆಯ ಶಿಫಾರಸುಗಳು ಬದಲಾಗಬಹುದು. ಆದ್ದರಿಂದ ವೈದ್ಯರ ಸಲಹೆಯಂತೆ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯ.

ಅರಿವು ಮತ್ತು ಸಮಯೋಚಿತ ತಪಾಸಣೆ ಮುಖ್ಯ

ಮುಂದಿನ ದಿನಗಳಲ್ಲಿ ಸ್ತನ ಕ್ಯಾನ್ಸರ್ ಪತ್ತೆಹಚ್ಚುವಲ್ಲಿ ಎಐ ಮಹತ್ವದ ನೆರವು ನೀಡಬಹುದಾದರೂ, ತಂತ್ರಜ್ಞಾನವನ್ನೇ ಸಂಪೂರ್ಣವಾಗಿ ಅವಲಂಬಿಸುವುದು ಆರಂಭಿಕ ಪತ್ತೆಗೆ ಖಾತರಿಯಲ್ಲ. ಅರಿವು, ಸಮಯೋಚಿತ ವೈದ್ಯಕೀಯ ಸಮಾಲೋಚನೆ, ಸೂಕ್ತ ಪರೀಕ್ಷೆಗಳು ಹಾಗೂ ಅಗತ್ಯ ಚಿಕಿತ್ಸಾ ಕ್ರಮಗಳು ಅತ್ಯಗತ್ಯ.

ಎಐನ ನಿಜವಾದ ಮೌಲ್ಯವು ವೈದ್ಯರಿಗೆ ಹೆಚ್ಚು ನಿಖರವಾದ ನಿರ್ಧಾರಗಳನ್ನು ತೆಗೆದುಕೊಳ್ಳಲು ನೆರವಾಗುವುದರಲ್ಲಿದೆ. ಇದು ಮಾನವ ಪರಿಣತಿಗೆ ಪರ್ಯಾಯವಾಗದೆ, ವೈದ್ಯಕೀಯ ಆರೈಕೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸುವ ಪೂರಕ ಸಾಧನವಾಗಿದೆ ಎಂದು ಡಾ. ರಿತು ದವೆ ಅಭಿಪ್ರಾಯಪಡುತ್ತಾರೆ.

ವೈದ್ಯಕೀಯ ಸೂಚನೆ: ಈ ಲೇಖನವು ಸಾಮಾನ್ಯ ಆರೋಗ್ಯ ಮಾಹಿತಿ ಉದ್ದೇಶಕ್ಕಾಗಿ ಮಾತ್ರ. ಯಾವುದೇ ಲಕ್ಷಣಗಳು ಕಂಡುಬಂದಲ್ಲಿ ಅಥವಾ ತಪಾಸಣೆ ಕುರಿತು ನಿರ್ಧಾರ ಕೈಗೊಳ್ಳುವ ಮೊದಲು ಅರ್ಹ ವೈದ್ಯರನ್ನು ಸಂಪರ್ಕಿಸಬೇಕು.

ಅಂಬರೀಶ್ ರಸ್ತೆಯನ್ನು ಆಕರ್ಷಣೀಯ ಸ್ಥಳವನ್ನಾಗಿ ರೂಪಿಸಿ: ಮಹೇಶ್ವರ್ ರಾವ್

● ವಿಕ್ರಮ ವಾಹಿನಿ । ಬೆಂಗಳೂರು

ಡಾ. ಎಂ.ಎಚ್. ಅಂಬರೀಶ್ ರಸ್ತೆ (ರೇಸ್ ಕೋರ್ಸ್ ರಸ್ತೆ)ಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಪ್ರಗತಿಯಲ್ಲಿದ್ದು, ಈ ರಸ್ತೆಯನ್ನು ಆಕರ್ಷಣೀಯ ಸ್ಥಳವನ್ನಾಗಿ ಅಭಿವೃದ್ಧಿಪಡಿಸಲು ಸಮಗ್ರ ಯೋಜನೆ ರೂಪಿಸುವಂತೆ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಮೌರ್ಯ ಜಂಕ್ಷನ್ ಬಳಿಯ ರೇಸ್ ಕೋರ್ಸ್ ಭಾಗದಲ್ಲಿ ಸಾಕಷ್ಟು ಸ್ಥಳಾವಕಾಶವಿದ್ದು, ಅಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸಾರ್ವಜನಿಕ ಸ್ಥಳ (ಪಬ್ಲಿಕ್ ಸ್ಪೇಸ್) ನಿರ್ಮಿಸುವ ಮೂಲಕ ಹಸಿರು ಕಾರಿಡಾರ್ ಅಭಿವೃದ್ಧಿಪಡಿಸಲು ಸೂಚಿಸಿದರು.

ಡಾ. ಎಂ.ಎಚ್. ಅಂಬರೀಶ್ ರಸ್ತೆ, ಮೌರ್ಯ ಸರ್ಕಲ್‌ನಿಂದ ಹರೇಕೃಷ್ಣ ಜಂಕ್ಷನ್‌ವರೆಗಿನ ಸುಮಾರು 900 ಮೀಟರ್ ಉದ್ದದ ರಸ್ತೆಯ ವೈಟ್ ಟಾಪಿಂಗ್ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಪಾದಚಾರಿ ಮಾರ್ಗ ಹಾಗೂ ಬಫರ್ ವಲಯದ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಈ ಪ್ರದೇಶದಲ್ಲಿ ಆಕರ್ಷಕ ಬೀದಿ ದೀಪಗಳನ್ನು ಅಳವಡಿಸುವುದರ ಜೊತೆಗೆ ಸಸಿಗಳನ್ನು ನೆಡಬೇಕು. ಅಲ್ಲದೆ, ಸಾರ್ವಜನಿಕರು ವಿಶ್ರಾಂತಿ ಪಡೆಯಲು ಅನುಕೂಲವಾಗುವಂತೆ ಆಸನಗಳ ವ್ಯವಸ್ಥೆ ಮಾಡಬೇಕೆಂದು ನಿರ್ದೇಶನ ನೀಡಿದರು.



ಈ ರಸ್ತೆಯಲ್ಲಿ ನಾಗರಿಕರು ಹಾಗೂ ಪ್ರಯಾಣಿಕರ ಸಂಚಾರ ಹೆಚ್ಚಿರುವುದರಿಂದ ರಸ್ತೆ ಬದಿಯಲ್ಲಿ ಮೂತ್ರ ವಿಸರ್ಜನೆ ಮಾಡುವುದನ್ನು ತಡೆಯಲು ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಬೇಕು. ಜೊತೆಗೆ, ಪಾದಚಾರಿ ಮಾರ್ಗದ ಪಕ್ಕದಲ್ಲಿ ಸೈಕಲ್ ಟ್ರ್ಯಾಕ್ ನಿರ್ಮಿಸುವಂತೆಯೂ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

<u>ಲಿಂಕ್ ರಸ್ತೆ ಪರಿಶೀಲನೆ:</u> ಮಲ್ಲೇಶ್ವರಂ ಲಿಂಕ್ ರಸ್ತೆ ಹಾಗೂ 5ನೇ ಕ್ರಾಸ್ ರಸ್ತೆ ಸೇರಿದಂತೆ ಒಟ್ಟು 780 ಮೀಟರ್ ಉದ್ದದ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಉಪಯುಕ್ತ ಸೇವೆಗಳ ಸ್ಥಳಾಂತರ ಹಾಗೂ ಒಳಚರಂಡಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಸ್ಮಾರ್ಟ್ ಬಜಾರ್ ಮುಂಭಾಗದಲ್ಲಿ ಸಾಕಷ್ಟು ಸ್ಥಳಾವಕಾಶವಿದ್ದು, ಸಾರ್ವಜನಿಕರಿಗೆ ಬಹುಪಯೋಗವಾಗುವ ರೀತಿಯಲ್ಲಿ ಯೋಜನೆ ರೂಪಿಸಿ ಕಾಮಗಾರಿ ಕೈಗೊಳ್ಳಬೇಕು. ಅಲ್ಲಿರುವ ಸಾರ್ವಜನಿಕ ಶೌಚಾಲಯವನ್ನು ನವೀಕರಿಸುವುದರ ಜೊತೆಗೆ ಪಾದಚಾರಿ ಮಾರ್ಗ ನಿರ್ಮಿಸಿ, ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲು ನಿರ್ದೇಶನ ನೀಡಿದರು.

<u>ಫ್ಲಾಟ್‌ಫಾರ್ಮ್ ರಸ್ತೆ ಪರಿಶೀಲನೆ:</u> ಫ್ಲಾಟ್‌ಫಾರ್ಮ್ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಂಡಿದ್ದರೂ, ಪಾದಚಾರಿ ಮಾರ್ಗವನ್ನು ಸಮರ್ಪಕವಾಗಿ ನಿರ್ಮಿಸದಿರುವುದನ್ನು ಗಮನಿಸಿದ ಮುಖ್ಯ ಆಯುಕ್ತರು, ಎಲ್ಲೆಲ್ಲಿ ಸಮಸ್ಯೆಗಳಿವೆಯೋ ಅವುಗಳನ್ನು ತಕ್ಷಣ ಸರಿಪಡಿಸುವಂತೆ ಸೂಚಿಸಿದರು. ಅಲ್ಲದೆ, ರ್‍ಯಾಂಪ್‌ಗಳ ಮೇಲೆ ವಾಹನಗಳ ಸಂಚಾರದಿಂದ ಪಾದಚಾರಿ ಮಾರ್ಗ ಹಾನಿಗೊಳಗಾಗಿರುವುದನ್ನು ಗಮನಿಸಿ, ಸಂಬಂಧಪಟ್ಟವರ ವಿರುದ್ಧ ದಂಡ ವಿಧಿಸುವಂತೆ ಸೂಚನೆ ನೀಡಿದರು.

ಮೆಟ್ರೋ ಹಳಿಗಳ ಕೆಳಭಾಗದಲ್ಲಿ ಕಳೆ ಹಾಗೂ ಗಿಡಗಂಟಿಗಳು ಬೆಳೆದಿದ್ದು, ಅವುಗಳನ್ನು ತೆರವುಗೊಳಿಸಿ ಫೇವರ್ ಬ್ಲಾಕ್‌ಗಳನ್ನು ಅಳವಡಿಸುವ ಮೂಲಕ ಸದಾ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಮಂತ್ರಿ ಮಾಲ್ ಪಕ್ಕದಲ್ಲಿರುವ ಎರಡು ಬಹುಮಹಡಿ ಕಟ್ಟಡಗಳ ಮೇಲ್ಭಾಗದಲ್ಲಿ ಕ್ರೇನ್‌ಗಳನ್ನು ಹಾಗೆಯೇ ಬಿಡಲಾಗಿದ್ದು, ಇದರಿಂದ ಅಪಘಾತ ಸಂಭವಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಕಟ್ಟಡ ಮಾಲೀಕರೊಂದಿಗೆ ಮಾತನಾಡಿ, ಕೂಡಲೇ ಕ್ರೇನ್‌ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

<u>ಓಕಳೀಪುರಂ ಕಾಮಗಾರಿ ಪರಿಶೀಲನೆ:</u> ಓಕಳೀಪುರಂ ಅಷ್ಟಪಥ ಕಾರಿಡಾರ್‌ನಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪರಿಶೀಲಿಸಿದ ಅವರು, ರಿಟೈನಿಂಗ್ ವಾಲ್‌ನ ಒಂದು ಭಾಗದ ಕಾಮಗಾರಿ ಪೂರ್ಣಗೊಂಡಿದ್ದು, ಉಳಿದ ಭಾಗಗಳಲ್ಲಿ ಕೆಪಿಟಿಸಿಎಲ್ ಕೇಬಲ್‌ಗಳು ಹಾಗೂ ಬೃಹತ್ ಬಂಡೆಗಳಿರುವ ಕಾರಣ ಕಾಮಗಾರಿ ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂಬ ಮಾಹಿತಿ ಪಡೆದರು. ಈ ಸಂಬಂಧ ಕೇಬಲ್‌ಗಳನ್ನು ತೆರವುಗೊಳಿಸಲು ಕೆಪಿಟಿಸಿಎಲ್‌ಗೆ ಕೂಡಲೇ ಪತ್ರ ಬರೆದು, ರಿಟೈನಿಂಗ್ ವಾಲ್ ಕಾಮಗಾರಿ ಕೈಗೆತ್ತಿಕೊಳ್ಳಲು ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶೀಲನೆಯ ವೇಳೆ ಅಪರ ಆಯುಕ್ತರಾದ ವೆಂಕಟ ಚಲಪತಿ, ಮುಖ್ಯ ಅಭಿಯಂತರರಾದ ವಿಜಯ್ ಕುಮಾರ್ ಹರಿದಾಸ್, ರವಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಐಟಿಯ ಕೌಶಲ್ಯ ಅಭಿವೃದ್ಧಿಗೆ ಹಿರಿಯ ವಿದ್ಯಾರ್ಥಿಯಿಂದ 10 ಲಕ್ಷ ರೂ. ದೇಣಿಗೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಒಕ್ಕಲಿಗರ ಸಂಘದ ಅದೀನ ಸಂಸ್ಥೆಯಾದ ಬೆಂಗಳೂರು ತಾಂತ್ರಿಕ ಮಹಾ ವಿದ್ಯಾಲಯ (ಬಿಐಟಿ)ದ ಹಿರಿಯ ವಿದ್ಯಾರ್ಥಿ ಹಾಗೂ ಪ್ಯಾರಾಮೌಂಟ್ ನ್ಯೂಟ್ರಿಷನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಬಿ. ಕೃಷ್ಣಪ್ಪ ರವರು, ಸಂಸ್ಥೆಯ ಶೈಕ್ಷಣಿಕ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ.

ಬಿಐಟಿಯ ನೂತನ ಕಟ್ಟಡದಲ್ಲಿ ಸ್ಥಾಪಿಸಲಿರುವ ಉತ್ಕೃಷ್ಟತಾ ಕೇಂದ್ರ ಮತ್ತು ಕೌಶಲ್ಯ ಅಭಿವೃದ್ಧಿ ಪ್ರಯೋಗಾಲಯದ ಅಭಿವೃದ್ಧಿ ಕಾರ್ಯಗಳಿಗಾಗಿ ಅವರು 10 ಲಕ್ಷ ರೂ.ಗಳ ದೇಣಿಗೆಯನ್ನು ನೀಡಿದ್ದಾರೆ.

ಇದೇ ಸಂದರ್ಭದಲ್ಲಿ, ಆರ್ಥಿಕವಾಗಿ ಹಿಂದುಳಿದ ಹಾಗೂ ಅಗತ್ಯವಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಉಚಿತ ವಿದ್ಯಾರ್ಥಿ ವಸತಿ ನಿಲಯವನ್ನು ನಿರ್ಮಿಸುವುದಕ್ಕೂ ಹಿರಿಯ ವಿದ್ಯಾರ್ಥಿಗಳು ಸಿದ್ಧರಿದ್ದಾರೆ ಎಂದು ಅವರು ಭರವಸೆ ನೀಡಿದರು. ಸಂಸ್ಥೆಯ ಅಭಿವೃದ್ಧಿಯಲ್ಲಿ ಹಿರಿಯ ವಿದ್ಯಾರ್ಥಿಗಳ ಸಕ್ರಿಯ ಪಾಲ್ಗೊಳ್ಳುವಿಕೆ ಮತ್ತು ಸಾಮಾಜಿಕ ಹೊಣೆಗಾರಿಕೆಯ ಬದ್ಧತೆಯನ್ನು ಈ ಕೊಡುಗೆ ಪ್ರತಿಬಿಂಬಿಸುತ್ತದೆ.

ಈ ಸಂದರ್ಭದಲ್ಲಿ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಎಲ್. ಶ್ರೀನಿವಾಸ್, ಗೌರವಾಧ್ಯಕ್ಷರಾದ ಬಿ. ಕೆಂಚಪ್ಪ ಗೌಡ, ಉಪಾಧ್ಯಕ್ಷ ಪುಟ್ಟಸ್ವಾಮಿ, ಕೊಳ್ಳುವ ಸಮಿತಿ ಅಧ್ಯಕ್ಷ ಎನ್. ಬಾಲಕೃಷ್ಣ ಹಾಗೂ ಬಿಐಟಿ ಅಧ್ಯಕ್ಷ ಅಶೋಕ್ ಎಸ್.ಡಿ. ಜಯರಾಮ್ ಉಪಸ್ಥಿತರಿದ್ದರು.

ಹೇಳಿಕೆ ಬದಲಿಸಿದ ಆ ಮಹಿಳೆಯನ್ನು ನ್ಯಾಯಾಲಯದ ಮುಂದೆ ಏಕೆ ಹಾಜರುಪಡಿಸಿಲ್ಲ: ಹೆಚ್‌ಡಿಕೆ

● ವಿಕ್ರಮ ವಾಹಿನಿ । ಮುಖಪುಟದಿಂದ

ಅಷ್ಟೇ ಅಲ್ಲ, ಸ್ಟಿಂಗ್ ಆಪರೇಷನ್ ಎನ್ನುವುದು ಕಟ್ಟುಕಥೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಪೊಲೀಸರು ಹೇಳಿದ್ದಾರೆ.

ಕಟ್ಟುಕಥೆ ಎಂದಾದ ಮೇಲೆ ಇನ್ನೂ ತನಿಖೆ ಯಾಕೆ ಮಾಡುತ್ತಿದ್ದೀರಿ? ಯಾರ ವಿರುದ್ಧ ಸಂಚು ಮಾಡಲು ತನಿಖೆ ಮುಂದುವರಿಸಿದ್ದೀರಿ ಎಂದು ಅವರು ಪ್ರಶ್ನೆ ಮಾಡಿದರು.

ಅಷ್ಟೇ ಅಲ್ಲ, ಕೇರಳಕ್ಕೆ ಹೋಗಿ ಸ್ಟಿಂಗ್ ಮಾಡಿದ್ದು ನಾನೇ. ಐ ಯಾಮ್ ಕಿಂಗ್ ಆಫ್ ಸ್ಟಿಂಗ್, ವೀಡಿಯೋದಲ್ಲಿ ಇರುವ ಧ್ವನಿಯೂ ನನ್ನದೇ ಎಂದು ಒಪ್ಪಿಕೊಂಡಿರುವ ವ್ಯಕ್ತಿಯನ್ನು ಇನ್ನೂ ಬಂಧಿಸಿಲ್ಲ ಯಾಕೆ? ರಾಕೇಶ್ ಶೆಟ್ಟಿ, ಕೃಪಾ ಆಳ್ವ ಸೇರಿ ನನ್ನ ವಿರುದ್ಧ ಸ್ಟಿಂಗ್ ಮಾಡಿದ್ದಾರೆ ಎಂದು ಹೇಳಿದ್ದಾರೆ. ಅವರ ಪುತ್ರ, ಸಚಿವ ಯತೀಂದ್ರ ಅವರು ಇದೇ ಹೆಸರುಗಳನ್ನು ಹೇಳಿದ್ದಾರೆ. ಹಾಗಿದ್ದ ಮೇಲೆ ಅವರನ್ನು ಯಾಕೆ ಬಂಧನ ಮಾಡಲಿಲ್ಲ? ತನಿಖೆಯಲ್ಲಿ ಅವರಿಗೊಂದು, ಇವರಿಗೊಂದು ಎನ್ನುವುದು ಇರುತ್ತದಾ? ಎಂದು ಸಚಿವರು ತೀಕ್ಷ್ಣವಾಗಿ ಪ್ರಶ್ನಿಸಿದರು.

ಈ ತನಿಖೆಯ ಬಗ್ಗೆ ಸಾಕಷ್ಟು ಅನುಮಾನಗಳು ಇವೆ. ಶುರುವಿನಲ್ಲಿ ತನಿಖಾಧಿಕಾರಿ ಆಗಿದ್ದ ಇನ್ಸ್‌ಪೆಕ್ಟರ್ ಹಂತದ ಅಧಿಕಾರಿಯನ್ನು ಅಲ್ಲಿಂದ ತೆಗೆದು ಹಾಕಿದರು. ನಂತರ ಇನ್ನೊಬ್ಬ ಅಧಿಕಾರಿಯನ್ನು ನೇಮಕ ಮಾಡಿದ್ದಾರೆ. ಇದು ಪ್ರಶ್ನಾರ್ಹವಾಗಿದೆ ಎಂದರು ಸಚಿವರು.

<u>ತನಿಖೆ ನಿಷ್ಪಕ್ಷಪಾತವಾಗಿ ನಡೆಯುತ್ತಿಲ್ಲ:</u> ತನಿಖೆ ನಿಷ್ಪಕ್ಷಪಾತವಾಗಿ ನಡೆಯುತ್ತಿದೆ ಎನ್ನುವುದೇ ಅನುಮಾನ ಎಂದ ಕುಮಾರಸ್ವಾಮಿ, ಸ್ಟಿಂಗ್ ಆಪರೇಷನ್ ವಿಡಿಯೋ ಅಸಲಿಯೇ ಅಥವಾ ಕೃತಕವಾಗಿ ಸೃಷ್ಟಿಸಿದ್ದೇ ಎಂಬುದನ್ನು ಹಾಗೂ ಅದನ್ನು ಉದ್ದೇಶಪೂರ್ವಕವಾಗಿ ಎಡಿಟ್ ಮಾಡಲಾಗಿದೆಯೇ ಅಥವಾ ವ್ಯವಸ್ಥಿತವಾಗಿ ರೂಪಿಸಲಾಗಿದೆಯೇ ಎಂಬುದನ್ನು ಪೊಲೀಸರು ಪರಿಶೀಲಿಸಬೇಕು. ತಮ್ಮ ಹೊಣೆಗಾರಿಕೆಯನ್ನು ಅವರು ಸರಿಯಾಗಿ ನಿರ್ವಹಣೆ ಮಾಡುತ್ತಿದ್ದಾರೆಯೇ? ಎಂದರು.

ಪೊಲೀಸರು ಏಕಪಕ್ಷೀಯವಾಗಿ ನಡೆಯುತ್ತಿದೆ. ಅದರ ಬಗ್ಗೆ ನನಗೆ ಮಾಹಿತಿ ಇದೆ. ನಮ್ಮ ಪಕ್ಷದ ಸೋಶಿಯಲ್ ಮೀಡಿಯಾ ವಿಭಾಗದಲ್ಲಿ ಕೆಲಸ ಮಾಡುವ ಯುವಕನ ಮನೆಗೆ ಸರ್ಚ್ ಮಾಡಲು ಹೋಗಿದ್ದ ಪೊಲೀಸರು ಮೊಬೈಲ್‌ಗಾಗಿ ಅವರ ಪತ್ನಿಯ ಮೇಲೆ ಹಲ್ಲೆ ನಡೆಸುತ್ತಾರೆ. ಬ್ಯಾಂಕ್ ಪಾಸ್ ಬುಕ್ ತೆಗೆದುಕೊಂಡು ಬನ್ನಿ ಎಂದು ಹೇಳುತ್ತಾರೆ. ಸರ್ಚ್ ಮುಗಿಸಿಕೊಂಡು ವಾಪಸ್ ಬಂದ ಮೇಲೆ ನನ್ನದು ಚಿನ್ನದ ಬ್ರಾಸ್ ಲೈಟ್ ಕಳೆದುಹೋಗಿದೆ ಎಂದು ನಮ್ಮ ಕಾರ್ಯಕರ್ತನ ಪತ್ನಿಯ ಮೇಲೆ ಎಫ್ ಐಆರ್ ಮಾಡಿಸುತ್ತಾರೆ. ಅವರ ಮನೆಯ ನೆರೆಹೊರೆಯವರ ಮೇಲೆಯೂ ಪೊಲೀಸರು ಪ್ರಕರಣ ದಾಖಲು ಮಾಡಿದ್ದಾರೆ. ಇದನ್ನು ಇದನ್ನು ತನಿಖೆ ಎಂದು ಹೇಳಲು ಸಾಧ್ಯವೇ ಎಂದು ಕೇಂದ್ರ ಸಚಿವರು ಪ್ರಶ್ನಿಸಿದರು.

<u>ತನಿಖೆ ನೆಪದಲ್ಲಿ ಪೊಲೀಸರು ನಮ್ಮವರನ್ನು ಬೆದರಿಸುತ್ತಿದ್ದಾರೆ:</u> ತನಿಖೆ ನೆಪದಲ್ಲಿ ಪೊಲೀಸರು ನಮ್ಮವರನ್ನು ಬೆದರಿಸುತ್ತಿದ್ದಾರೆ ಎಂದ ಸಚಿವ ಕುಮಾರಸ್ವಾಮಿ ಅವರು; ಒಂದೇ ದಿಕ್ಕಿನಲ್ಲಿ ತನಿಖೆ ನಡೆಯುತ್ತಿದೆ ಎಂಬುದು ಎಲ್ಲರಿಗೂ ಗೊತ್ತಾಗುತ್ತಿದೆ. ಬೆಂಗಳೂರು ಪೊಲೀಸರು ಬಿಡುಗಡೆ ಮಾಡಿರುವ ಪತ್ರಿಕಾ ಹೇಳಿಕೆ ಹಾಗೂ ಪೊಲೀಸ್ ಆಯುಕ್ತ ನೀಡಿರುವ ಹೇಳಿಕೆಗಳು ಕೂಡ ಪರಸ್ಪರ ವೈರುಧ್ಯಗಳಿವೆ.

ಅಪ್ಲೋಡ್ ಮಾಡಿರುವ ವಿಷಯದ ಬಗ್ಗೆ ಇವರು ತೋರಿಸುತ್ತಿರುವ ಕಾಳಜಿ, ಸ್ಟಿಂಗ್ ಮಾಡಿ ವಿಡಿಯೋ ರೆಕಾರ್ಡಿಂಗ್ ಮಾಡಿರುವ ಪಿತೂರಿಯ ಬಗ್ಗೆ ತನಿಖೆಯನ್ನು ಮಾಡುತ್ತಿಲ್ಲ ಎಂದು ಸಚಿವರು ದೂರಿದರು.

ನೂರಾರು ಸ್ಟ್ರಿಂಗ್ ವಿಡಿಯೋಗಳನ್ನು ಮಾಡಿಕೊಂಡು ಅಧಿಕಾರಿಗಳು, ಉದ್ದಿಮೆದಾರರು ಹಾಗೂ ಅನೇಕ ಗಣ್ಯ ವ್ಯಕ್ತಿಗಳನ್ನು ಬ್ಲಾಕ್ ಮೇಲ್ ಮಾಡಿ ಹಣ ವಸೂಲಿ ಮಾಡುತ್ತಿರುವ ಪ್ರವೃತ್ತಿಯನ್ನು ಮಟ್ಟ ಹಾಕದಿದ್ದರೆ ಅದು ಪೊಲೀಸ್ ಇಲಾಖೆಗೆ ಕಂಟಕವಾಗುತ್ತದೆ ಎಂದು ಎಚ್ಚರಿಸಿದ ಕೇಂದ್ರ ಸಚಿವರು; ನಾನು ಯಾವುದೇ ವ್ಯಕ್ತಿಯನ್ನು ವೈಯಕ್ತಿಕವಾಗಿ ಗುರಿ ಮಾಡಿಕೊಂಡು ಈ ವಿಷಯವನ್ನು ಹೇಳುತ್ತಿಲ್ಲ. ಬದಲಿಗೆ ಸಮಾಜದ ಹಿತದೃಷ್ಟಿಯಿಂದ ಇಷ್ಟೆಲ್ಲವನ್ನು ಹೇಳಬೇಕಾಗುತ್ತದೆ ಎಂದರು.

<u>ಮಾಧ್ಯಮಗೋಷ್ಠಿಯಲ್ಲಿ ಡಿಕೆಶಿ ಭಾಷಣ ಕೇಳಿಸಿದ ಎಚ್ಡಿಕೆ:</u> ಹಿಂದೆ ಡಿಕೆ ಶಿವಕುಮಾರ್ ಅವರು ವಿಧಾನಸಭೆಯಲ್ಲಿ ಗಂಟೆಗಟ್ಟಲೆ ಭಾಷಣ ಮಾಡಿದರು. ರಮೇಶ್ ಜಾರಕಿಹೊಳಿ ಪ್ರಕರಣದಲ್ಲಿ ನಡೆಯುತ್ತಿದ್ದ ತನಿಖೆಯ ಕುರಿತಂತೆ ಅವರು ದೀರ್ಘವಾಗಿ ಚರ್ಚೆ ಮಾಡಿ ಪೊಲೀಸರ ತನಿಖೆ ಯಾವ ದಿಕ್ಕಿನಲ್ಲಿ ಇರಬೇಕು ಎಂಬ ಬಗ್ಗೆ ಉಪದೇಶ ಮಾಡಿದ್ದರು.

ಪೊಲೀಸರು ನಿಷ್ಪಕ್ಷಪಾತವಾಗಿ ತನಿಖೆ ಮಾಡಬೇಕು ಎಂದು ಭಾಷಣ ಬಿಗಿದಿದ್ದರು. ಅಂತಹ ವ್ಯಕ್ತಿ ಮುಖ್ಯಮಂತ್ರಿಯಾಗಿರುವ ಈ ಸರಕಾರದಲ್ಲಿ ತನಿಖೆ ಯಾವ ರೀತಿ ನಡೆಯುತ್ತಿದೆ ಎಂಬುದು ಎಂಬುದನ್ನು ನಾವು ನೋಡುತ್ತಿದ್ದೇವೆ ಎಂದು ಸಚಿವ ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು. ನನ್ನ ಬಳಿ ತಾಂತ್ರಿಕ ಸಾಕ್ಷಿಗಳಿವೆ ಎಂದು ಗೃಹ ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ. ಒಂದು ವೇಳೆ ಅವರು ಬಳಿ ಅಂತಹ ಸಾಕ್ಷಿಗಳಿದ್ದರೆ ಗಂಧದ ಕಡ್ಡಿ ಹಚ್ಚಿ ಪೂಜೆ ಮಾಡಲಿ ಎಂದು ಕೇಂದ್ರ ಸಚಿವರು ಲೇವಡಿ ಮಾಡಿದರು.

ಹಾಗೆಯೇ ಪೊಲೀಸ್ ಆಯುಕ್ತರು ಮುಖ್ಯಮಂತ್ರಿ ಮತ್ತು ಗೃಹ ಸಚಿವರ ಒತ್ತಡಕ್ಕೆ ಮಾಡಿದ ನನ್ನ ಬಗ್ಗೆ ರಜಾದಿನವಾದ ಭಾನುವಾರ ಹೇಳಿಕೆ ನೀಡಿದ್ದಾರೆ. ಮುಖ್ಯಮಂತ್ರಿಯನ್ನು ಓಲೈಸಲು ಇಂತಹ ಹೇಳಿಕೆ ನೀಡಿ ತಾವೇ ಮುಜುಗರಕ್ಕೆ ಸಿಲುಕಿದ್ದಾರೆ.

ತನಿಖಾ ಹಂತದಲ್ಲಿ ಯಾವುದೇ ವಿಷಯವನ್ನು ಬಹಿರಂಗವಾಗಿ ಹೇಳಬಾರದು ಎನ್ನುವ ಸುಪ್ರೀಂ ಕೋರ್ಟ್ ಆದೇಶವನ್ನು ಅವರು ಸ್ಪಷ್ಟವಾಗಿ ಉಲ್ಲಂಘಿಸಿದ್ದಾರೆ ಎಂದು ಸಚಿವರು ಹೇಳಿದರು.

<u>ಡಿಜಿ ಸಲೀಂ ಅವರಿಗೆ ಮಾರ್ಮಿಕ ಎಚ್ಚರಿಕೆ:</u> ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಸಲೀಂ ಅವರ ಬಗ್ಗೆ ಅತ್ಯಂತ ಖಾರವಾಗಿ ಪ್ರತಿಕ್ರಿಯಿಸಿದ ಸಚಿವ ಕುಮಾರಸ್ವಾಮಿ ಅವರು; ಸಲೀಂ ಅವರೇ ಚಕ್ರ ತಿರುಗುತ್ತದೆ. ಮೇಲೆ ಇದ್ದವರು ಕೆಳಗಡೆ ಬರಬೇಕು, ಕೆಳಗಡೆ ಇರುವವರು ಮೇಲೆ ಹೋಗಲೇಬೇಕು. ಇದು ಪ್ರಕೃತಿ ನಿಯಮ. ಒತ್ತಡಕ್ಕೆ ಮಣಿದು ಕೆಲಸ ಮಾಡಬೇಡಿ. ಮರ್ಜಿಗೆ ಕೆಲಸ ಮಾಡಿದರೆ ಅಪಾಯಕ್ಕೆ ಸಿಲುಕುವುದು ನೀವೇ ಆಗಿರುತ್ತೀರಿ ಎಂದು ನೇರವಾಗಿ ಎಚ್ಚರಿಕೆ ನೀಡಿದರು.

ಕರ್ನಾಟಕ ರಾಜ್ಯೋತ್ಸವದ ದಿನ ಈ ಸರಕಾರ ಯಾವ ರೀತಿ ಕರಾಮತ್ತು ನಡೆಸಿದೆ ಎಂಬುದನ್ನು ನಾನು ಗಮನಿಸಿದ್ದೇನೆ. ಅಸಲಿ ಆರೋಪಿಗಳನ್ನು ಬಿಟ್ಟು ಕೇವಲ ವಿಡಿಯೋ ಅಪ್ ಲೋಡ್ ನೆಪದಲ್ಲಿ ನಮ್ಮ ಕಾರ್ಯಕರ್ತರ ಬೆನ್ನು ಬಿದ್ದಿದ್ದೀರಿ. ಅದರಲ್ಲಿ ನನ್ನ ಹೆಸರನ್ನು ಹೇಳಿದ ತಂದಿದ್ದೀರಿ. ನಾನು ನಿಮ್ಮ ಬೆದರಿಕೆಗಳಿಗೆ ಹೆದರುವ ಪೈಕಿಯಲ್ಲ. ಬೇಕಿದ್ದರೆ ನನ್ನನ್ನು ಒಮ್ಮೆ ಟಚ್ ಮಾಡಿ ನೋಡಿ. ಅದು ಹೋಗಿ ಎಲ್ಲಿಗೆ ಮುಟ್ಟುತ್ತದೆ ಎಂಬುದು ನಿಮಗೆ ಗೊತ್ತಾಗುತ್ತದೆ. ಅಪಾಯದ ಜೊತೆ ನೀವು ಚೆಲ್ಲಾಟ ಆಡುತ್ತಿದ್ದೀರಿ. ನೀವೆಲ್ಲರೂ ತಕ್ಕ ಪಾಠ ಅನುಭವಿಸುತ್ತೀರಿ ಎಂದು ಸಚಿವರು ಎಚ್ಚರಿಕೆ ನೀಡಿದರು.

ಕ್ರಾಂತಿ ಆಗುವ ಮೊದಲು ಕಾಂಗ್ರೆಸ್ಸಿನವರು ಅಧಿಕಾರ ಬಿಟ್ಟು ತೊಲಗಲಿ: ಶೋಭಾ ಕರಂದ್ಲಾಜೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಕ್ರಾಂತಿ ಆಗುವ ಮೊದಲು ಕಾಂಗ್ರೆಸ್ಸಿನವರು ಅಧಿಕಾರ ಬಿಟ್ಟು ತೊಲಗಲಿ. ಇಲ್ಲದೇ ಇದ್ದರೆ ಏರಿಸಿರುವ ಎಲ್ಲ ಬೆಲೆಯನ್ನು ಕಡಿಮೆ ಮಾಡಿ, ನಮ್ಮ ರೈತರಿಗೆ ನ್ಯಾಯ ಕೊಡಿ ಎಂದು ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ಅವರು ಆಗ್ರಹಿಸಿದ್ದಾರೆ.

ಹಾಲಿನ ಬೆಲೆ ಏರಿಕೆಯನ್ನು ಖಂಡಿಸಿ ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ವತಿಯಿಂದ ಇಂದು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಳೆದ ಮೂರ್ನಾಲ್ಕು ತಿಂಗಳಲ್ಲಿ ರಾಜ್ಯ ಸರಕಾರದ ಆಡಳಿತ ಶೂನ್ಯಕ್ಕೆ ಬಂದಿದೆ. ಇವತ್ತು ತಳಮಟ್ಟಕ್ಕೆ ಬಂದಿದೆ. ಆ ಪರಿಸ್ಥಿತಿ ರಾಜ್ಯದಲ್ಲಿ ನಿರ್ಮಾಣ ಆಗಿದೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳೇ ಕನ್ನಡ ರಾಜ್ಯೋತ್ಸವದ ಕೊಡುಗೆ ಏನು? ಎಂದು ಕೇಳಿದ ಅವರು, ನೀವು ಬಹಳ ದುಡ್ಡಿರುವವರು; ನಿಮ್ಮ ಮನೆಯಲ್ಲಿ ಬಿಸ್ಲೇರಿ ಕುಡಿಯಬಹುದು, ಆದರೆ ನಾವ್ಯಾರೂ ಬಿಸ್ಲೇರಿಯನ್ನು ಕುಡಿಯುವವರಲ್ಲ. ನಾವು ನಮ್ಮ ತಾಯಿ ಕಾವೇರಿಯ ನೀರನ್ನೇ ಕುಡಿಯುತ್ತೇವೆ ಎಂದು ತಿಳಿಸಿದರು.

ನಿಮ್ಮ ಅಂತಸ್ತನ್ನು ನೋಡಿ ರಾಜ್ಯದ ಜನರ ಅಂತಸ್ತು ನಿರ್ಧರಿಸದಿರಿ. ಹಾಲಿಗೆ ನೀವು ದುಡ್ಡು ಕೊಡಬಹುದು, ಆದರೆ ಯಾರು ಇವತ್ತು ದುಡಿದು ತಿಂತಿದ್ದಾರೋ, ಯಾರು ಹೋಟೆಲಲ್ಲಿ ಕೆಲಸ ಮಾಡಿ ಚಿಕ್ಕಪುಟ್ಟ ಸಂಬಳ ತಗೊಂಡು, ಟ್ಯಾಕ್ಸಿ ಓಡಿಸಿಕೊಂಡು, ಆಟೋರಿಕ್ಷಾ ಓಡಿಸಿಕೊಂಡು, ಬೀದಿಬದಿ ವ್ಯಾಪಾರ ಮಾಡಿಕೊಂಡು ಬದುಕುವವರಿಗೆ ಕಷ್ಟವಾಗಿದೆ. ಸಿಕ್ಕಿದ ಸಂಬಳದಲ್ಲಿ ಮನೆ ಬಾಡಿಗೆ ಕಟ್ಟಬೇಕು, ವಿದ್ಯುತ್ ಬಿಲ್ ಕಟ್ಟಬೇಕು, ನೀರಿನ ಬಿಲ್ ಕಟ್ಟಬೇಕು, ನೀವು ಹಾಕಿದಂತ ಕಸದ ಬಿಲ್ ಕಟ್ಟಬೇಕು. ಅದರ ಜೊತೆಗೆ ಪ್ರತಿವರ್ಷ ನೀವು ಏರಿಸುವ ಹಾಲಿನ ದರಕ್ಕೆ, ಮೊಸರಿನ ದರಕ್ಕೆ ದುಡ್ಡು ಕೊಡಬೇಕಾಗಿದೆ ಎಂದು ಆಕ್ಷೇಪಿಸಿದರು.

ಬರಗಾಲದ ಪರಿಹಾರಕ್ಕೆ ಹಲವಾರು ಷರತ್ತು..



ರಾಜ್ಯದಲ್ಲಿ ಮಳೆ ಬಂದಿಲ್ಲ; ತೀವ್ರ ಬರಗಾಲ ಇದೆ. ಸರಕಾರವು ರೈತರಿಗೆ ಎಕರೆಗೆ ಭಿಕ್ಷೆ ಕೊಟ್ಟ ಹಾಗೆ ಎರಡುವರೆ ಸಾವಿರ ರೂಪಾಯಿ ಕೊಟ್ಟಿದೆ ಎಂದು ಟೀಕಿಸಿದರು. ಯಡಿಯೂರಪ್ಪನವರ ಬಿಜೆಪಿ ಸರ್ಕಾರ ಕೇಂದ್ರ ಕೊಡುವ ಕಿಸಾನ್ ಸಮ್ಮಾನ್ ಯೋಜನೆಯ ಜೊತೆ 4000 ರೂಪಾಯಿ ಕೊಡುತ್ತಿತ್ತು. ಇವರು ಅಧಿಕಾರಕ್ಕೆ ಬಂದ ತಕ್ಷಣ ನಮ್ಮ ರೈತರಿಗೆ ಯಡಿಯೂರಪ್ಪನವರು ಕೊಡುವ ದುಡ್ಡನ್ನು ನಿಲ್ಲಿಸಿದ್ದಾರೆ. ಎರಡುವರೆ ಸಾವಿರ ಭಿಕ್ಷೆಗೆ 17-18 ನಿಯಮಾವಳಿ, ಷರತ್ತು ಹಾಕಿದ್ದಾರೆ ಎಂದು ಆಕ್ಷೇಪಿಸಿದರು.

ಗೃಹಲಕ್ಷ್ಮಿಯ 5000 ಕೋಟಿ ನಾಪತ್ತೆ

ಹಾಲಿನ ದರವನ್ನು ಹಲವು ಬಾರಿ ಏರಿಸಿದ್ದಾರೆ. ಗ್ಯಾರಂಟಿಗಳೂ ಸರಿಯಾಗಿ ಫಲಾನುಭವಿಗಳಿಗೆ ಸಿಗುತ್ತಿಲ್ಲ ಎಂದು ಆರೋಪಿಸಿದರು. ಗೃಹಲಕ್ಷ್ಮಿ ಯೋಜನೆಯ 5,000 ಕೋಟಿ ಹಣ ನಾಪತ್ತೆ ಆಗಿದೆ, ಇವತ್ತಿನ ತನಕ ಲೆಕ್ಕ ಕೊಟ್ಟಿಲ್ಲ ಎಂದು ಅವರು ದೂರಿದರು.

ಬಸ್ಸು ಫ್ರೀ ಎಂದರು. ಬಸ್ಸುಗಳೇ ನಿಂತು ಹೋಗಿವೆ. ಕೆಎಸ್ಆರ್‌ಟಿಸಿ ಮತ್ತು ಬೇರೆ ಬೇರೆ ವಿಭಾಗಗಳಲ್ಲಿರುವ ಸರಕಾರಿ ಬಸ್ ರಿಪೇರಿ ಮಾಡಲು ದುಡ್ಡಿಲ್ಲ ಮತ್ತು ಡೀಸೆಲ್ ಹಾಕೋಕೆ ದುಡ್ಡಿಲ್ಲ. ಇದು ನಿಮ್ಮ ಸರ್ಕಾರದ ಪರಿಸ್ಥಿತಿ ಎಂದು ಟೀಕಿಸಿದರು.

ಏರಿಸಿದ ದರ ಹಿಂಪಡೆಯಲು ಭಾರತಿ ಶೆಟ್ಟಿ ಒತ್ತಾಯ

ವಿಧಾನಪರಿಷತ್ ಮಾಜಿ ಸದಸ್ಯೆ ಶ್ರೀಮತಿ ಭಾರತಿ ಶೆಟ್ಟಿ ಅವರು ಮಾತನಾಡಿ, ರಾಜ್ಯ ಸರಕಾರವು ಹಾಲಿನ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯಬೇಕು ಎಂದು ಆಗ್ರಹಿಸಿದರು.

ಯಡಿಯೂರಪ್ಪ ಅವರ ನೇತೃತ್ವದ ಬಿಜೆಪಿ ಸರಕಾರವು ಹಾಲಿಗೆ ಸಬ್ಸಿಡಿಯನ್ನು ಸರಕಾರದ ಖಜಾನೆಯಿಂದ ನೀಡುತ್ತಿತ್ತು. ಕಾಂಗ್ರೆಸ್ ಪಕ್ಷವು ತನ್ನ ಪ್ರಣಾಳಿಕೆಯಲ್ಲಿ ತಿಳಿಸಿದಂತೆ ಹಾಲಿಗೆ ಸಬ್ಸಿಡಿ ನೀಡಬೇಕು. ಆದರೆ, ಅದಕ್ಕಾಗಿ ಗ್ರಾಹಕರಿಗೆ ಶಾಕ್ ಟ್ರೀಟ್‌ಮೆಂಟ್ ಕೊಡುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ಈಗ ನಾವೆಲ್ಲರೂ ಇಡೀ ರಾಜ್ಯದ ಉದ್ದಗಲಕ್ಕೂ ಹೋರಾಟ ಮಾಡುತ್ತಿದ್ದೇವೆ. ಪ್ರತಿಯೊಂದು ಜಿಲ್ಲೆ, ಮಂಡಲ, ವಾರ್ಡ್‌ಗಳಲ್ಲಿ ಕೂಡ ಈ ಬೆಲೆ ಏರಿಕೆಯ ವಿರುದ್ಧ ಹೋರಾಟವನ್ನು ಭಾರತೀಯ ಜನತಾ ಪಕ್ಷದ ಮಹಿಳಾ ಮೋರ್ಚಾ ಹಮ್ಮಿಕೊಂಡಿದೆ ಎಂದು ಅವರು ವಿವರಿಸಿದರು.

ಹಾಲಿನ ದರವನ್ನು ಈ ಸರಕಾರವು ನಾಲ್ಕು ಬಾರಿ ಏರಿಸಿದೆ. ಒಂದು ಲೀಟರ್ ಹಾಲಿಗೆ 4 ರೂಪಾಯಿ ಏರಿಸಿದ್ದರು. ಬಳಿಕ 3 ರೂಪಾಯಿ ಏರಿಸಿದ್ದರು. ನಂತರ 2 ರೂಪಾಯಿ ಹೆಚ್ಚಿಸಿದ್ದರು. ಆಮೇಲೆ ಈಗ 8 ರೂಪಾಯಿ ಹೇಳಿದ್ದಾರೆ. ಆದರೆ, ಲೆಕ್ಕ ಮಾಡಿದರೆ ಅದು 12 ರೂಪಾಯಿ ಹೆಚ್ಚಾಗಿದೆ ಎಂದು ಆಕ್ಷೇಪಿಸಿದರು.

ಸಿದ್ದರಾಮಣ್ಣನವರು ಮೂರು ಬಾರಿ ನಮಗೆ ಶಾಕ್ ಟ್ರೀಟ್‌ಮೆಂಟ್ ಕೊಟ್ಟಿದ್ದರು. ಡಿ.ಕೆ. ಅಣ್ಣ ಮಾತ್ರ ಒಂದೇ ಬಾರಿ "ದಡಕ್" ಅಂತ ಶಾಕ್ ಟ್ರೀಟ್‌ಮೆಂಟ್ ಕೊಟ್ಟಿದ್ದಾರೆ. ಇದನ್ನು ನಾವು ನಿರೀಕ್ಷೆ ಮಾಡಿಲ್ಲ ಎಂದು ತಿಳಿಸಿದರು.

ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ಶ್ರೀಮತಿ ಭಾರತಿ ಮಲ್ಲಿಕಾರ್ಜುನ, ಮುಖಂಡರಾದ ಪೂರ್ಣಿಮಾ ಪ್ರಕಾಶ್, ಬೆಂಗಳೂರು ಉತ್ತರ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಶ್ರೀಮತಿ ಮಂಜುಳಾ ದೇವಿ, ಬೆಂಗಳೂರು ಕೇಂದ್ರ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಶ್ರೀಮತಿ ನೀತು ಎನ್.ಎಂ. ರೆಡ್ಡಿ, ಬೆಂಗಳೂರು ದಕ್ಷಿಣ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಶ್ರೀಮತಿ ಶ್ವೇತಾ ರಾಘವೇಂದ್ರ, ಮಹಿಳಾ ಮೋರ್ಚಾ ಪದಾಧಿಕಾರಿಗಳು ಮತ್ತು ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ಸ್ಟಿಂಗ್ ಪ್ರಕರಣದಲ್ಲಿ ಕುಮಾರಸ್ವಾಮಿ ಅವರದ್ದೇ ಕಥೆ, ಚಿತ್ರಕತೆ, ನಿರ್ದೇಶನ, ನಿರ್ಮಾಣ: ಎಂ.ಲಕ್ಷ್ಮಣ್

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮುಗಿಸುವುದಾಗಿ ಮೋದಿ ಅವರಿಗೆ ಕುಮಾರಸ್ವಾಮಿ ಆಶ್ವಾಸನೆ

● ವಿಕ್ರಮ ವಾಹಿನಿ । ಬೆಂಗಳೂರು

"ಸ್ಟಿಂಗ್ ಪ್ರಕರಣದಲ್ಲಿ ಕಥೆ, ಚಿತ್ರಕತೆ, ನಿರ್ದೇಶನ, ನಿರ್ಮಾಣ ಎಲ್ಲವೂ ಕುಮಾರಸ್ವಾಮಿ ಅವರದ್ದೇ ಆಗಿದೆ. ಸ್ಟಿಂಗ್ ವಿಡಿಯೋ ಬಿಡುಗಡೆ ಮಾಡಿದವರು ಕುಮಾರಸ್ವಾಮಿ ಜೊತೆಗೆ ಕೆಲಸ ಮಾಡುವವರೇ ಆಗಿದ್ದಾರೆ" ಎಂದು ಕೆಪಿಸಿಸಿ ವಕ್ತಾರರಾದ ಎಂ ಲಕ್ಷ್ಮಣ್ ತಿಳಿಸಿದ್ದಾರೆ.

ನಗರದ ಮೌರ್ಯ ಹೋಟೇಲ್‌ನಲ್ಲಿ ಮಾಧ್ಯಮ ಗೋಷ್ಠಿ ನಡೆಸಿ ಲಕ್ಷ್ಮಣ್ ಅವರು ಸೋಮವಾರ ಮಾತನಾಡಿದರು.

"ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಕಳೆದ ಒಂದು ತಿಂಗಳಿನಿಂದ ಮಾಧ್ಯಮ ಗೋಷ್ಠಿಗಳ ಮೂಲಕ ಕರ್ನಾಟಕದ ಮಾನ ಮರ್ಯಾದೆಯನ್ನು ದೇಶದಲ್ಲಿ ಹರಾಜು ಹಾಕಿದ್ದಾರೆ. ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ಸ್ಟಿಂಗ್ ವಿಡಿಯೋ ವಿಚಾರದಲ್ಲಿ ರಾಜಕೀಯ ಲಾಭ ಪಡೆಯುವ ಏಕೈಕ ಉದ್ದೇಶದಿಂದ ಕರ್ನಾಟಕ ಸರ್ಕಾರದ ವಿರುದ್ಧ ಜನಾಭಿಪ್ರಾಯ ಸೃಷ್ಟಿ ಮಾಡಲು ಮುಂದಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕುಮಾರಸ್ವಾಮಿ ಅವರಿಗೆ ಸುಪಾರಿ ನೀಡಿ ರಾಜ್ಯ ಸರ್ಕಾರದ ತೇಜೋವಧೆ ಮಾಡಲಾಗುತ್ತಿದೆ" ಎಂದು ತಿಳಿಸಿದ್ದಾರೆ.

<u>ಕುಮಾರಸ್ವಾಮಿ ಅವರನ್ನು ಬಳಸಿಕೊಂಡು ಒಂದೇ ಕಲ್ಲಲ್ಲಿ ನಾಲ್ಕು ಹಕ್ಕಿ ಹೊಡೆಯುವ ಪ್ರಯತ್ನ:</u> "ಇದರ ಹಿಂದಿರುವ ಹುನ್ನಾರವನ್ನು ತನಿಖಾ ತಂಡ ಮಾಡಲಿದೆ. ಕುಮಾರಸ್ವಾಮಿ ಅವರನ್ನು ಬಳಸಿಕೊಂಡು ಒಂದೇ ಕಲ್ಲಲ್ಲಿ ನಾಲ್ಕು ಹಕ್ಕಿ ಹೊಡೆಯುವ ಪ್ರಯತ್ನವನ್ನು ಬಿಜೆಪಿಯವರು ಮಾಡುತ್ತಿದ್ದಾರೆ. ಸಿದ್ದರಾಮಯ್ಯ ಅವರ ತೇಜೋವಧೆ ಮೂಲಕ ಕಾಂಗ್ರೆಸ್ ವಿರುದ್ಧ ಅಹಿಂದ ಮತವನ್ನು ತಿರುಗಿಸುವುದು, ಡಿ ಕೆ ಶಿವಕುಮಾರ್ ಅವರ ಖ್ಯಾತಿ ಸಹಿಸಲಾಗದೇ 2028ರ ಚುನಾವಣೆ ಎದುರಿಸುವುದು. ಕಾಂಗ್ರೆಸ್ ಪಕ್ಷಕ್ಕೆ ಕೆಟ್ಟ ಹೆಸರು ತಂದು 2028ರಲ್ಲಿ ಮೈತ್ರಿ ಸರ್ಕಾರ ರಚಿಸುವುದು ಹಾಗೂ ಸುಳ್ಳಿನ ಮೂಲಕ ಜನರನ್ನು ನಂಬಿಸುವ ಪ್ರಯತ್ನ. ಈ ನಾಲ್ಕು ವಿಚಾರಗಳನ್ನು ಒಂದೇ ಸಮಯದಲ್ಲಿ ಮಾಡಲು ಹೊರಟಿದ್ದಾರೆ" ಎಂದು ಆರೋಪಿಸಿದರು.

"ದಿನಾಂಕ 27.08.2026ರಂದು ಕುಮಾರ ಸ್ವಾಮಿ ಹಾಗೂ ನಿಖಿಲ್ ಕುಮಾರ ಸ್ವಾಮಿ ಅವರು ಮೋದಿ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ ಸ್ಟಿಂಗ್ ವಿಚಾರವನ್ನು ಮೋದಿ ಅವರಿಗೆ ತೋರಿಸಿ, ಇದೊಂದು ಸ್ಟಿಂಗ್ ಪ್ರಕರಣದಿಂದ 2028ರಲ್ಲಿ ಕಾಂಗ್ರೆಸ್ ಪಕ್ಷ ಸೋಲಿಸಿ ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ರಚಿಸುತ್ತೇವೆ. 2029ರಲ್ಲಿ ರಾಜ್ಯದಲ್ಲಿ 28ಕ್ಕೆ 28 ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ ನಿಮ್ಮನ್ನು ಮತ್ತೊಮ್ಮೆ ಪ್ರಧಾನಿ ಮಾಡಲಾಗುವುದು ಎಂಬ ಆಶ್ವಾಸನೆ ನೀಡಿರುವುದಾಗಿ ಕುಮಾರಸ್ವಾಮಿ ಅವರು ಹೇಳಿಕೊಂಡಿದ್ದಾರೆ. ಮೋದಿ ಅವರು ಈ ಅಪ್ಪ ಮಗನಿಗೆ 'ಗೋ ಹೆಡ್' ಎಂದು ಅನುಮತಿ ಕೊಟ್ಟಿದ್ದಾರೆ ಎಂದು ಕುಮಾರಸ್ವಾಮಿ ಅವರು ಹೇಳಿರುವ ಕುರಿತ ಆಡಿಯೋವನ್ನು ಮುಂದಿನ ದಿನಗಳಲ್ಲಿ ತನಿಖೆ ಬಳಿಕ ಬಿಡುಗಡೆ ಮಾಡಲಾಗುವುದು" ಎಂದು ತಿಳಿಸಿದರು.

<u>ಕುಮಾರಸ್ವಾಮಿ ಉಪಸ್ಥಿತಿಯಲ್ಲೇ ವಿಡಿಯೋ ಅಪ್ ಲೋಡ್ ಎಂದು ರಿತೇಶ್ ಪಾಂಡೆ ಹೇಳಿಕೆ:</u> "ಪ್ರಜ್ವಲ್ ಪಾಂಡೆ ಅವರು ರಿತೇಶ್ ಪಾಂಡೆ ಹಾಗೂ ವಿನೋದ್ ಶರ್ಮಾ ಅವರಿಂದ ಎರಡು ಮೊಬೈಲ್ ಖರೀದಿಸಿ ಅದೇ ಅಂಗಡಿಯಲ್ಲಿ ಇಂಟರ್ ನೆಟ್ ಸಂಪರ್ಕ ಪಡೆದಿರುವಾಗ ಸಿಸಿಬಿ ಪೊಲೀಸರಿಗೆ ಐಎಂಎ ಸಂಖ್ಯೆ ಸಿಕ್ಕಿದೆ. ನಂತರ ಆ ಮೊಬೈಲ್‌ಗಳನ್ನು ಕುಮಾರಸ್ವಾಮಿ ಅವರ ದೆಹಲಿಯ ಅಧಿಕೃತ ನಿವಾಸಕ್ಕೆ ತೆಗೆದುಕೊಂಡು ಹೋಗಿ ಅಪ್ ಲೋಡ್ ಮಾಡಲಾಗಿದೆ.

ಇದರ ಸಮಯ ಎಲ್ಲವೂ ಪೊಲೀಸ್ ತನಿಖಾಧಿಕಾರಿಗಳ ಬಳಿ ಇದೆ. ರಿತೇಶ್ ಪಾಂಡೆ ಅವರನ್ನು 7–8 ಬಾರಿ ವಿಚಾರಣೆಗೆ ಒಳಪಡಿಸಿ ಬಂಧಿಸಿದ್ದು, ಆತ ಜಾಮೀನಿನ ಮೇಲೆ ಹೊರಗಡೆ ಇದ್ದಾನೆ. ವಿಡಿಯೋ ಅಪ್ ಲೋಡ್ ಮಾಡುವಾಗ ಕುಮಾರಸ್ವಾಮಿ ಅವರು ಅಲ್ಲೇ ಉಪಸ್ಥಿತರಿದ್ದರು ಎಂದು ಆತನ ಹೇಳಿಕೆಯಲ್ಲಿ ದಾಖಲಾಗಿದೆ" ಎಂದರು.

<u>ಪ್ರಜ್ವಲ್ ಪ್ರಸಾದ್, ರಿತೇಶ್ ಪಾಂಡೆ, ವಿನೋದ್ ಶರ್ಮಾ ನಡುವೆ 29,30,000 ರೂ. ಹಣಕಾಸಿನ ವ್ಯವಹಾರ:</u> "ನಮಗೆ ಸಿಕ್ಕಿರುವ ಮಾಹಿತಿ ಪ್ರಕಾರ ಮೊಬೈಲ್ ಖರೀದಿಗೆ ಬಳಸಲಾದ 50 ಸಾವಿರ ಹಣವನ್ನು ಆನ್‌ಲೈನ್ ಮೂಲಕ ವರ್ಗಾವಣೆ ಮಾಡಲಾಗಿದ್ದು, ಪ್ರಜ್ವಲ್ ಪ್ರಸಾದ್ ಹಾಗೂ ರಿತೇಶ್ ಪಾಂಡೆ, ವಿನೋದ್ ಶರ್ಮಾ ಅವರ ನಡುವೆ ನಂತರ 3 ದಿನಾಂಕಗಳಲ್ಲಿ 29,30,000 ಹಣಕಾಸಿನ ವ್ಯವಹಾರವಾಗಿದೆ. ಪ್ರಜ್ವಲ್ ಪ್ರಸಾದ್ ಅವರನ್ನು ಹಿಡಿದರೆ ಈ ಹಣ ಎಲ್ಲಿಂದ ಬಂತು, ಯಾಕೆ ಬಂತು ಎಂಬ ಮಾಹಿತಿ ಸಿಗುತ್ತದೆ. ಈ ಮೂವರು ಕುಮಾರಸ್ವಾಮಿ ಅವರ ಸಾಮಾಜಿಕ ಜಾಲತಾಣದ ಕಂಟೆಟ್ ಕ್ರಿಯೇಟರ್ ಗಳಾಗಿ ಕೆಲಸ ಮಾಡುವವರು" ಎಂದರು.

<u>ಕುಮಾರಸ್ವಾಮಿ ಅವರಿಂದ ದಿನಕ್ಕೊಂದು ಹೇಳಿಕೆ:</u> "ಕುಮಾರಸ್ವಾಮಿ ಅವರು ಸಿನಿಮಾ ರಂಗದಲ್ಲಿದ್ದವರು. ಕೆಟ್ಟ ಕಥೆಯನ್ನು ಜನರಿಗೆ ಒಪ್ಪುವಂತೆ ಬದಲಿಸುವ ಕಲೆ ಅವರಿಗಿದೆ. ಅವರ ಕಲೆ ಬೇರೆ ಸಿನಿಮಾ ನಿರ್ದೇಶಕರಿಗೂ ಇಲ್ಲ. ಹೀಗಾಗಿ ಅವರು ಈ ಪ್ರಕರಣದಲ್ಲಿ ನರೇಟಿವ್ ರಚಿಸಲು ಆರಂಭಿಸಿದರು. ಕುಮಾರಸ್ವಾಮಿ ಅವರು ಇದುವರೆಗೂ ಈ ಪ್ರಕರಣದಲ್ಲಿ ಒಂಬತ್ತು ಮಾಧ್ಯಮಗೋಷ್ಠಿ ನಡೆಸಿದ್ದಾರೆ. ಮೊದಲ ಮಾಧ್ಯಮಗೋಷ್ಠಿಯಲ್ಲಿ ನೈಸ್ ಪ್ರಕರಣ ಮರೆಮಾಚಲು ಸ್ಟಿಂಗ್ ಪ್ರಕರಣ ತಂದಿದ್ದಾರೆ ಎಂದು ಹೇಳಿದರು. ನಂತರ ಡಿ.ಕೆ.ಶಿವಕುಮಾರ್ ಅವರು ಶಾಂಗ್ರಿಲಾ ಹೊಟೇಲ್‌ನಲ್ಲಿ ಸ್ಟಿಂಗ್ ಮಾಡುವವರನ್ನು ಭೇಟಿ ಮಾಡಿದ್ದರು ಎಂದು ನರೇಟಿವ್ ಸೆಟ್ ಮಾಡಿದರು. ಸಿದ್ದರಾಮಯ್ಯ ಅವರ ವಿರುದ್ಧ ಸ್ಟಿಂಗ್ ಮಾಡಿದವರ ವಿರುದ್ಧ ತನಿಖೆ ಆಗಬೇಕು, ಬಂಧಿಸಬೇಕು ಎಂದು ಸಿದ್ದರಾಮಯ್ಯ ಅವರ ಪರವಾಗಿ ಮಾತನಾಡಿದರು. ಆಮೂಲಕ ಸಿದ್ದರಾಮಯ್ಯ ಅವರ ಮೇಲೆ ಪ್ರೀತಿ ಹರಿಸಿದರು. 2023ರ ನಂತರ ಸಿದ್ದರಾಮಯ್ಯ ಅವರು ಹಾಗೂ ಅವರ ಮಗನ ವಿರುದ್ಧ ಕುಮಾಸ್ವಾಮಿ ಅವರು ಇನ್ನಿಲ್ಲದ ಟೀಕೆ ಮಾಡಿದರು. ಈಗ ಏಕಾಏಕಿ ಪ್ರೀತಿ ತೋರಿದರು" ಎಂದು ವಿವರಿಸಿದರು.

"ನಂತರ ನೈಸ್ಯ ಅಪರಾಧಿ ಬಿಟ್ಟು ದಳದ ಕಾರ್ಯಕರ್ತರನ್ನು ಗುರಿ ಮಾಡುತ್ತಿದ್ದಾರೆ ಎಂದರು. ನಂತರ ಪ್ರಿಯಾಂಕ್ ಖರ್ಗೆ ವಿರುದ್ಧ ವೈಯಕ್ತಿಕ ದಾಳಿ ಮಾಡಿ ಬಲಿತ ದಲಿತ ಎಂದು ಟೀಕಿಸಿದರು. ತಮ್ಮ ವಿರುದ್ಧ ತಿರುಗುತ್ತದೆ ಎಂಬ ವಿಚಾರ ತಿಳಿದ ತಕ್ಷಣ ಡಿಜಿಪಿ ಕಚೇರಿಗೆ ಪಾದಯಾತ್ರೆ ಮಾಡಿ ಪೊಲೀಸರ ಮೇಲೆ ಒತ್ತಡ ಹಾಕುವ ಪ್ರಯತ್ನ ಮಾಡಿದರು. ನಂತರ ಈ ಸ್ಟಿಂಗ್ ವಿಡಿಯೋ ಬಹಿರಂಗ ಮಾಡಿದ್ದು ಸಚಿವ ಜಮೀರ್ ಅಹ್ಮದ್ ಎಂದರು. ನಂತರ ಸಿದ್ದರಾಮಯ್ಯ ವಿರುದ್ಧ ಖರ್ಗೆ ಕುಟುಂಬ ಪಿತೂರಿ ಮಾಡಿದೆ ಎಂದರು. ನನ್ನ ಇನ್ನೊಂದು ಮುಖ ತೋರಿಸುತ್ತೇನೆ ಎಂದರು. ಕೊನೆಯದಾಗಿ ದೇವೇಗೌಡರ ಕುಟುಂಬ ಮುಗಿಸಲು 600 ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದು ಆರೋಪಿಸಿದರು. 6 ಲಕ್ಷ ಹಣ ವರ್ಗಾವಣೆ ಮಾಡಿದರೆ ಐಟಿ ಇಡಿಯವರು ಬರುತ್ತಾರೆ. ಇನ್ನು 600 ಕೋಟಿ ವೆಚ್ಚ ಮಾಡಬೇಕು ಎಂದರೆ ಹೇಗೆ? ಈ ಬಗ್ಗೆ ಕುಮಾರಸ್ವಾಮಿ ಅವರು ತಮ್ಮ ಸರ್ಕಾರದ ಐಟಿಗೋ, ಇಡಿಗೋ ದೂರು ನೀಡಿದ್ದರೆ ತನಿಖೆ ಮಾಡುತ್ತಿದ್ದವು. ಹೀಗೆ ಸುಳ್ಳು ಹೇಳುವ ಪ್ರವೃತ್ತಿ ಹೊಂದಿರುವ ವ್ಯಕ್ತಿ ಕುಮಾರಸ್ವಾಮಿ" ಎಂದು ಕಿಡಿಕಾರಿದರು.

"ಪೊಲೀಸ್ ಆಯುಕ್ತರು ಪ್ರಕರಣದ ಪ್ರಾಥಮಿಕ ತನಿಖೆಯ ಕುರಿತು ತಾಂತ್ರಿಕ ಸಾಕ್ಷ್ಯಾಧಾರಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡುವ ಕೆಲಸ ಮಾಡಿದ್ದಾರೆ. ಅವರು ನಿಮ್ಮಂತೆ ಹಿಟ್ ಅಂಡ್ ರನ್ ಮಾಡುವುದಿಲ್ಲ. ಪ್ರಕರಣದ ಮಾಹಿತಿ ಕೊಟ್ಟ ಐಪಿಎಸ್ ಅಧಿಕಾರಿಯನ್ನು ಹೆಡ್ ಕ್ಲರ್ಕ್ ಎಂದು ನಿಂದಿಸಿದ್ದಾರೆ. ಜಾಗ ಉಳಿಸಿಕೊಳ್ಳಲು ಈ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಕುಮಾರಸ್ವಾಮಿ ಅವರ ವಿರುದ್ಧ ಯಾರು ಮಾತನಾಡಿದರೂ ನೀವು ಅವರ ವಿರುದ್ಧ ಏನು ಬೇಕಾದರೂ ಮಾತನಾಡುತ್ತೀರಿ. ನನ್ನ ಮುಟ್ಟಿ ನೋಡಿ ಎಂದು ಪೊಲೀಸ್ ಅಧಿಕಾರಿಗೆ ಬೆದರಿಕೆ ಹಾಕುತ್ತೀರಿ. ಒಂದು ವೇಳೆ ನಾಳೆ ಅವರು ನಿಮ್ಮನ್ನು ಮುಟ್ಟುತ್ತಾರೆ ಎಂದು ನಿಮಗೆ ಹೇಗೆ ಗೊತ್ತು? ಕಾನೂನು ಅಡಿಯಲ್ಲಿ ಯಾರೇ ಇದ್ದರೂ ಬಿಡುವುದಿಲ್ಲ. ಕುಮಾರಸ್ವಾಮಿ ಆಗಲಿ ಬೇರೆ ಯಾರೇ ಆಗಲಿ, ಬಿಡುವುದಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಳಂಕ ತರುವ ಪ್ರಯತ್ನ ಮಾಡಿದವರು ಯಾರೇ ಆಗಿರಲಿ, ಕಾಂಗ್ರೆಸ್ಸವರೇ ಆಗಿದ್ದರೂ ಕಾನೂನಿನ ಪ್ರಕಾರ ಕ್ರಮ ಕೈಗೊಂಡು ಜೈಲಿಗೆ ಕಳುಹಿಸಬೇಕು ಎಂಬುದು ನಮ್ಮ ಆಗ್ರಹ" ಎಂದರು.

"ಪ್ರಜ್ವಲ್ ರೇವಣ್ಣ ಪ್ರಕರಣದ ತನಿಖೆ ನಡೆಸಿದ ಕರ್ನಾಟಕದ ಮೂವರು ಪೊಲೀಸ್ ಅಧಿಕಾರಿಗಳಿಗೆ ಕೇಂದ್ರ ಸರ್ಕಾರವೇ ಪ್ರಶಸ್ತಿ ನೀಡಿದೆ. ದೇಶದ 12 ಅಧಿಕಾರಿಗಳಿಗೆ ನೀಡಿದ ಪ್ರಶಸ್ತಿಯಲ್ಲಿ ಕರ್ನಾಟಕದ ಮೂವರು ಅಧಿಕಾರಿಗಳಿದ್ದಾರೆ. ಪಕ್ಷಾತೀತವಾಗಿ, ಜಾತ್ಯತೀತವಾಗಿ, ನಿರ್ಭೀತಿಯಿಂದ ತನಿಖೆ ನಡೆಸಿ ತಪ್ಪಿತಸ್ಥರನ್ನು ಜೈಲಿಗೆ ಕಳುಹಿಸಿದ ಅಧಿಕಾರಿಗಳನ್ನು ಕೇಂದ್ರ ಸರ್ಕಾರ ಗುರುತಿಸಿ ಗೌರವಿಸಿದೆ. ಇಂತಹ ಸಂದರ್ಭದಲ್ಲಿ ಕರ್ನಾಟಕ ಪೊಲೀಸರ ತನಿಖಾ ಸಾಮರ್ಥ್ಯವನ್ನು ಪ್ರಶ್ನಿಸುವುದು ಸರಿಯಲ್ಲ" ಎಂದು ಹೇಳಿದರು.

"ಕೇಂದ್ರ ಸಚಿವರಾಗಿರುವ ಕುಮಾರಸ್ವಾಮಿ ಅವರು ಕರ್ನಾಟಕಕ್ಕೆ ಏನಾದರೂ ಒಂದು ರೂಪಾಯಿ ಅನುದಾನ ಅಥವಾ ನೆರವು ತರುವ ಕೆಲಸ ಮಾಡಿದ್ದಾರೆಯೇ? ರಾಜ್ಯದ ಅಭಿವೃದ್ಧಿ ವಿಚಾರವಾಗಿ ಮಾತನಾಡುವ ಬದಲು ಪ್ರತಿದಿನ ಡಿ.ಕೆ. ಶಿವಕುಮಾರ್ ಅವರನ್ನು ತೇಜೋವಧೆ ಮಾಡುವ ಕೆಲಸಕ್ಕೆ ಕೈಹಾಕಿದ್ದಾರೆ. ಅವರ ರಾಜಕೀಯ ವರ್ಚಸ್ಸು ಕುಗ್ಗಿಸುವುದೇ ನಿಮ್ಮ ಉದ್ದೇಶವೇ" ಎಂದು ಪ್ರಶ್ನಿಸಿದರು.

"ಹಿಂದೆ 30 ದಿನಗಳಲ್ಲಿ ಇಂಗ್ಲಿಷ್ ಕಲಿಯಿರಿ ಎಂಬ ಪುಸ್ತಕಗಳನ್ನು ಓದುತ್ತಿದ್ದೆವು. ಈಗ ಕುಮಾರಸ್ವಾಮಿ ಅವರು 30 ದಿನಗಳಲ್ಲಿ ಸುಳ್ಳು ಹೇಳುವುದು ಹೇಗೆ, ರಾಜ್ಯವನ್ನು ಆಳುವುದು ಹೇಗೆ, ಮನೆ ಮುರಿಯುವುದು ಹೇಗೆ ಎಂಬ ಪುಸ್ತಕ ಬರೆದಿದ್ದಾರೇನೋ ಎಂಬಂತಿದೆ. ಇಂತಹ ಪುಸ್ತಕ ಬಿಡುಗಡೆ ಮಾಡುವ ಬದಲು ರಾಜ್ಯದ ಜನರಿಗೆ ಉಪಯೋಗವಾಗುವ ವಿಚಾರಗಳ ಬಗ್ಗೆ ಮಾತನಾಡಲಿ. ದಿನ ಬೆಳಗಾದರೆ ಕುಮಾರಸ್ವಾಮಿ ಏನು ಹೇಳುತ್ತಾರೆ ಎಂದು ಮಾಧ್ಯಮಗಳಲ್ಲಿ ಗಮನಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಒಂದೊಂದು ದಿನ ಒಂದೊಂದು ಆರೋಪ ಮಾಡುತ್ತಾ, ಹೊಸ ವಿಚಾರಗಳನ್ನು ಪ್ರಸ್ತಾಪಿಸುತ್ತಿದ್ದಾರೆ. ಆದರೆ, ಆರೋಪಗಳ ಮೂಲಕ ನಾಯಕರ ತೇಜೋವಧೆ ಮಾಡುವುದರಿಂದ ಯಾವುದೇ ಪ್ರಯೋಜನವಿಲ್ಲ" ಎಂದು ತಿರುಗೇಟು ನೀಡಿದರು.

"ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಉಲ್ಲೇಖಿಸಿ ಕಾಂಗ್ರೆಸ್‌ನವರೇ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗುತ್ತಿದೆ. ಆದರೆ, ಅವರು ಯಾವ ಸಂದರ್ಭದಲ್ಲಿ, ಯಾವ ಪ್ರಶ್ನೆಗೆ ಉತ್ತರವಾಗಿ ಈ ಹೇಳಿಕೆ ನೀಡಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು. ಮಾಧ್ಯಮದವರು ಕಾಂಗ್ರೆಸ್ನ ಮಹಿಳೆಯೊಬ್ಬರ ಹೆಸರು ಪ್ರಸ್ತಾಪಿಸಿದಾಗ, ಮಂಗಳೂರಿನ ಕೃಪಾ ಆಳ್ವಾ ಅವರ ಹೆಸರು ನಮಗೂ ಗೊತ್ತಿದೆ, ಅವರ ಬಗ್ಗೆಯೂ ತನಿಖೆಯಾಗಬೇಕು ಎಂದು ಯತೀಂದ್ರ ಹೇಳಿದ್ದಾರೆ. ಸಿದ್ದರಾಮಯ್ಯ ಅವರೂ ಸ್ಟಿಂಗ್ ಆಪರೇಷನ್ ಪ್ರಕರಣದ ಸಮಗ್ರ ತನಿಖೆಗೆ ಒತ್ತಾಯಿಸಿದ್ದಾರೆ. ಹೀಗಿರುವಾಗ ಕಾಂಗ್ರೆಸ್ಸವರನ್ನು ರಕ್ಷಿಸಲಾಗುತ್ತಿದೆ ಎಂಬ ಆರೋಪಕ್ಕೆ ಅರ್ಥವಿಲ್ಲ" ಎಂದು ಹೇಳಿದರು.

"ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ 2011ರಲ್ಲಿ ಸ್ಟಿಂಗ್ ಆಪರೇಷನ್ ನಡೆದಿದ್ದರೆ, ಅದಕ್ಕೆ ಸಂಬಂಧಿಸಿದ ಮೂಲ ವಿಡಿಯೊವನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಬಿಡುಗಡೆ ಮಾಡಲಿ. ಸಿದ್ದರಾಮಯ್ಯ ಅವರು ಅದರಲ್ಲಿ ಭಾಗಿಯಾಗಿರುವುದಕ್ಕೆ ಯಾವುದೇ ವಿಡಿಯೊ ಅಥವಾ ಸಾಕ್ಷ್ಯವಿದ್ದರೆ ಬಹಿರಂಗಪಡಿಸಲಿ. ಸುಮ್ಮನೆ ಆರೋಪ ಮಾಡುವ ಬದಲು ದಾಖಲೆಗಳನ್ನು ಜನರ ಮುಂದಿಡಲಿ" ಎಂದರು.

"2028ಕ್ಕೆ ನಾವು ಅಧಿಕಾರಕ್ಕೆ ಬರುತ್ತೇವೆ ಅಧಿಕಾರಿಗಳ ಹೆಸರು ಬರೆದಿಟ್ಟುಕೊಳ್ಳಿ ಎಂದು ಹೇಳುವ ಮೂಲಕ ಅಧಿಕಾರಿಗಳಿಗೆ ಧಮಕಿ ಹಾಕುತ್ತಿದ್ದೀರಾ? ಹೆಸರು ಬರೆದಿಟ್ಟುಕೊಂಡು ಅಧಿಕಾರಿವರ್ಗವನ್ನು ಆಚೆಗೆ ಕಳುಹಿಸುತ್ತೀರಾ? ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಧಿಕಾರಿಗಳ ಮೇಲೆ ಧಮಕಿ ಹಾಕುವ ಕೆಲಸ ಮಾಡಬೇಡಿ. ಇದರ ಆಧಾರದ ಮೇಲೆ ನಿಮ್ಮ ಮೇಲೆ ಪ್ರಕರಣ ದಾಖಲಿಸಬೇಕು. ನಮ್ಮ ಸರ್ಕಾರ ಆ ಕೆಲಸ ಮಾಡುತ್ತಿಲ್ಲ. ಈ ವಿಚಾರವಾಗಿ ನಮ್ಮ ಕಾರ್ಯಕರ್ತರಿಗೆ ಬೇಸರವಿದೆ" ಎಂದರು.

<u>14 ವರ್ಷದ ಬಾಲಕಿಯ ಇ–ಮೇಲ್ ದಾಖಲೆ ಎಲ್ಲಿದೆ?:</u> "2011ರಲ್ಲಿ 14 ವರ್ಷದ ಬಾಲಕಿಯ ಮೇಲೆ ದೌರ್ಜನ್ಯ ನಡೆದಿದ್ದು, ಆಕೆ ಇ–ಮೇಲ್ ಮೂಲಕ ದೂರು ನೀಡಿದ್ದಾಳೆ ಎಂದು ಕುಮಾರಸ್ವಾಮಿ ಹೇಳುತ್ತಿದ್ದಾರೆ. ಹಾಗಿದ್ದರೆ ಆ ಇ–ಮೇಲ್ನ ಪ್ರತಿ ನೀಡಲಿ. ಯಾರಿಗೆ ಮೇಲ್ ಕಳುಹಿಸಲಾಗಿದೆ, ಯಾವಾಗ ಕಳುಹಿಸಲಾಗಿದೆ, ದೌರ್ಜನ್ಯ ಎಸಗಿದವರು ಯಾರು ಎಂಬ ವಿವರಗಳನ್ನು ಬಹಿರಂಗಪಡಿಸಲಿ. ಇ–ಮೇಲ್‌ನ ದಾಖಲೆ ಇಲ್ಲದೆ ಕೇವಲ ಹೇಳಿಕೆಗಳ ಮೂಲಕ ಜನರನ್ನು ದಿಕ್ಕುತಪ್ಪಿಸುವ ಪ್ರಯತ್ನ ಮಾಡಬಾರದು" ಎಂದು ಆಗ್ರಹಿಸಿದರು.

"ಕೇಂದ್ರದಲ್ಲಿ 12–13 ವರ್ಷಗಳಿಂದ ಬಿಜೆಪಿ ಸರ್ಕಾರವಿದೆ. ಕುಮಾರಸ್ವಾಮಿ ಅವರೂ ಮೂರು ವರ್ಷಗಳಿಂದ ಕೇಂದ್ರ ಸಚಿವರಾಗಿದ್ದಾರೆ. ಇಂತಹ ಗಂಭೀರ ದೌರ್ಜನ್ಯದ ಬಗ್ಗೆ ಇ–ಮೇಲ್ ಬಂದಿದ್ದರೆ ಈವರೆಗೆ ಏಕೆ ಕ್ರಮ ಕೈಗೊಂಡಿಲ್ಲ? ಕೇಂದ್ರ ಸರ್ಕಾರದ ಗಮನಕ್ಕೆ ತಂದು ಕ್ರಮಕ್ಕೆ ಒತ್ತಾಯಿಸಬಹುದಿತ್ತಲ್ಲವೇ? ಈಗ ರಾಜಕೀಯ ಉದ್ದೇಶಕ್ಕಾಗಿ ಈ ವಿಚಾರವನ್ನು ಪ್ರಸ್ತಾಪಿಸುತ್ತಿರುವುದೇಕೆ. ಈ ಪ್ರಕರಣದಲ್ಲಿ ಸತ್ಯಾಂಶಗಳನ್ನು ಮರೆಮಾಚಲು ಸಾಧ್ಯವಿಲ್ಲ. ದಾಖಲೆಗಳೊಂದಿಗೆ ಆರೋಪ ಮಾಡಬೇಕು. ತನಿಖೆಯಲ್ಲಿ ಯಾರ ಪಾತ್ರವಿದ್ದರೂ ಹೊರಬರಲಿದೆ. ಕುಮಾರಸ್ವಾಮಿ ಅವರ ಪಾತ್ರ ಸಾಬೀತಾದರೆ ಅವರ ವಿರುದ್ಧವೂ ಕಾನೂನು ಕ್ರಮ ಖಚಿತ" ಎಂದು ಪ್ರಶ್ನಿಸಿದರು.

"ನಿಮ್ಮ ಅಂತಿಮ ಕಾಲ ಬಂದಿದೆ. ನೀವು ಈ ಪ್ರಕರಣದಲ್ಲಿ ಸಿಕ್ಕಿಬೀಳುವುದು ನೂರಕ್ಕೆ ನೂರರಷ್ಟು ಖಚಿತ. ಈ ಪ್ರಕರಣದಲ್ಲಿ ಜೆಡಿಎಸ್ ಕಾರ್ಯಕರ್ತರ ಕೈವಾಡ ಇದೆ. ಮೂರು ಜನರೂ ತಲೆಮರೆಸಿಕೊಳ್ಳುವಂತೆ ಮಾಡಿದ್ದೀರಿ. ಪ್ರಜ್ವಲ್ ಪ್ರಸಾದ್ ಎಲ್ಲಿದ್ದಾನೆ ಎಂದು ನಿಮಗೂ ಗೊತ್ತಿದೆ. ಕೃಪಾ ಆಳ್ವಾ ಅವರು ವಿದೇಶಕ್ಕೆ ಹೋಗಿದ್ದರೆ ಅವರನ್ನು ತಡೆಯುವ ಕೆಲಸವನ್ನು ಕೇಂದ್ರ ಸರ್ಕಾರ ಯಾಕೆ ಮಾಡಲಿಲ್ಲ? ಅವರ ಹಿಂದೆ ಬಿಜೆಪಿ ಸಂಸದರು ಇದ್ದಾರೆ ಎಂಬ ಮಾಹಿತಿ ನಮಗೆ ಇದೆ. ಕುಮಾರಸ್ವಾಮಿ ಅವರೇ ನೀವು ಬಿಟ್ಟ ಬಾಂಬ್ ಬೇರೆಯವರ ಮನೆ ಹಾಳು ಮಾಡಲು ಉದ್ದೇಶಿಸಿದ್ದೀರಿ. ಆದರೆ, ಆ ಬಾಂಬ್ ನಿಮ್ಮ ಮನೆಯನ್ನೇ ನಾಶ ಮಾಡುವ ಕಾಲ ಹತ್ತಿರದಲ್ಲಿದೆ. ನೀವು ಮಾಡಿರುವ ಎಲ್ಲ ಸಂಗತಿಗಳನ್ನೂ ಮುಂದಿನ ದಿನಗಳಲ್ಲಿ ಬಯಲಿಗೆಳೆಯುತ್ತೇವೆ. ಗುರುವಾರ ಅಥವಾ ಶುಕ್ರವಾರ ಪೊಲೀಸ್ ಕಮಿಷನರ್ ಎರಡನೇ ಹಂತದ ಮಾಹಿತಿಯನ್ನು ಬಹಿರಂಗಪಡಿಸಲಿದ್ದಾರೆ" ಎಂದು ಹೇಳಿದರು.

<u>ಪ್ರಶ್ನೋತ್ತರ:</u> ತನಿಖೆ ಪಾರದರ್ಶಕವಾಗಿ ನಡೆಯುತ್ತಿದೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, "ಸ್ಪಷ್ಟವಾದ ತಾಂತ್ರಿಕ ಸಾಕ್ಷ್ಯಗಳ ಆಧಾರದಲ್ಲಿ ತನಿಖೆ ನಡೆಯುತ್ತಿದೆ. ಕಾಟಾಚಾರಕ್ಕೆ ತನಿಖೆ ನಡೆಸಿದರೆ ನ್ಯಾಯಾಲಯದ ಮುಂದೆ ನಿಲ್ಲಲು ಸಾಧ್ಯವಿಲ್ಲ. ನ್ಯಾಯಾಲಯದಲ್ಲಿ ಸಾಕ್ಷ್ಯಗಳನ್ನು ಒದಗಿಸಬೇಕಾಗುತ್ತದೆ. ಹೀಗಾಗಿ ಪೊಲೀಸರು ಸಾಕ್ಷ್ಯಾಧಾರಗಳೊಂದಿಗೆ ತನಿಖೆ ನಡೆಸುತ್ತಿದ್ದಾರೆ" ಎಂದರು.

"ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ 200ರಿಂದ 300 ವಿಡಿಯೊಗಳನ್ನು ಚಿತ್ರೀಕರಿಸಿ ಇಟ್ಟುಕೊಂಡಿದ್ದವರು ಯಾರು ಎಂಬುದು ಎಲ್ಲರಿಗೂ ಗೊತ್ತಿದೆ. ಸ್ವತಃ ಪ್ರಜ್ವಲ್ ರೇವಣ್ಣನೇ ಆ ವಿಡಿಯೊಗಳನ್ನು ಚಿತ್ರೀಕರಿಸಿದ್ದ. ಆತನ ವಿರುದ್ಧವೂ ಕ್ರಮ ಕೈಗೊಳ್ಳಲಾಗಿದೆ. ವಿಡಿಯೊ ಹಂಚಿದವರ ವಿರುದ್ಧವೂ ನ್ಯಾಯಾಲಯದ ಸೂಚನೆಯಂತೆ ಕ್ರಮಕ್ಕೆ ಮುಂದಾಗಲಾಗಿದೆ. ಆದರೆ, ಈಗಿನ ಪ್ರಕರಣದಲ್ಲಿ 2011ರಲ್ಲಿ ಸ್ಟಿಂಗ್ ಆಪರೇಷನ್ ನಡೆದಿದೆ ಎನ್ನುವುದಕ್ಕೆ ಮೂಲ ವಿಡಿಯೊ ಎಲ್ಲಿದೆ? ಅದನ್ನು ತೋರಿಸಲಿ" ಎಂದು ಸವಾಲು ಹಾಕಿದರು.

"ರಾಕೇಶ್ ಶೆಟ್ಟಿ, ಕೃಪಾ ಆಳ್ವಾ ಮತ್ತಿತರರ ನಡುವಿನ ಸಂಭಾಷಣೆಯನ್ನೇ ಸ್ಟಿಂಗ್ ಆಪರೇಷನ್ ಎಂದು ಬಿಂಬಿಸಲಾಗುತ್ತಿದೆ. ಆ ಸಂಭಾಷಣೆಯಲ್ಲಿ ಸಿದ್ದರಾಮಯ್ಯ ಅವರು ದೌರ್ಜನ್ಯ ಎಸಗಿದ್ದಾರೆ ಎಂಬುದಕ್ಕೆ ಯಾವುದೇ ದೃಶ್ಯ ಅಥವಾ ನೇರ ಸಾಕ್ಷ್ಯ ಇದೆಯೇ? ಕೇವಲ ಸಂಭಾಷಣೆಯನ್ನು ಇಟ್ಟುಕೊಂಡು ಅದನ್ನು ಸ್ಟಿಂಗ್ ಆಪರೇಷನ್ ಎಂದು ಕರೆಯಲು ಸಾಧ್ಯವೇ? ಸಿದ್ದರಾಮಯ್ಯ ಅವರೇ ಆರೋಪಿ ಆಗಿದ್ದರೆ, ಆ ಮಹಿಳೆಯನ್ನು ಅವರ ಮುಂದೆ ಏಕೆ ಕರೆದುಕೊಂಡು ಹೋಗಬೇಕು? ನ್ಯಾಯಾಲಯ ಅಥವಾ ನ್ಯಾಯಾಧೀಶರ ಮುಂದೆ ಕರೆದೊಯ್ಯಬೇಕಿತ್ತಲ್ಲವೇ" ಎಂದು ಪ್ರಶ್ನಿಸಿದರು.

ಕೃಪ ಆಳ್ವಾ ಅವರು ಕುಮಾರಸ್ವಾಮಿ ಅವರ ಜತೆಗೆ ಭಾಗಿಯಾಗಿದ್ದಾರಾ ಎಂದು ಕೇಳಿದಾಗ, "ಇರಬಹುದು, ಕೃಪಾ ಆಳ್ವಾ ಅವರ ಪಾತ್ರದ ಬಗ್ಗೆ ತನಿಖೆಯ ವೇಳೆ ಮಾಹಿತಿ ಹೊರಬಂದಿದೆ. ಮನೋಹರ್ ಅವರು ಈ ಸಂಬಂಧ ದೂರು ನೀಡಿದ್ದಾರೆ. ಕೃಪಾ ಆಳ್ವಾ ಅವರನ್ನು ಬಂಧಿಸಬೇಕು ಎಂಬ ಆಗ್ರಹವನ್ನೂ ದೂರಿನಲ್ಲಿ ಮಾಡಿದ್ದಾರೆ. ತನಿಖೆಯಲ್ಲಿ ಕಾಂಗ್ರೆಸ್ಸವರ ಪಾತ್ರವಿದ್ದರೂ ಅದನ್ನು ಹೊರಗೆ ತರುವ ಕೆಲಸವಾಗಲಿದೆ" ಎಂದರು.

ತನಿಖೆ ಪ್ರಕ್ರಿಯೆ ಬಗ್ಗೆ ಕೇಳಿದಾಗ, "15 ದಿನಗಳಲ್ಲಿ ಪ್ರಾಥಮಿಕ ವರದಿ ನೀಡುತ್ತಿರುವ ಪೊಲೀಸರಿಗೆ ಅಭಿನಂದನೆ ಸಲ್ಲಿಸಬೇಕು. ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬ ಆರೋಪ ಸರಿಯಲ್ಲ. ಸಿಸಿಬಿ ಮತ್ತು ಕರ್ನಾಟಕ ಪೊಲೀಸರಿಗೆ ತನಿಖೆ ನಡೆಸುವ ಸಾಮರ್ಥ್ಯವಿದೆ. 15 ದಿನಗಳೊಳಗೆ ಪ್ರಾಥಮಿಕ ತನಿಖಾ ವರದಿಯಲ್ಲಿ ಏನು ಕಂಡುಬಂದಿದೆ ಎಂಬುದನ್ನು ಪೊಲೀಸರು ತಿಳಿಸಿದ್ದಾರೆ. ಒಂದೇ ದಿನದಲ್ಲಿ ಎಲ್ಲವನ್ನೂ ಪತ್ತೆಹಚ್ಚಲು ಸಾಧ್ಯವೇ? ತನಿಖೆ ನಡೆಸುತ್ತಿರುವ ಪೊಲೀಸರ ಕಾರ್ಯವನ್ನು ಮೆಚ್ಚಬೇಕು. ಸಿಸಿಬಿ ಸ್ವತಂತ್ರ ತನಿಖಾ ಸಂಸ್ಥೆಯಾಗಿದ್ದು, ಸರ್ಕಾರ ಪೊಲೀಸರಿಗೆ ನಿರ್ದಿಷ್ಟವಾಗಿ ಇಂತಹವರನ್ನು ಬಂಧಿಸಿ ಎಂದು ನಿರ್ದೇಶನ ನೀಡುವುದಿಲ್ಲ. ತಾಂತ್ರಿಕ ಸಾಕ್ಷ್ಯಗಳ ಆಧಾರದಲ್ಲಿ ತನಿಖೆ ನಡೆಯುತ್ತಿದೆ.

ಈ ತನಿಖೆಯಲ್ಲಿ ಪ್ರಜ್ವಲ್ ಪ್ರಸಾದ್, ರಿತೇಶ್ ಪಾಂಡೆ, ವಿನೋದ್ ಶರ್ಮ ಸೇರಿದಂತೆ ಹಲವರ ಹೆಸರುಗಳು ಹೊರಬಂದಿವೆ. ಅವರ ಪಾತ್ರದ ಬಗ್ಗೆಯೂ ಪರಿಶೀಲನೆ ನಡೆಯುತ್ತಿದೆ" ಎಂದರು.

"ಸಿದ್ದರಾಮಯ್ಯ ವಿರುದ್ಧದ ಆರೋಪಕ್ಕೆ ಸಂಬಂಧಿಸಿದ ಮೂಲ ವಿಡಿಯೊ ಅಥವಾ ಮೂಲ ಸ್ಟಿಂಗ್ ಆಪರೇಷನ್ ಇಲ್ಲದಿದ್ದರೂ, ಬೇರೆ ಸಂಭಾಷಣೆಯನ್ನು ಆಧರಿಸಿ ಹೊಸ ಕಥನ ಸೃಷ್ಟಿಸಿ ಹಂಚುವ ಮೂಲಕ ಅವರ ತೇಜೋವಧೆ ಮಾಡುವ ಪ್ರಯತ್ನ ನಡೆದಿದೆಯೇ ಎಂಬುದನ್ನು ತನಿಖೆ ಮಾಡಬೇಕಿದೆ. ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಆರೋಪಗಳ ಹಿಂದಿನ ಉದ್ದೇಶವನ್ನೂ ಪರಿಶೀಲಿಸಬೇಕಿದೆ. ಈ ಬಗ್ಗೆ ತನಿಖೆ ಮಾಡಬಾರದೇ? ಖಂಡಿತ ಮಾಡಬೇಕು. ಅದಕ್ಕಾಗಿಯೇ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬುದೇ ನಮ್ಮ ಮೊದಲ ಆದ್ಯತೆ. ಆದರೆ, ಸಿದ್ದರಾಮಯ್ಯ ಅವರ ವಿರುದ್ಧದ ಆರೋಪವನ್ನು ಕಟ್ಟುಕಥೆ ಎಂದು ಬಿಂಬಿಸುವುದೇ ಕೆಲವರ ಆದ್ಯತೆಯಾಗಿದೆ. ವಿಡಿಯೊ ಮಾಡಿದವರು, ಹಂಚಿದವರು ಹಾಗೂ ಅದರ ಹಿಂದೆ ಇರುವವರ ಪಾತ್ರವನ್ನು ಪ್ರತ್ಯೇಕವಾಗಿ ತನಿಖೆ ಮಾಡಬೇಕು. ಎಲ್ಲರಿಗೂ ಒಂದೇ ಕಾನೂನು ಅನ್ವಯಿಸುತ್ತದೆ" ಎಂದು ಹೇಳಿದರು.

"ರಾಕೇಶ್ ಶೆಟ್ಟಿ ಅವರ ಹೇಳಿಕೆಯನ್ನು ಪೊಲೀಸರು ದಾಖಲಿಸಿಕೊಂಡಿದ್ದಾರೆ. ಬಳಿಕ ಅವರು ತಕ್ಷಣವೇ ನಿರೀಕ್ಷಣಾ ಜಾಮೀನು ಪಡೆದು ಕೊಂಡಿದ್ದಾರೆ. ಹೀಗಿರುವಾಗ ಅವರನ್ನು ಕೂಡಲೇ ಬಂಧಿಸುವುದು ಹೇಗೆ ಸಾಧ್ಯ? ಅವರ ಕಚೇರಿ ಮೇಲೆ ದಾಳಿ ನಡೆಸಲಾಗಿದೆ. ಮನೆಯ ಮೇಲೂ ಪರಿಶೀಲನೆ ನಡೆಸಲಾಗಿದೆ. ಕೃಪಾ ಆಳ್ವಾ ಎಲ್ಲಿದ್ದಾರೆ ಎಂಬುದನ್ನು ಪತ್ತೆಹಚ್ಚಲು ಪೊಲೀಸರು ಪ್ರಯತ್ನಿಸುತ್ತಿದ್ದಾರೆ. ಕೃಪಾ ಆಳ್ವಾ ವಿದೇಶಕ್ಕೆ ತೆರಳಿದ್ದರೆ ಅವರನ್ನು ಪತ್ತೆಹಚ್ಚಿ ವಾಪಸ್ ಕರೆತರುವ ಕೆಲಸ ಮಾಡುತ್ತೇವೆ. ವಿದೇಶಕ್ಕೆ ತೆರಳಿರುವ ಬಗ್ಗೆ ನಮಗೆ ಖಚಿತ ಮಾಹಿತಿ ಇಲ್ಲ. ಆದರೆ, ಅಂತಹ ಮಾಹಿತಿ ಬಂದರೆ ಅವರನ್ನು ಕರೆತರುವ ಪ್ರಯತ್ನ ಮಾಡಲಾಗುವುದು" ಎಂದರು.

ಕುಮಾರಸ್ವಾಮಿ ಅವರೇ ಈ ಸ್ಟಿಂಗ್ ಆರಪೇಷನ್ ಮಾಡಿಸಿದ್ದಾರಾ ಎಂದು ಕೇಳಿದಾಗ, "ನೂರಕ್ಕೆ ನೂರರಷ್ಟು ಹೌದು. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರೇ ಸ್ಟಿಂಗ್ ಆಪರೇಷನ್ ಮಾಡಿಸಿರುವ ಬಗ್ಗೆ ಮಾಹಿತಿ ಇದೆ. ಸ್ಟಿಂಗ್ ಆಪರೇಷನ್ ರೂಪಿಸಿ, ಅದನ್ನು ಅಪ್ಲೋಡ್ ಮಾಡಿದವರು ಯಾರು ಮತ್ತು ಅದರ ಹಿಂದೆ ಯಾರಿದ್ದಾರೆ ಎಂಬುದನ್ನು ಮುಂದಿನ ದಿನಗಳಲ್ಲಿ ಪೊಲೀಸರು ಬಹಿರಂಗಪಡಿಸಲಿದ್ದಾರೆ" ಎಂದು ಹೇಳಿದರು.

ಕೃಪಾ ಆಳ್ವಾ ಅವರು ಪುತ್ತೂರು ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್ ಬಯಸಿದ್ದರು. ಸ್ಟಿಂಗ್ ಆಪರೇಷನ್ ನಡೆದ ಸಂದರ್ಭದಲ್ಲಿ ಅವರು ಕಾಂಗ್ರೆಸ್ನಲ್ಲೇ ಇದ್ದರು. ಅವರ ಹಿಂದೆ ಇದ್ದ ಕಾಂಗ್ರೆಸ್ ನಾಯಕರು ಯಾರು ಎಂದು ಕೇಳಿದಾಗ, "ತನಿಖೆ ನಡೆಯುತ್ತಿರುವಾಗಲೇ ಕಾಂಗ್ರೆಸ್ ನಾಯಕರ ಪಾತ್ರವಿಲ್ಲ ಎಂದು ಹೇಗೆ ಹೇಳುತ್ತೀರಿ? ತನಿಖೆಯಿಂದ ಎಲ್ಲವೂ ಹೊರಬರಲಿದೆ. ಕಾಂಗ್ರೆಸ್ಸವರೇ ಭಾಗಿಯಾಗಿದ್ದರೂ ಅವರ ಪಾತ್ರವನ್ನು ಬಹಿರಂಗಪಡಿಸುವ ಕೆಲಸ ಮಾಡುತ್ತೇವೆ. ಇದು ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ಪ್ರಕರಣ. ಇದನ್ನು ಕಾಂಗ್ರೆಸ್ ಪಕ್ಷ ಹಗುರವಾಗಿ ಪರಿಗಣಿಸುವುದಿಲ್ಲ. ಪ್ರಕರಣದಲ್ಲಿ ಒಳಗಿನಿಂದ ಅಥವಾ ಹೊರಗಿನಿಂದ ಯಾರೇ ಭಾಗಿಯಾಗಿದ್ದರೂ ಅವರನ್ನು ಪತ್ತೆಹಚ್ಚಿ ಕಾನೂನು ಕ್ರಮಕ್ಕೆ ಒಳಪಡಿಸುವ ಕೆಲಸ ಮಾಡುತ್ತೇವೆ" ಎಂದು ಹೇಳಿದರು.

ಮೇಲ್ ಮೂಲಕ ಕೊಟ್ಟಿರುವ ದೂರಿನ ಬಗ್ಗೆ ತನಿಖೆ ಆಗಿಲ್ಲ ಎಂದು ಕೇಳಿದಾಗ, "ಮೇಲ್ ಬಂದಿಲ್ಲ ಎಂದ ಮೇಲೆ ತನಿಖೆ ಎಲ್ಲಿಂದ ಮಾಡಲು ಸಾಧ್ಯ? ಮೇಲ್ ಕಾಪಿ ಕೊಟ್ಟರೆ ತನಿಖೆ ಮಾಡಿಸುತ್ತೇವೆ. ಕುಮಾರಸ್ವಾಮಿ ಅವರು ಹೇಳಿದ್ದಕ್ಕೆಲ್ಲ ತನಿಖೆ ಮಾಡಿಸುವುದಕ್ಕೆ ಸಾಧ್ಯವಿಲ್ಲ. ಮೇಲ್ ಬಂದಿದೆ ಎನ್ನುವುದಕ್ಕೆ ಅದರ ಪ್ರತಿ ಇರಬೇಕು. ಅದನ್ನು ನಮಗೆ ಕೊಡಿ, ತನಿಖೆ ಮಾಡಿಸುತ್ತೇವೆ. 14 ವರ್ಷದ ಬಾಲಕಿ ಮೇಲ್ ಕಳುಹಿಸಿದ್ದಾಳೆ ಎಂದು ಈಗ ಹೇಳುತ್ತಿದ್ದಾರೆ.

ಈ ಹಿಂದೆ ಕುಮಾರಸ್ವಾಮಿ ಅವರೇ ಮೇಲ್ ಬಂದಿದೆ ಎಂದು ಹೇಳಿದ್ದರು. ಆದರೆ, ಮೇಲ್ ಎಲ್ಲಿದೆ? ಅದರ ದಾಖಲೆ ತೋರಿಸಲಿ. ಮೇಲ್ ಬಂದಿರುವ ಪ್ರತಿ ಇದ್ದರೆ ಖಂಡಿತ ತನಿಖೆ ನಡೆಸಬಹುದು. ಸರ್ಕಾರ ಈ ವಿಚಾರದಲ್ಲಿ ತನಿಖೆ ನಡೆಸಲು ಸಿದ್ಧವಿದೆ. ನ್ಯಾಯಾಲಯದ ನಿರ್ದೇಶನದ ಆಧಾರದ ಮೇಲೆ ತನಿಖೆ ನಡೆಸುವುದಕ್ಕೂ ನಮ್ಮ ಆಕ್ಷೇಪವಿಲ್ಲ. ಯಾವುದನ್ನೂ ಮುಚ್ಚಿಡುವ ಉದ್ದೇಶವೂ ಇಲ್ಲ" ಎಂದರು.

ನ್ಯಾಯಾಲಯದ ನಿರ್ದೇಶನದ ಮೇರೆಗೆ ತನಿಖೆ ನಡೆಸುತ್ತೀರಾ ಎಂದು ಕೇಳಿದಾಗ, "ಖಂಡಿತಾ, ನ್ಯಾಯಾಲಯದ ನಿರ್ದೇಶನದ ಮೇರೆಗೆ ತನಿಖೆ ನಡೆಸಲು ಸಿದ್ಧವಿದ್ದೇವೆ. ಇಲ್ಲಿ ನಾವು ಮುಚ್ಚಿ ಹಾಕುವುದೇನು ಇಲ್ಲ. 2023ರಲ್ಲಿ ಕೃಪಾ ಆಳ್ವಾ ಅವರು ಇದ್ದದ್ದು ಬಿಟ್ಟರೆ ಇದರ ಹಿಂದೆ ಕಾಂಗ್ರೆಸ್ ಪಕ್ಷದ ಬೇರೆ ನಾಯಕರು ಇಲ್ಲ. ಹೀಗಿರುವಾಗ ನಾವು ಯಾಕೆ ಪ್ರಕರಣ ಮುಚ್ಚಿಹಾಕಬೇಕು? ಸ್ಟಿಂಗ್ ಆಗಿದ್ದು, ಅದರ ವಿಡಿಯೋ ಇದ್ದಿದ್ದರೆ ಕುಮಾರಸ್ವಾಮಿ ಇಷ್ಟು ದಿನ ಬಿಡದೇ ಸುಮ್ಮನೇ ಇರುತ್ತಿದ್ದರಾ?" ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರು ಅಧಿಕಾರದಲ್ಲಿದ್ದಾಗಲೇ ಯಾಕೆ ಕ್ರಮ ಕೈಗೊಳ್ಳಲಿಲ್ಲ ಎಂದು ಕೇಳಿದಾಗ, "ನಾನು ನಿಮ್ಮ ಮೇಲೆ ಸ್ಟಿಂಗ್ ಮಾಡಿದರೆ ನಿಮಗೆ ಗೊತ್ತಾಗುವುದು ಹೇಗೆ? ನಾನು ಅದನ್ನು ಪ್ರಕಟಿಸಿದಾಗಲೇ ಅಲ್ಲವೇ ತಿಳಿಯುವುದು. ಸಿದ್ದರಾಮಯ್ಯ ಅವರಿಗೆ ಈ ಸ್ಟಿಂಗ್ ವಿಚಾರ ಗೊತ್ತಾಗಿದ್ದೇ ಈಗ ಈ ವಿಡಿಯೋ ಹೊರಗೆ ಬಂದ ಮೇಲೆ. ಆಗಲೇ ಅವರು ಇದರ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ, ಕ್ರಮ ಕೈಗೊಳ್ಳಲಾಗಿದೆ" ಎಂದು ತಿಳಿಸಿದರು.

ತನಿಖೆ ಸರಿಯಾಗಿ ಹೋಗುತ್ತಿದೆಯೇ ಎಂದು ಕೇಳಿದಾಗ, "ತನಿಖೆ ಸರಿಯಾದ ಹಾದಿಯಲ್ಲಿ ಸಾಗುತ್ತಿದೆ ಎಂದರು.

ಕುಮಾರಸ್ವಾಮಿ ಸಿಬ್ಬಂದಿಯಿಂದಲೇ ವಿಡಿಯೋ ಅಪ್ ಲೋಡ್

"ನಿನ್ನೆ ಪೊಲೀಸ್ ಆಯುಕ್ತರು ತನಿಖೆಯ ವರದಿ ಮಾಹಿತಿಯನ್ನು ಸಾರ್ವಜನಿಕರಿಗೆ ತಿಳಿಸಿದ್ದಾರೆ. ಕುಮಾರಸ್ವಾಮಿ ಅವರ ಜತೆ ಕೆಲಸ ಮಾಡುತ್ತಿರುವ ರಿತೇಶ್ ಪಾಂಡೆ, ವಿನೋದ್ ಶರ್ಮಾ, ಪಿಆರ್ ಒ ಪ್ರಜ್ವಲ್ ಪ್ರಸಾದ್ ಎಂಬುವವರು ಇದರ ಹಿಂದೆ ಇದ್ದಾರೆ. ಪ್ರಜ್ವಲ್ ಪ್ರಸಾದ್ ಈ ಹಿಂದೆ ಬೆಂಗಳೂರಿನಲ್ಲಿ ಅತ್ಯಂತ ಪ್ರತಿಷ್ಠಿತ ಇಂಗ್ಲೀಷ್ ಸುದ್ದಿ ವಾಹಿನಿಯಲ್ಲಿ ಕೆಲಸ ಮಾಡುತ್ತಿದ್ದವರು. ಈಗ ಆ ವಾಹಿನಿ ಇಲ್ಲ. ಅವರು ಸ್ಟಿಂಗ್ ಆಪರೇಷನ್ ಮಾಡುವ ಕೆಲಸ ಮಾಡುತ್ತಿದ್ದರು. ಹೀಗಾಗಿ ಅವರು ಸ್ಟಿಂಗ್ ಮಾಡುವುದರಲ್ಲಿ ನಿಪುಣರಾಗಿದ್ದರು" ಎಂದರು.



"ಈ ಮೂವರಲ್ಲಿ ಒಬ್ಬರಿಗೆ ಮಾಸಿಕ 2 ಲಕ್ಷ ಹಾಗೂ ಇತರೆ ಸೌಲಭ್ಯ, ಉಳಿದ ಇಬ್ಬರಿಗೆ ತಲಾ 1.50 ಲಕ್ಷ ಹಾಗೂ ಇತರೆ ಸೌಲಭ್ಯ ವೇತನ ನೀಡಲಾಗುತ್ತಿತ್ತು. ಬಾಗೇಪಲ್ಲಿ ಪ್ರಶಾಂತ್ ಎಂಬಾತ ಈ ಹಿಂದೆ ಪವರ್ ಟಿವಿಯ ರಾಕೇಶ್ ಶೆಟ್ಟಿ ಅವರ ಜತೆ ಕೆಲಸ ಮಾಡುತ್ತಿದ್ದ. ಈ ಸ್ಟಿಂಗ್ ವಿಡಿಯೋವನ್ನು 2023 ಫೆ.25ರಂದು ಸಿದ್ದರಾಮಯ್ಯ ಅವರ ಮನೆಯಲ್ಲಿ ಯಾವುದೇ ಮಹಿಳೆ ಕರೆದುಕೊಂಡು ಬಂದು ಮಾತನಾಡಿರುವುದು ಪ್ರಶಾಂತ್. ಆ ಸ್ಟಿಂಗ್ ವಿಡಿಯೋ ಕೆ.ಜೆ ಕೃಷ್ಣಾ ಎಂಬ ಮತ್ತೊಬ್ಬ ಪತ್ರಕರ್ತರು ಹಂಚಿಕೊಂಡಿದ್ದರು.

ಈ ಪ್ರಶಾಂತ್ ಎಂಬಾತ ಕುಮಾರಸ್ವಾಮಿ ಅವರಿಗೆ ಆಪ್ತನಾಗಿದ್ದ. ಈತನೇ ಕುಮಾರಸ್ವಾಮಿ ಅವರಿಗೆ ಈ ಸ್ಟಿಂಗ್ ವಿಡಿಯೋ ನೀಡಿದ್ದಾನೆ. ಕುಮಾರಸ್ವಾಮಿ ಅವರಿಗೆ ನೇರವಾಗಿ ನೀಡದೇ ಇದ್ದರೂ ಪ್ರಜ್ವಲ್ ಪ್ರಸಾದ್ ಅವರ ಮೂಲಕ ನೀಡಿರುತ್ತಾರೆ. ಆನಂತರ ಕತೆ, ಚಿತ್ರಕತೆ, ನಿರ್ದೇಶನವನ್ನು ಸಿದ್ಧಪಡಿಸಿ, ಬಿಡುಗಡೆ ಮಾಡಲಾಗಿದೆ" ಎಂದರು.

'ಜನ ವಿರೋಧಿ ಕಾಂಗ್ರೆಸ್ ಸರ್ಕಾರದಿಂದ ಹಾಡಹಗಲೇ ದರೋಡೆ'

● ವಿಕ್ರಮ ವಾಹಿನಿ । ಬೆಂಗಳೂರು

ಹಾಲು ಮತ್ತು ಮೊಸರಿನ ಬೆಲೆ ಏರಿಕೆಯ ಬೆನ್ನಲ್ಲೇ ರಾಜ್ಯದಲ್ಲಿ ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಳಕ್ಕೂ ಸರ್ಕಾರ ಮುಂದಾಗಿರುವುದು ಜನವಿರೋಧಿ ಹಾಗೂ ಸಂವೇದನಾರಹಿತ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ವಾಗ್ದಾಳಿ ನಡೆಸಿದರು.



ಹಾಲು ಮತ್ತು ಮೊಸರಿನ ಬೆಲೆ ಏರಿಕೆಯಾದ ಬೆನ್ನಲ್ಲೇ ನವೆಂಬರ್ 5ರಿಂದ ಬಸ್ ಪ್ರಯಾಣ ದರ ಹೆಚ್ಚಿಸಲಾಗುವುದು ಎಂಬ ಸಾರಿಗೆ ಸಚಿವ ಭೈರತಿ ಸುರೇಶ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಅಗತ್ಯ ವಸ್ತುಗಳು ಹಾಗೂ ಸೇವೆಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರ ಬದುಕು ದುಸ್ತರವಾಗಿದೆ. ಹಣಕಾಸು ನಿರ್ವಹಣೆ ಮತ್ತು ಸಂಪನ್ಮೂಲ ಕ್ರೋಢೀಕರಣದಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದರು.

2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಹಾಲಿನ ಬೆಲೆಯನ್ನು ನಾಲ್ಕು ಬಾರಿ ಹೆಚ್ಚಿಸಲಾಗಿದೆ. ಗ್ರಾಹಕರಿಂದ ಲೀಟರ್‌ಗೆ ರೂ. 64 ವಸೂಲಿ ಮಾಡಲಾಗುತ್ತಿದ್ದು, ರೈತರಿಗೆ ರೂ.42 ಮಾತ್ರ ನೀಡಲಾಗುತ್ತಿದೆ. ಉಳಿದ ರೂ. 22 ಎಲ್ಲಿಗೆ ಹೋಗುತ್ತಿದೆ ಎಂದು ಪ್ರಶ್ನಿಸಿದ ಅವರು, ಹಾಲಿನ ಬೆಲೆ ಏರಿಕೆ ವಿಚಾರದಲ್ಲಿ ಸರ್ಕಾರ ಜನರಿಗೆ ವಂಚನೆ ಮಾಡಿದೆ ಎಂದು ದೂರಿದರು.

ಹಾಲಿನ ಬೆಲೆಯನ್ನು ರೂ. 8 ಹೆಚ್ಚಿಸಲಾಗಿದೆ ಎಂದು ಸರ್ಕಾರ ಹೇಳುತ್ತಿದ್ದರೂ, ಅರ್ಧ ಲೀಟರ್ ಪ್ಯಾಕೆಟ್ ಮೇಲೆ ರೂ. 33 ಎಂದು ನಮೂದಿಸಲಾಗಿದೆ. ಇದರಿಂದ ಅರ್ಧ ಲೀಟರ್‌ಗೆ ರೂ.6 ಹಾಗೂ ಲೀಟರ್‌ಗೆ ರೂ.12 ಹೆಚ್ಚಳವಾಗಿರುವುದು ಸ್ಪಷ್ಟವಾಗುತ್ತದೆ. ಇದು ಸರ್ಕಾರ ಹೇಳುತ್ತಿರುವ ರೂ.8 ಏರಿಕೆಗಿಂತ ಹೆಚ್ಚಿನದಾಗಿದೆ ಎಂದು ಆಕ್ಷೇಪಿಸಿದರು.

ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರವನ್ನು ಈಗಾಗಲೇ ಶೇ.15ರಷ್ಟು ಹೆಚ್ಚಿಸಲಾಗಿದ್ದು, ಇದೀಗ ಮತ್ತೊಮ್ಮೆ ದರ ಏರಿಕೆಗೆ ಮುಂದಾಗಿರುವುದು ಜನಸಾಮಾನ್ಯರಿಗೆ ಹೊರೆಯಾಗಲಿದೆ. ಮುದ್ರಾಂಕ ಶುಲ್ಕವನ್ನು ರೂ. 10ರಿಂದ ರೂ.100ಕ್ಕೆ ಹೆಚ್ಚಿಸಲಾಗಿದೆ. ಮೆಟ್ರೋ ಪ್ರಯಾಣ ದರದಲ್ಲಿ ಶೇ.50ರಷ್ಟು ಏರಿಕೆ ಮಾಡಲಾಗಿದೆ. ಪೆಟ್ರೋಲ್ ಬೆಲೆಯನ್ನೂ ಶೇ.29ರಷ್ಟು ಹೆಚ್ಚಿಸಲಾಗಿದೆ ಎಂದು ಆರೋಪಿಸಿದರು.

ಖಾಲಿ ನಿವೇಶನಗಳಿಗೆ ದಂಡ ವಿಧಿಸುವುದರ ಜತೆಗೆ ನಿವೇಶನಗಳಲ್ಲಿ ಕಸವಿದ್ದರೂ ದಂಡ ವಸೂಲಿ ಮಾಡಲಾಗುತ್ತಿದೆ. ರೈತರಿಗೆ ರೂ. 2,500 ಪರಿಹಾರ ಘೋಷಿಸಿದ್ದ ಸರ್ಕಾರ ಅದನ್ನೂ ಇನ್ನೂ ಪಾವತಿಸಿಲ್ಲ. ಕಬ್ಬು ಬೆಳೆಗಾರರಿಗೂ ಅನ್ಯಾಯ ಮಾಡಲಾಗುತ್ತಿದೆ. ದೇಶಾದ್ಯಂತ ಪ್ರತಿ ಕ್ವಿಂಟಾಲ್‌ಗೆ ಎಫ್‌ಆರ್‌ಪಿ ದರ ರೂ. 3,454 ಇದ್ದು, ಉತ್ತರ ಪ್ರದೇಶ ಮತ್ತು ಗುಜರಾತ್‌ನಂತಹ ರಾಜ್ಯಗಳು ಹೆಚ್ಚುವರಿ ಎಸ್‌ಎಪಿ ದರ ಘೋಷಿಸಿವೆ. ಆದರೆ ಕರ್ನಾಟಕ ಸರ್ಕಾರ ಈವರೆಗೆ ಎಸ್‌ಎಪಿ ಘೋಷಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳು ಹಾಡಹಗಲಿನ ದರೋಡೆಗೆ ಸಮಾನವಾಗಿವೆ. ಸರ್ಕಾರದ ವಿರುದ್ಧ ಬಿಜೆಪಿ ತನ್ನ ಹೋರಾಟವನ್ನು ಮುಂಬರುವ ದಿನಗಳಲ್ಲಿ ಮತ್ತಷ್ಟು ತೀವ್ರಗೊಳಿಸಲಿದೆ ಎಂದು ಎನ್. ರವಿಕುಮಾರ್ ಎಚ್ಚರಿಸಿದರು.

ಎನ್‌ಡಿಎ ಗೆಲುವು, ಕಾಂಗ್ರೆಸ್ ಸೋಲಿಗೆ ರಣತಂತ್ರ: ಬಿವೈವಿ

● ವಿಕ್ರಮ ವಾಹಿನಿ । ಬೆಂಗಳೂರು

ಹಿರಿಯೂರು ಉಪಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಒಟ್ಟಾಗಿ ಒಂದಾಗಿ ಕೆಲಸ ಮಾಡಲಿವೆ. ಎನ್‌ಡಿಎ ಗೆಲುವಿಗಾಗಿ ರಣತಂತ್ರ ರೂಪಿಸುತ್ತೇವೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಅವರು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದರು. ಪ್ರಶ್ನೆಗೆ ಉತ್ತರಿಸಿದ ಅವರು, ಕಾಂಗ್ರೆಸ್ ಪಕ್ಷವನ್ನು ಹೇಗೆ ಸೋಲಿಸಬೇಕು ಎಂಬುದರ ಬದಲಾಗಿ ನಾವು ಯಾವ ರೀತಿ ಗೆಲ್ಲಬೇಕು ಅನ್ನೋದರ ಬಗ್ಗೆ ರಣತಂತ್ರವನ್ನು ನಾವು ರೂಪಿಸುತ್ತೇವೆ ಎಂದು ತಿಳಿಸಿದರು.

ಹಿರಿಯೂರು ಉಪ ಚುನಾವಣೆ ಯಾವ ಕ್ಷಣದಲ್ಲಿ ಬೇಕಾದರೂ ಘೋಷಣೆ ಆಗಬಹುದು. ಇಂದಿನ ನಮ್ಮ ಕೋರ್ ಕಮಿಟಿ ಸಭೆಯಲ್ಲಿ ಸವಿಸ್ತಾರವಾಗಿ ಎಲ್ಲವನ್ನು ಕೂಡ ಚರ್ಚೆ ಮಾಡಿದ್ದೇವೆ. ಬಿಜೆಪಿ ಕೆಲವು ಪ್ರಮುಖ ನಾಯಕರೊಂದಿಗೆ, ಕುಮಾರಸ್ವಾಮಿಯವರ ಜೊತೆಗೂ ಕೂತು ಚರ್ಚೆ ಮಾಡಬೇಕು. ಯಾವ ರೀತಿ ಒಮ್ಮತದ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಬೇಕು, ಅದರ ಬಗ್ಗೆ ಕೂತು ಚರ್ಚೆ ಮಾಡಿ ತೀರ್ಮಾನವನ್ನು ಮಾಡುತ್ತೇವೆ ಎಂದು ಹೇಳಿದರು.

ಡಿ.ಕೆ.ಶಿವಕುಮಾರ್ ಅವರು ಮುಖ್ಯ ಮಂತ್ರಿಗಳಾದ ಮೇಲೆ ಕಳೆದ ಎರಡು–ಮೂರು ತಿಂಗಳಲ್ಲಿ ಆಗಲೇ ಹಿರಿಯೂರಿಗೆ ಹೋಗಿ ಬಂದಿದ್ದಾರೆ. ಇತ್ತೀಚೆಗೆ ವಿಧಾನ ಪರಿಷತ್ ಚುನಾವಣೆಯ ಫಲಿತಾಂಶವನ್ನು ಕೂಡ ತಾವು ನೋಡಿದ್ದೀರಿ. ಆಡಳಿತ ಪಕ್ಷ, ಕಾಂಗ್ರೆಸ್ ಸರ್ಕಾರ ಏನೇ ಅರ್ಭಟ ನಡೆಸಿದರೂ, ಮುಖ್ಯಮಂತ್ರಿಗಳು ಏನೇ ಆರ್ಭಟ ನಡೆಸಿದರೂ ರಾಜ್ಯದ ಜನ ಈ ಸರ್ಕಾರದ ಬಗ್ಗೆ, ಕಾಂಗ್ರೆಸ್ ಸರ್ಕಾರದ ಬಗ್ಗೆ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ ಎಂದು ತಿಳಿಸಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



ಸಿಎಂ ಡಿ.ಕೆ. ಶಿವಕುಮಾರ್ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯದ ವತಿಯಿಂದ ಆಯೋಜಿಸಲಾಗುತ್ತಿರುವ 2ನೇ ಕನ್ನಡ ವೈದ್ಯಕೀಯ ಸಾಹಿತ್ಯ ಸಮ್ಮೇಳನ 2026ರ ಕಿರು ಹೊತ್ತಿಗೆ ಮತ್ತು ಲಾಂಛನವನ್ನು ಸೋಮವಾರ ಬಿಡುಗಡೆಗೊಳಿಸಿದರು. ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಶಾಸಕ ಎ.ಆರ್.ಕೃಷ್ಣಮೂರ್ತಿ, ಡಾ. ಎನ್.ಟಿ. ಶ್ರೀನಿವಾಸ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯ ಕುಲಪತಿ ಡಾ. ಭಗವಾನ್ ಬಿ. ಸಿ, ಡಾ. ಬಿ.ಟಿ. ರುದ್ರೇಶ್, ಡಾ. ವಸುಂಧರಾ ಭೂಪತಿ, ಮಾಜಿ ಶಾಸಕ ಐವಾನ್ ನಿಗ್ಲಿ, ಡಾ. ಸರೋಜಾ, ವೈದ್ಯಕೀಯ ಶಿಕ್ಷಣ ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಉಪಸ್ಥಿತರಿದ್ದರು.

ಪರಿಸರ ಸ್ನೇಹಿ ಮತ್ತು ಸುರಕ್ಷಿತ ದೀಪಾವಳಿ: ಪೊಲೀಸ್ ಇಲಾಖೆಯಿಂದ 19 ಅಂಶಗಳ ಮಾರ್ಗದರ್ಶಿ ಸೂಚಿ

● ವಿಕ್ರಮ ವಾಹಿನಿ । ಬೆಂಗಳೂರು



ದೀಪಾವಳಿ ಹಬ್ಬ ಹತ್ತಿರವಾಗುತ್ತಿರುವ ಹಿನ್ನೆಲೆ ಯಲ್ಲಿ, ಸಾರ್ವಜನಿಕರು ಪರಿಸರ ಸ್ನೇಹಿ ಹಾಗೂ ಸುರಕ್ಷಿತ ರೀತಿಯಲ್ಲಿ ಹಬ್ಬವನ್ನು ಆಚರಿಸಲು ಅನುಕೂಲ ವಾಗುವಂತೆ ರಾಜ್ಯ ಪೊಲೀಸ್ ಇಲಾಖೆಯಿಂದ 19 ಅಂಶಗಳ ಮಾರ್ಗದರ್ಶಿ ಸೂಚಿಯನ್ನು ಬಿಡುಗಡೆ ಮಾಡಲಾಗಿದೆ.

ಮಾಲಿನ್ಯ ನಿಯಂತ್ರಣ, ಅಗ್ನಿ ಅವಘಡಗಳ ತಡೆ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಪ್ರಮುಖ ಮಾರ್ಗದರ್ಶನಗಳನ್ನು ನೀಡಲಾಗಿದೆ.

ಸುಪ್ರೀಂ ಕೋರ್ಟ್ ಆದೇಶದಂತೆ, ರಾತ್ರಿ 8 ರಿಂದ 10 ಗಂಟೆಯವರೆಗೆ ಮಾತ್ರ ಪಟಾಕಿ ಸಿಡಿಸಲು ಅವಕಾಶವಿರುತ್ತದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು.

ಆಸ್ಪತ್ರೆಗಳು, ಪೆಟ್ರೋಲ್ ಬಂಕ್‌ಗಳು, ಗ್ಯಾಸ್ ಸ್ಟೇಷನ್‌ಗಳು, ಧಾರ್ಮಿಕ ಕೇಂದ್ರಗಳು, ವೃದ್ಧಾಶ್ರಮಗಳು ಮತ್ತು ಶಿಶುಪಾಲನಾ ಕೇಂದ್ರಗಳ ಸುತ್ತಮುತ್ತ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಸಾರ್ವಜನಿಕರು ಜನನಿಬಿಡ ಪ್ರದೇಶಗಳು, ರಸ್ತೆಗಳು ಹಾಗೂ ನಿಲ್ಲಿಸಿದ ವಾಹನಗಳ ಬಳಿ ಪಟಾಕಿ ಸಿಡಿಸಬಾರದು. ತೆರೆದ ಮೈದಾನಗಳು ಹಾಗೂ ಕಡಿಮೆ ಜನರಿರುವ ಸ್ಥಳಗಳನ್ನು ಬಳಸಬೇಕು.

ಅಧಿಕೃತ ಪರವಾನಗಿ ಹೊಂದಿರುವ ಅಂಗಡಿಗಳಿಂದ ಮಾತ್ರ ಗುಣಮಟ್ಟದ ಹಸಿರು ಪಟಾಕಿಗಳನ್ನು ಖರೀದಿಸಬೇಕು. ಪಟಾಕಿಯ ಅಸಲೀಯತೆಯನ್ನು ಖಚಿತಪಡಿಸಿಕೊಳ್ಳಲು ಪ್ಯಾಕೇಟ್‌ನಲ್ಲಿರುವ ಕಿಖ ಕೋಡ್ ಸ್ಕ್ಯಾನ್ ಮಾಡಿ ಪರಿಶೀಲಿಸುವುದು ಕಡ್ಡಾಯ.

ಅನಧಿಕೃತ ಅಂಗಡಿಗಳಲ್ಲಿ ಪಟಾಕಿ ಖರೀದಿಸಬಾರದು. ಯಾವುದೇ ರೀತಿಯ ಅಕ್ರಮ ಮಾರಾಟ ಕಂಡುಬಂದಲ್ಲಿ ತಕ್ಷಣವೇ ಹತ್ತಿರದ ಪೊಲೀಸ್ ಠಾಣೆಗೆ ಅಥವಾ 112 ತುರ್ತು ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು.

ಅತಿಯಾದ ಶಬ್ದ ಮತ್ತು ವಾಯು ಮಾಲಿನ್ಯ ಉಂಟುಮಾಡುವ ಪಟಾಕಿಗಳನ್ನು ನಿಷೇಧಿಸಲಾಗಿದೆ. ಹಿರಿಯ ನಾಗರಿಕರು, ರೋಗಿಗಳು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಡಿಮೆ ಶಬ್ದದ ಹಸಿರು ಪಟಾಕಿಗಳನ್ನು ಬಳಸುವುದು ಸೂಕ್ತ.

ಪಟಾಕಿ ಸಿಡಿಸುವಾಗ ಸುರಕ್ಷಿತ ಕಣ್ಣಿನ ಕನ್ನಡಕ ಹಾಗೂ ಕೈಗವಸುಗಳನ್ನು ಧರಿಸುವುದು ಸೂಕ್ತ. ಪಟಾಕಿ ಸಿಡಿಸುವಾಗ ಹತ್ತಿ ಉಡುಪುಗಳನ್ನೇ ಧರಿಸಬೇಕು, ನೈಲಾನ್, ಸಿಂಥೆಟಿಕ್ ಅಥವಾ ಪಾಲಿಯೆಸ್ಟರ್ ಬಟ್ಟೆಗಳನ್ನು ಧರಿಸಬಾರದು.

ಪಟಾಕಿಯನ್ನು ಕೈಯಲ್ಲಿ ಹಿಡಿದುಕೊಂಡು ಸಿಡಿಸುವುದು ತೀವ್ರ ಅಪಾಯಕಾರಿ. ವಿಶೇಷವಾಗಿ ಮುಖ, ಕಣ್ಣು ಹಾಗೂ ಕಿವಿಗಳಿಗೆ ಹಾನಿಯಾಗದಂತೆ ಜಾಗ್ರತೆ ವಹಿಸಬೇಕು.

ಪಟಾಕಿ ಸಿಡಿಸುವ ಸ್ಥಳದಲ್ಲಿ ನೀರು, ಮರಳು, ಅಗ್ನಿಶಾಮಕ ಉಪಕರಣಗಳು ಹಾಗೂ ಪ್ರಥಮ ಚಿಕಿತ್ಸಾ ಪೆಟ್ಟಿಗೆಯನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಸಣ್ಣ ಮಕ್ಕಳು ಹಿರಿಯರ ಮೇಲ್ವಿಚಾರಣೆಯಿಲ್ಲದೆ ಪಟಾಕಿ ಸಿಡಿಸದಂತೆ ಪೋಷಕರು ಗಮನಹರಿಸಬೇಕು.

ಹಬ್ಬದ ಸಂಭ್ರಮದಲ್ಲಿ ಮೂಕ ಪ್ರಾಣಿಗಳಿಗೆ ತೊಂದರೆ ಅಥವಾ ಹಾನಿ ಉಂಟಾಗದಂತೆ ಜಾಗರೂಕರಾಗಿರಬೇಕು.

ಪಟಾಕಿ ಸಿಡಿಸಿದ ನಂತರ, ಉಳಿದ ಸುಟ್ಟ ಭಾಗಗಳನ್ನು ಬಕೆಟ್‌ನಲ್ಲಿ ಸಂಗ್ರಹಿಸಿ ಮರಳು ಹಾಕಿ ಅಥವಾ ನೀರು ಹೊಯ್ದು ಸಂಪೂರ್ಣವಾಗಿ ಆರಿಸಬೇಕು.

ಆಟದ ಮೈದಾನಗಳು, ರಸ್ತೆಗಳು ಮತ್ತು ಮನೆಯ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಬೇಕು.

ಯಾವುದೇ ರೀತಿಯ ಅಗ್ನಿ ಅವಘಡ ಅಥವಾ ತುರ್ತು ಪರಿಸ್ಥಿತಿಯಲ್ಲಿ ತಕ್ಷಣವೇ 112 (ಪೊಲೀಸ್/ ಅಗ್ನಿಶಾಮಕ) ಅಥವಾ 108 (ಆಂಬ್ಯುಲೆನ್ಸ್) ಸಂಖ್ಯೆಯನ್ನು ಸಂಪರ್ಕಿಸಿ ವೈದ್ಯಕೀಯ ನೆರವು ಪಡೆಯುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

ಸಾಗರದಲ್ಲಿ ಶ್ರಮದಾನ ಮೂಲಕ ವಿಭಿನ್ನ ರಾಜ್ಯೋತ್ಸವ ಆಚರಣೆ


● ವಿಕ್ರಮ ವಾಹಿನಿ । ಸಾಗರ (ಶಿವಮೊಗ್ಗ)

ತಾಲೂಕಿನ ಹೆಗ್ಗೋಡು ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಚಿಕ್ಕಹೊನ್ನೇಸರ ದಲ್ಲಿ ಶ್ರಮದಾನ ಮಾಡುವ ಮುಖೇನ ಕನ್ನಡ ರಾಜ್ಯೋತ್ಸವವನ್ನು ವಿಭಿನ್ನವಾಗಿ ಆಚರಿಸಲಾಯಿತು.

ಗ್ರಾಮಸ್ಥರು ಮುಂಜಾನೆಯೇ ಸ್ವಗ್ರಾಮದ ರಸ್ತೆಯ ಇಕ್ಕೆಲಗಳಲ್ಲಿ ಬೆಳೆದ ಗಿಡ, ಕಳೆ ಸವರಿ, ಪ್ಲಾಸ್ಟಿಕ್ ಸೇರಿದಂತೆ ಇತರೆ ಕಸ ಕಡ್ಡಿ ತೆಗೆದು ಸ್ವಚ್ಛ ಗೊಳಿಸಿದರು.

ಇದೇ ವೇಳೆ, ಗ್ರಾಮಸ್ಥರು ಊರಿನ ರಸ್ತೆ ದುರಸ್ತಿ ಮಾಡದ ಸ್ಥಳೀಯ ಆಡಳಿತದ ಬಗ್ಗೆ ಅಸಮಾಧಾನ ಹೊರ ಹಾಕಿದರು. ಪ್ರತೀ ವರ್ಷ ಮಳೆಗಾಲದಲ್ಲಿ ಸೊಪ್ಪಿನ ಬೆಟ್ಟದ ನೀರು ರಸ್ತೆ ಮೇಲೆ ಹರಿದು, ರಸ್ತೆ ಹದಗೆಟ್ಟು ಹೋಗಿದೆ. ವಾಹನ ಸವಾರರು, ವಿದ್ಯಾರ್ಥಿಗಳು ಈ ರಸ್ತೆಯಲ್ಲಿ ಸಂಚರಿಸುವುದೇ ಕಷ್ಟವಾಗಿತ್ತು.

ಆದಷ್ಟು ಬೇಗ ರಸ್ತೆ ದುರಸ್ತಿ ಮಾಡಿ ಕೊಡಿ ಎಂದು ಮನವಿ ಮಾಡಿಕೊಂಡರು. ಸ್ಥಳೀಯ ಜನಪ್ರತಿನಿಧಿಗಳು ಚುನಾವಣೆ ಸಂದರ್ಭ ಮಾತ್ರ ಮನೆ ಮನೆಗೆ ಭೇಟಿ ನೀಡುತ್ತಾರೆ. ಚುನಾವಣೆ ಗೆದ್ದ ನಂತರ ನಮ್ಮೂರನ್ನು ನಿರ್ಲಕ್ಷಿಸಿದ್ದಾರೆ ಎಂದು ಆರೋಪಿಸಿದರು.



ರಸ್ತೆ ಅಗಲೀಕರಣದ ಟಿ.ಡಿ.ಆರ್ ವ್ಯವಸ್ಥೆಯ ಸಂಪೂರ್ಣ ಡಿಜಿಟಲೀಕರಣ

● ವಿಕ್ರಮ ವಾಹಿನಿ । ಬೆಂಗಳೂರು

ರಸ್ತೆಗಳ ಅಗಲೀಕರಣ ಮತ್ತು ಹೊಸ ರಸ್ತೆಗಳ ನಿರ್ಮಾಣಕ್ಕೆ ಅಗತ್ಯ ವಿರುವ ಭೂಸ್ವಾಧೀನ ಪ್ರಕ್ರಿಯೆ ಯನ್ನು ಸುಲಭಗೊಳಿಸಲು ಟಿ.ಡಿ.ಆರ್ ವ್ಯವಸ್ಥೆಯನ್ನು ಸಂಪೂರ್ಣ ಡಿಜಿಟಲೀಕರಣ ಗೊಳಿಸುವಂತೆ ಸಚಿವ ಕೃಷ್ಣ ಬೈರೇಗೌಡ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ವಿಕಾಸಸೌಧದಲ್ಲಿ ಸಂಬಂಧಿತ ಅಧಿಕಾರಿಗಳ ಸಭೆ ನಡೆಸಿದ ಸಚಿವ ಕೃಷ್ಣ ಬೈರೇಗೌಡ ಅವರು, "ನಗರದಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟನೆಗೆ ದೀರ್ಘಕಾಲೀನ ಹಾಗೂ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಸ್ತೆಗಳ ಅಗಲೀಕರಣ ಮತ್ತು ಹೊಸ ರಸ್ತೆಗಳ ನಿರ್ಮಾಣವು ಅತ್ಯಂತ ತುರ್ತು ಮತ್ತು ಅನಿವಾರ್ಯ ಹೆಜ್ಜೆಯಾಗಿದೆ. ಆದರೆ, ಇಷ್ಟು ವರ್ಷಗಳ ಕಾಲ ಮೂಲಸೌಕರ್ಯ ಅಭಿವೃದ್ಧಿಗೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ಸುಲಭಗೊಳಿಸುವ ಟಿ.ಡಿ.ಆರ್ ವ್ಯವಸ್ಥೆಯು ಸಂಪೂರ್ಣವಾಗಿ ಕಾಗದದ ಕಡತಗಳ ಮೂಲಕ ನಡೆಯುತ್ತಿದ್ದುದರಿಂದ, ಸರಿಯಾದ ಟ್ರ್ಯಾಕಿಂಗ್ ವ್ಯವಸ್ಥೆ ಇಲ್ಲದೆ ವ್ಯವಸ್ಥೆಯಲ್ಲಿ ಅಪಾರದರ್ಶಕತೆ ತುಂಬಿತ್ತು. ಪರಿಣಾಮ ಸಾರ್ವಜನಿಕರಿಗೆ ಟಿ.ಡಿ.ಆರ್ ವ್ಯವಸ್ಥೆಯ ಮೇಲೆ ತೀರಾ ಅಪನಂಬಿಕೆ ಹಾಗೂ ಅತೃಪ್ತಿ ಮೂಡಿತ್ತು" ಎಂದು ಅಭಿಪ್ರಾಯಪಟ್ಟರು.



ದಾಖಲೆ ಪತ್ರಗಳ ಹಾವಳಿ, ಕಾಲಹರಣ ಮತ್ತು ಪಾರದರ್ಶಕತೆಯ ಅಭಾವಕ್ಕೆ ಮುಕ್ತಿ: ನಗರದ ಮೂಲಸೌಕರ್ಯ ಅಭಿವೃದ್ಧಿಗೆ ಎದುರಾ ಗಿರುವ ಅಡೆತಡೆಗಳನ್ನು ನಿವಾರಿಸಲು ಹಾಗೂ ಭೂಮಾಲೀಕರು ಹಾಗೂ ಸಾರ್ವಜನಿಕರಲ್ಲಿ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಮರುಸ್ಥಾಪಿಸಲು ಪ್ರಸ್ತುತ ಮಹತ್ವದ ಹೆಜ್ಜೆ ಇಡಬೇಕಾಗಿದೆ. ಅದರಂತೆ, ರಸ್ತೆ ಮತ್ತು ಆಸ್ತಿಯ ವಿವರಗಳ ಪ್ರಾಥಮಿಕ ಹಂತದಿಂದ ಹಿಡಿದು, ಎಲ್ಲಾ ಹಂತಗಳ ಪರಿಶೀಲನೆ ಮುಗಿದು ಅಂತಿಮವಾಗಿ ಟಿ.ಡಿ.ಆರ್ ಪ್ರಮಾಣಪತ್ರ ವಿತರಿಸುವವರೆಗಿನ ಸಂಪೂರ್ಣ ಪ್ರಕ್ರಿಯೆಯನ್ನು ಡಿಜಿಟಲೀಕರಣಗೊಳಿಸಲು ಅಗತ್ಯವಾದ ಕ್ರಮ ಜರುಗಿಸಬೇಕು ಎಂದು ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಕೇವಲ ಟಿ.ಡಿ.ಆರ್ ಮಂಜೂರಾತಿ ಮಾತ್ರವಲ್ಲದೆ, ಅದರ ವಹಿವಾಟು (ಖರೀದಿ–ಮಾರಾಟ) ಮತ್ತು ಅಂತಿಮ ಬಳಕೆಯ ಪ್ರಕ್ರಿಯೆಯನ್ನೂ ಸಂಪೂರ್ಣವಾಗಿ ಆನ್ಲೈನ್ ಡಿಜಿಟಲ್ ವೇದಿಕೆಗೆ ತರಬೇಕು.

ಈ ಹೈಟೆಕ್ ವ್ಯವಸ್ಥೆಯಿಂದಾಗಿ ಇನ್ನು ಮುಂದೆ ನಾಗರಿಕರು ತಮ್ಮ ಕಡತಗಳು ಯಾವ ಹಂತದಲ್ಲಿವೆ ಎಂಬುದನ್ನು ಆನ್ಲೈನ್ ಮೂಲಕವೇ ಸುಲಭವಾಗಿ ಟ್ರ್ಯಾಕ್ ಮಾಡಲು ಸಾಧ್ಯವಾಗಲಿದೆ.

ಜೊತೆಗೆ ಮಧ್ಯವರ್ತಿಗಳ ಹಸ್ತಕ್ಷೇಪ, ಅನಗತ್ಯ ವಿಳಂಬ ಮತ್ತು ಸಾರ್ವಜನಿಕರಿಗೆ ಆಗುವ ಕಿರುಕುಳಕ್ಕೆ ಸಂಪೂರ್ಣವಾಗಿ ಮುಕ್ತಿ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ಈ ಹೊಸ ಸುಧಾರಣೆಯು ಸಾರ್ವಜನಿಕರಲ್ಲಿ ಟಿ.ಡಿ.ಆರ್ ವ್ಯವಸ್ಥೆಯ ಮೇಲೆ ಕಳೆದುಹೋಗಿದ್ದ ವಿಶ್ವಾಸವನ್ನು ಮರಳಿ ತರಲಿದೆ ಮಾತ್ರವಲ್ಲದೆ, ಈ ವ್ಯವಸ್ಥೆಯನ್ನು ಅತ್ಯಂತ ಕಾರ್ಯಸಾಧ್ಯ ಹಾಗೂ ಜನಸ್ನೇಹಿಯಾಗಿಸಲಿದೆ. ಅತ್ಯಂತ ಪಾರದರ್ಶಕ ಮತ್ತು ತ್ವರಿತವಾಗಿರುವ ಈ ಆನ್ಲೈನ್ ವ್ಯವಸ್ಥೆಯ ಮೂಲಕ ಸರಾಗವಾಗಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ನಗರದಲ್ಲಿ ಸುಗಮ ಸಂಚಾರಕ್ಕೆ ಬೇಕಾದ ಬೃಹತ್ ಮೂಲ ಸೌಕರ್ಯಗಳ ಸೃಷ್ಟಿಯನ್ನು ಕೈಗೊಳ್ಳಲು ಇದು ದಾರಿ ಮಾಡಿಕೊಡಲಿದೆ ಎಂದು ಅವರು ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್ ಕುಮಾರ್, ರಮೇಶ್ ಕೆ.ಎನ್., ಜಿ. ಜಗದೀಶ್, ಬೆಂಗಳೂರು ನಗರ ಸಿಇಓ ಆರ್.ಯತೀಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಡಿಜಿಟಲೀಕರಣ ಯೋಜನೆಯ ಪ್ರಮುಖ ಅಂಶಗಳು: ಸಂಪೂರ್ಣ ಡಿಜಿಟಲ್ ಟ್ರ್ಯಾಕಿಂಗ್: ರಸ್ತೆ ಮತ್ತು ಆಸ್ತಿಯ ಭೂದಾಖಲೆಗಳ ಪರಿಶೀಲನೆ ಯಿಂದ ಹಿಡಿದು, ಎಲ್ಲಾ ಹಂತಗಳನ್ನು ಹಾದು ಟಿ.ಡಿ.ಆರ್ ಪ್ರಮಾಣ ಪತ್ರ ವಿತರಿಸುವವರೆಗಿನ ಪ್ರತಿಯೊಂದು ಪ್ರಕ್ರಿಯೆಯನ್ನು ಆನ್ಲೈನ್ ಆಧಾರಿತ ಡಿಜಿಟಲ್ ವ್ಯವಸ್ಥೆಗೆ ಒಳಪಡಿಸ ಲಾಗುವುದು. ವಹಿವಾಟು ಮತ್ತು ಬಳಕೆಯ ಡಿಜಿಟಲೀಕರಣ: ಪ್ರಮುಖ ಹೆಜ್ಜೆಯಾಗಿ, ಪಡೆದು ಕೊಂಡ ಟಿ.ಡಿ.ಆರ್ನ ಮಾರಾಟ/ ಖರೀದಿ (ವಹಿವಾಟು) ಹಾಗೂ ಅದರ ಅಂತಿಮ ಬಳಕೆ (Utilization) ಪ್ರಕ್ರಿಯೆಯನ್ನೂ ಸಹ ಡಿಜಿಟಲೀಕರಣಗೊಳಿಸಲಾಗುವುದು.

ವಿಳಂಬ ಮತ್ತು ಕಿರುಕುಳಕ್ಕೆ ಮುಕ್ತಿ: ಕಾಗದ ರಹಿತ ಡಿಜಿಟಲ್ ವ್ಯವಸ್ಥೆಯಿಂದಾಗಿ ಅನಗತ್ಯ ವಿಳಂಬ, ಮಧ್ಯವರ್ತಿಗಳ ಹಸ್ತಕ್ಷೇಪ ಮತ್ತು ಸಾರ್ವಜನಿಕರಿಗಾಗುವ ಕಿರುಕುಳ ಸಂಪೂರ್ಣವಾಗಿ ತಪ್ಪಲಿದೆ.

ವಿಶ್ವಾಸಾರ್ಹತೆ ಹೆಚ್ಚಳ: ಈ ಸುಧಾರಣೆಯು ಸಾರ್ವಜನಿಕರು ಮತ್ತು ಭೂಮಾಲೀ ಕರಲ್ಲಿ ಟಿ.ಡಿ.ಆರ್ ವ್ಯವಸ್ಥೆಯ ಮೇಲಿರುವ ನಂಬಿಕೆಯನ್ನು ಮರು ಸ್ಥಾಪಿಸಲಿದ್ದು, ವ್ಯವಸ್ಥೆಯನ್ನು ಅತ್ಯಂತ ಯಶಸ್ವಿ ಹಾಗೂ ಕಾರ್ಯ ಸಾಧ್ಯವಾಗಿಸಲಿದೆ.

ಅಂತಿಮ ಗುರಿ: ಈ ಕ್ರಾಂತಿಕಾರಿ ಡಿಜಿಟಲ್ ಪ್ಲಾಟ್ಫಾರ್ಮ್ ಮೂಲಕ ಭೂಸ್ವಾಧೀನ ಪ್ರಕ್ರಿಯೆಯನ್ನು ಅತ್ಯಂತ ವೇಗವಾಗಿ ಮತ್ತು ಸುಲಭವಾಗಿ ಪೂರ್ಣ ಗೊಳಿಸಿ, ನಗರದಲ್ಲಿ ಸುಗಮ ಸಂಚಾರಕ್ಕೆ ಅಗತ್ಯವಿರುವ ಬೃಹತ್ ಮೂಲ ಸೌಕರ್ಯಗಳನ್ನು ತ್ವರಿತವಾಗಿ ನಿರ್ಮಿಸಲು ಸಾಧ್ಯವಾಗಲಿದೆ.

ಛತ್ರಪತಿ ಸಂಭಾಜಿನಗರದಲ್ಲಿ 35 ಎಲೆಕ್ಟ್ರಿಕ್ ಬಸ್‌ಗಳಿಗೆ ಚಾಲನೆ

● ವಿಕ್ರಮ ವಾಹಿನಿ । ಮುಂಬೈ

ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರ ನಗರದಲ್ಲಿ ಸುಸ್ಥಿರ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶದಿಂದ ಓಲೆಕ್ಟ್ರಾ ಗ್ರೀನ್‌ಟೆಕ್ ಲಿಮಿಟೆಡ್‌ನ 35 ಹವಾ ನಿಯಂತ್ರಿತ ವಿದ್ಯುತ್ ಬಸ್‌ಗಳನ್ನು ಪರಿಚಯಿಸಿದೆ. ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ನಗರದ ವಿಭಾಗೀಯ ಕ್ರೀಡಾ ಸಂಕೀರ್ಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಸ್‌ಗಳಿಗೆ ಅಧಿಕೃತವಾಗಿ ಚಾಲನೆ ನೀಡಿದರು.



ಛತ್ರಪತಿ ಸಂಭಾಜಿನಗರ ಮಹಾನಗರ ಪಾಲಿಕೆಯ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಆಧುನೀಕರಿಸುವ ಪ್ರಯತ್ನದ ಭಾಗವಾಗಿ ಈ ಬಸ್‌ಗಳನ್ನು ಸೇವೆಗೆ ಪರಿಚಯಿಸಲಾಗಿದೆ. ಓಲೆಕ್ಟ್ರಾದ ಈ ಬಸ್‌ಗಳನ್ನು ಇವೇ ಟ್ರಾನ್ಸ್ ಸಂಸ್ಥೆ ನಿರ್ವಹಿಸಲಿದ್ದು, ನವೆಂಬರ್ 2ರಿಂದ ನಗರದ ವಿವಿಧ ಮಾರ್ಗಗಳಲ್ಲಿ ಪ್ರಯಾಣಿಕರ ಸೇವೆ ಆರಂಭಿಸದೆ. ಇದರಿಂದ ನಗರ ಸಂಪರ್ಕ ಸುಧಾರಿಸುವುದರ ಜತೆಗೆ ಪ್ರಯಾಣಿಕರಿಗೆ ಸ್ವಚ್ಛ ಮತ್ತು ಆರಾಮದಾಯಕ ಪ್ರಯಾಣದ ಅನುಭವ ದೊರೆಯಲಿದೆ.

ಓಲೆಕ್ಟ್ರಾ ಗ್ರೀನ್‌ಟೆಕ್‌ನ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಬಾಬು ಮಾತನಾಡಿ, ಭಾರತವು ಸುಸ್ಥಿರ ಸಾರ್ವಜನಿಕ ಸಾರಿಗೆ ವ್ಯವಸ್ಥೆಯತ್ತ ಗಮನಾರ್ಹ ಪ್ರಗತಿ ಸಾಧಿಸುತ್ತಿದೆ. ಛತ್ರಪತಿ ಸಂಭಾಜಿನಗರದಲ್ಲಿ 35 ವಿದ್ಯುತ್ ಬಸ್‌ಗಳ ಪರಿಚಯವು ಸ್ವಚ್ಛ, ವಿಶ್ವಾಸಾರ್ಹ ಹಾಗೂ ಪರಿಣಾಮಕಾರಿ ಸಾರಿಗೆ ವ್ಯವಸ್ಥೆಯತ್ತ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ದೇಶದ 55ಕ್ಕೂ ಹೆಚ್ಚು ನಗರಗಳಲ್ಲಿ 4,500ಕ್ಕೂ ಅಧಿಕ ಓಲೆಕ್ಟ್ರಾ ವಿದ್ಯುತ್ ಬಸ್‌ಗಳು ಸಂಚರಿಸುತ್ತಿದ್ದು, 75 ಕೋಟಿ ಕಿಲೋ ಮೀಟರ್‌ಗೂ ಅಧಿಕ ಪರಿಸರ ಸ್ನೇಹಿ ಪ್ರಯಾಣವನ್ನು ಪೂರ್ಣಗೊಳಿಸಿವೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಹೊಸ 9 ಮೀಟರ್ ಉದ್ದದ ಬಸ್‌ಗಳು ಬ್ಲೇಡ್ ಬ್ಯಾಟರಿ ತಂತ್ರಜ್ಞಾನ ಹೊಂದಿದ್ದು, ಮೊನೊಕಾಕ್ ನಿರ್ಮಾಣ ವಿನ್ಯಾಸದಲ್ಲಿ ತಯಾರಾಗಿವೆ. ಮುಂಭಾಗ ಮತ್ತು ಹಿಂಭಾಗದ ಏರ್ ಸಸ್ಪೆನ್ಷನ್, ಆಂಟಿ–ಲಾಕ್ ಬ್ರೇಕಿಂಗ್ ಸಿಸ್ಟಮ್ (ಎಬಿಎಸ್), ರೀಜೆನರೇಟಿವ್ ಬ್ರೇಕಿಂಗ್ ಹಾಗೂ ಡಿಸ್ಕ್ ಬ್ರೇಕ್‌ಗಳು ಸುರಕ್ಷತೆ ಮತ್ತು ಪ್ರಯಾಣದ ಆರಾಮವನ್ನು ಹೆಚ್ಚಿಸಲಿವೆ.

ಪ್ರಯಾಣಿಕರ ಅನುಕೂಲಕ್ಕಾಗಿ ಸಿಸಿಟಿವಿ ಕ್ಯಾಮೆರಾಗಳು, ಡಿಜಿಟಲ್ ಗಮ್ಯಸ್ಥಾನ ಫಲಕಗಳು, ಪ್ರಯಾಣಿಕರ ಪ್ರಕಟಣಾ ವ್ಯವಸ್ಥೆ, ವಾಹನ ಸ್ಥಳ ಪತ್ತೆ ವ್ಯವಸ್ಥೆ, ಯುಎಸ್‌ಬಿ ಚಾರ್ಜಿಂಗ್ ಪೋರ್ಟ್‌ಗಳು ಹಾಗೂ ಡಿಜಿಟಲ್ ಇನ್‌ಸ್ಟ್ರುಮೆಂಟ್ ಕ್ಲಸ್ಟರ್ ಅಳವಡಿಸಲಾಗಿದೆ.

ಶೂನ್ಯ ಟೇಲ್‌ಪೈಪ್ ಹೊರಸೂಸುವಿಕೆ ಮತ್ತು ಕಡಿಮೆ ಶಬ್ದದೊಂದಿಗೆ ಸಂಚರಿಸುವ ಈ ಬಸ್‌ಗಳು ನಗರ ವಾಯುಮಾಲಿನ್ಯ ಕಡಿಮೆ ಮಾಡಲು ನೆರವಾಗಲಿವೆ.

ಮಹಾರಾಷ್ಟ್ರ ಸರ್ಕಾರ ಮತ್ತು ಛತ್ರಪತಿ ಸಂಭಾಜಿನಗರ ಮಹಾನಗರ ಪಾಲಿಕೆಯ ಸಹಕಾರಕ್ಕೆ ಓಲೆಕ್ಟ್ರಾ ಕೃತಜ್ಞತೆ ಸಲ್ಲಿಸಿದ್ದು, ದೇಶಾದ್ಯಂತ ಸುಸ್ಥಿರ ವಿದ್ಯುತ್ ಸಾರಿಗೆ ವ್ಯವಸ್ಥೆ ಅಭಿವೃದ್ಧಿಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದೆ.



ಸೋಮವಾರ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ, ಕರ್ನಾಟಕದ ಪ್ರಭಾರಿ ಹರೀಶ್ ದ್ವಿವೇದಿ ಅವರನ್ನು ಬೆಂಗಳೂರಿನ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸ್ವಾಗತ ಮಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹಾಗೂ ಪ್ರಮುಖರು ಹಾಜರಿದ್ದರು.



ಚಂಡಮಾರುತ ಪೀಡಿತ ಆಂಧ್ರ ಪ್ರದೇಶದಲ್ಲಿ ವಿದ್ಯುತ್ ಪೂರೈಕೆ ಮರುಸ್ಥಾಪನೆ ಕಾರ್ಯಕ್ಕೆ ನೆರವಾಗಲು ತೆರಳಿದ ಬೆಸ್ಕಾಂನ 500 ಪವರ್‌ಮನ್‌ಗಳಿಗೆ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ ಹಾಗೂ ಹಿರಿಯ ಅಧಿಕಾರಿಗಳು ಕಾರ್ಪೊರೇಟ್ ಕಚೇರಿಯಿಂದ ಸೋಮವಾರ ಬೀಳ್ಕೊಟ್ಟರು.

ಡಿಕೆಶಿ- ನಾಯ್ಡು ಮಾತುಕತೆ; ಚಂಡಮಾರುತ ಪೀಡಿತ ಆಂಧ್ರಕ್ಕೆ ರಾಜ್ಯದ ನೆರವು

● ವಿಕ್ರಮ ವಾಹಿನಿ । ಬೆಂಗಳೂರು

'ಅರ್ನಬ್' ಚಂಡಮಾರುತದಿಂದಾಗಿ ಹಾನಿ ಗೊಳಗಾದ ಆಂಧ್ರ ಪ್ರದೇಶದಲ್ಲಿ ವಿದ್ಯುತ್ ಪೂರೈಕೆ ಮೂಲಸೌಕರ್ಯ ಮರುಸ್ಥಾಪನೆಗೆ ಸಿಎಂ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ರಾಜ್ಯ ಸರ್ಕಾರ ಸಹಾಯ ಹಸ್ತ ಚಾಚಿದೆ.



ವಿದ್ಯುತ್ ಪೂರೈಕೆ ಮೂಲ ಸೌಕರ್ಯ ಮರು ಸ್ಥಾಪಿಸಲು ಅಗತ್ಯವಿರುವ ಮಾನವಶಕ್ತಿ ಮತ್ತು ಉಪಕರಣಗಳನ್ನು ಒದಗಿಸುವಂತೆ ಆಂಧ್ರ ಪ್ರದೇಶ ಸರ್ಕಾರವು ಕರ್ನಾಟಕ ಸರ್ಕಾರಕ್ಕೆ ವಿನಂತಿಸಿತ್ತು. ಇದಕ್ಕೆ ಸ್ಪಂದಿಸಿರುವ ರಾಜ್ಯ ಸರಕಾರವು ಇಂಧನ ಸಚಿವ ಕೆ.ಜೆ ಜಾರ್ಜ್ ಅವರ ಮೇಲ್ವಿಚಾರಣೆಯಲ್ಲಿ ರಾಜ್ಯಗಳ ನಡುವಿನ ಸಹಕಾರ ಮತ್ತು ಒಗ್ಗಟ್ಟಿನ ದೃಷ್ಟಿಯಿಂದ ಆಂಧ್ರ ಪ್ರದೇಶಕ್ಕೆ ಸಹಾಯ ಮಾಡಲು ಮುಂದಾಗಿದೆ.

ಆಂಧ್ರ ಪ್ರದೇಶ ಸಿಎಂ ಚಂದ್ರಬಾಬು ನಾಯ್ಡು ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಸಿಎಂ ಡಿ.ಕೆ. ಶಿವಕುಮಾರ್ ಸಂಕಷ್ಟದ ಈ ಸಮಯದಲ್ಲಿ ಕರ್ನಾಟಕದ ಸಂಪೂರ್ಣ ಬೆಂಬಲ ನೀಡುವ ಭರವಸೆ ನೀಡಿದ್ದಾರೆ.

ಕರ್ನಾಟಕವು ಆಂಧ್ರ ಪ್ರದೇಶದ ಜನರೊಂದಿಗೆ ದೃಢವಾಗಿ ನಿಲ್ಲುತ್ತದೆ

"ವಿದ್ಯುತ್ ಅತ್ಯಗತ್ಯ ಸೇವೆಯಾಗಿದ್ದು, ವಿಕೋಪಕ್ಕೆ ಸಿಲುಕಿದ ಜನರ ಕ್ಷೇಮಕ್ಕಾಗಿ ಅದನ್ನು ತಕ್ಷಣ ಮರು ಸ್ಥಾಪಿಸುವುದು ತುರ್ತು ಅಗತ್ಯವಾಗಿದೆ. ಕಷ್ಟದ ಸಮಯದಲ್ಲಿ ಕರ್ನಾಟಕವು ಆಂಧ್ರ ಪ್ರದೇಶದ ಜನರೊಂದಿಗೆ ದೃಢವಾಗಿ ನಿಲ್ಲುತ್ತದೆ" ಎಂದು ಸಿಎಂ ಶಿವಕುಮಾರ್ ತಿಳಿಸಿದ್ದಾರೆ.

"ಕ್ಷೇತ್ರ ಮಟ್ಟದ ಸಮರ್ಥ ಸಮನ್ವಯ ಮತ್ತು ಅತ್ಯಾಧುನಿಕ ಉಪಕರಣಗಳ ಬಳಕೆಯ ಮೂಲಕ ಆಂಧ್ರ ಪ್ರದೇಶದ ಅಧಿಕಾರಿಗಳೊಂದಿಗೆ ನಿಕಟವಾಗಿ ಕೆಲಸ ಮಾಡಿ ವಿದ್ಯುತ್ ಪೂರೈಕೆಯನ್ನು ಶೀಘ್ರವೇ ಪುನರಾರಂಭಿಸುತ್ತೇವೆ." ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದ್ದಾರೆ.

500 ಕೌಶಲ್ಯಯುತ ಲೈನ್‌ಮನ್‌ಗಳು, ಕ್ರೇನ್, ಅರ್ಥ್ ಆಗರ್ ಹೊಂದಿರುವ 15 ಪಾಲ್ಫಿಂಗರ್ ಲಾರಿ, 25 ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳ ರವಾನೆ:

ಚಂಡಮಾರುತ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ವಿತರಣಾ ಮೂಲಸೌಕರ್ಯ ಮರುಸ್ಥಾಪನೆ ಕಾಮಗಾರಿಗಳನ್ನು ಕೈಗೊಳ್ಳಲು ಹಾಗೂ ಶೀಘ್ರವಾಗಿ ವಿದ್ಯುತ್ ಪೂರೈಕೆಗೆ 500 ಕೌಶಲ್ಯಯುತ ಲೈನ್‌ಮನ್‌ಗಳು, ಕ್ರೇನ್ ಮತ್ತು ಅರ್ಥ್ ಆಗರ್‌ಗಳನ್ನು ಹೊಂದಿರುವ 15 ಪಾಲ್ಫಿಂಗರ್ ಲಾರಿಗಳು ಹಾಗೂ 25 ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳನ್ನು ರವಾನಿಸುತ್ತಿದೆ. ಈ ತಂಡಗಳನ್ನು ತುರ್ತು ಸ್ಥಿತಿ ಆಧಾರದ ಮೇಲೆ ಸಜ್ಜುಗೊಳಿಸಲಾಗಿದ್ದು, ಸೋಮವಾರ ಮಧ್ಯಾಹ್ನವೇ ಆಂಧ್ರ ಪ್ರದೇಶಕ್ಕೆ ಪಯಣ ಬೆಳೆಸಿದ್ದು, ಮಧ್ಯರಾತ್ರಿಯ ತಲುಪಿವೆ. ಪರಿಣಾಮಕಾರಿ ನಿಯೋಜನೆ ಮತ್ತು ಸಮನ್ವಯಕ್ಕಾಗಿ, ಪ್ರತಿ ಎಸ್ಕಾಂ ಆಂಧ್ರ ಪ್ರದೇಶದ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲು ಒಬ್ಬ ಸಂಪರ್ಕ ಅಧಿಕಾರಿಯನ್ನು ನೇಮಿಸಲಾಗಿದೆ.

ಲೈನ್‌ಮನ್‌ಗಳನ್ನು ತಲಾ 10 ಸದಸ್ಯರ ತಂಡಗಳಾಗಿ ವಿಂಗಡಿಸಲಾಗಿದ್ದು, ಪ್ರತಿಯೊಂದು ತಂಡಕ್ಕೂ ಒಬ್ಬ ಕಿರಿಯ ಎಂಜಿನಿಯರ್ (ಎಇ) / ಸಹಾಯಕ ಎಂಜಿನಿಯರ್ ನೇತೃತ್ವ ವಹಿಸುತ್ತಾರೆ.

ನಿಯೋಜಿತ ತಂಡಗಳ ಒಟ್ಟಾರೆ ಮೇಲ್ವಿಚಾರಣೆ ಮತ್ತು ಸಮನ್ವಯಕ್ಕಾಗಿ ಪ್ರತಿ O&M ವೃತ್ತದಿಂದ ಒಬ್ಬ ಕಾರ್ಯನಿರ್ವಾಹಕ ಎಂಜಿನಿಯರ್ (ಇಇ) ಅವರನ್ನು ನಿಯೋಜಿಸಲಾಗಿದೆ.

ಕಾಮಗಾರಿ ಸ್ಥಳಗಳಲ್ಲಿ ಉಪಕರಣಗಳ ಪರಿಣಾಮಕಾರಿ ಬಳಕೆಯನ್ನು ಖಚಿತ ಪಡಿಸಿಕೊಳ್ಳಲು, ಕ್ರೇನ್ ಮತ್ತು ಅರ್ಥ್ ಆಗರ್‌ಗಳನ್ನು ಹೊಂದಿರುವ ಪಾಲ್ಫಿಂಗರ್ ಲಾರಿಗಳು ಹಾಗೂ ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳ ಜೊತೆಗೆ ಅವುಗಳ ಚಾಲಕರು/ ಆಪರೇಟರ್‌ಗಳು ಸಹ ತೆರಳಲಿದ್ದಾರೆ. ನಿಯೋಜಿತ ಸಿಬ್ಬಂದಿಯ ಪ್ರಯಾಣ, ವಸತಿ ಮತ್ತು ಇತರ ಅಗತ್ಯ ವ್ಯವಸ್ಥೆಗಳ ಅನಿರೀಕ್ಷಿತ ವೆಚ್ಚಗಳನ್ನು ಭರಿಸಲು ಅಗತ್ಯ ತುರ್ತು ನಿಧಿ ನೆರವನ್ನು (contingency support) ಸಹ ಒದಗಿಸಲಾಗುತ್ತದೆ.

ಈ ಸಮಯೋಚಿತ ನೆರವು ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ "ನೆರೆಹೊರೆಯವರಿಗೆ ಮೊದಲ ಆದ್ಯತೆ" (Neighbour first) ತತ್ವದಡಿ ಆಂಧ್ರಪ್ರದೇಶಕ್ಕೆ ಬೆಂಬಲ ನೀಡುವ ಮತ್ತು ಸಂಕಷ್ಟದಲ್ಲಿರುವ ಜನರಿಗೆ ಅಗತ್ಯ ವಿದ್ಯುತ್ ಸೇವೆಯನ್ನು ತ್ವರಿತವಾಗಿ ಮರು ಸ್ಥಾಪಿಸುವಲ್ಲಿ ಕರ್ನಾಟಕದ ಬದ್ಧತೆಗೆ ಸಾಕ್ಷಿಯಾಗಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 204,